21 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 21 | ಸಂಚಿಕೆ 305 | ನವದೆಹಲಿ | ಬೆಲೆ ₹ 10 | ಮೇ 4. 2024, ಶನಿವಾರ

## ಕೇಜ್ರಿವಾಲ್ ಮಧ್ಯಂತರ ಜಾಮೀನು ಅರ್ಜಿ ಪರಿಗಣನೆ: ಸುಪ್ರೀಂ

**ನವದೆಹಲಿ, ಮೇ 03:** ಪ್ರಕರಣದ ತನಿಖೆ ವಿಳಂಬವಾಗುವುದಾದರೆ ಲೋಕಸಭೆ ಚುನಾವಣೆ ಉದ್ದೇಶಗಳ ಹಿನ್ನಲೆ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಮಧ್ಯಂತರ ಜಾಮೀನು ಅರ್ಜಿಯನ್ನು ಪರಿಗಣಿಸಬಹುದಾಗಿದೆ ಎಂದು ಸುಪ್ರೀಂಕೋರ್ಟ್ ಮಹತ್ವದ ಅಭಿಪ್ರಾತ ವ್ಯಕ್ತಪಡಿಸಿದೆ.

ಹೊಸ ಅಬಕಾರಿ ನೀತಿಯಲ್ಲಿ ನಡೆದಿದೆ ಎನ್ನಲಾದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಬಂಧನಕೊಳ್ಳಪಟ್ಟ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ತಮ್ಮ ಬಂಧನ ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾ ಸಂಜೀವ್ ಖನ್ನಾ ನೇತೃತ್ವದ ದ್ವಿ ಸದಸ್ಯ ಪೀಠ ಈ ಅಭಿಪ್ರಾಯ ವ್ಯಕ್ತಪಡಿಸಿದೆ.

ಸುಧೀರ್ಘ ವಿಚಾರಣೆ ಆಲಿಸಿದ ಪೀಠ ಇಂದು ವಿಚಾರಣೆ ಅಂತ್ಯಗೊಳಿಸಲು ಸಾಧ್ಯವಿಲ್ಲ ಮಂಗಳವಾರ ಈ ಬಗ್ಗೆ ವಿಚಾರಣೆ ಮುಂದುವರಿಸುತ್ತೇವೆ, ನಾವು ಮಧ್ಯಂತರ ಜಾಮೀನಿನ ಪ್ರಶ್ನೆಯನ್ನು ಪರಿಗಣಿಸಬಹುದು. ಚುನಾವಣೆಯ ಕಾರಣದಿಂದಾಗಿ ನಾವು ಆ ಭಾಗದಲ್ಲಿ ಕೇಳಬಹುದು ಎಂದು ನ್ಯಾಯಮೂರ್ತಿ ಖನ್ನಾ ಅವರು ವಾದವನ್ನು ಮುಕ್ತಾಯಗೊಳಿಸುವಾಗ ಹೆಚ್ಚುವರಿ ಸಾಲಿಸಿಟರ್ ಜನರಲ್ ಎಸ್ವಿ ರಾಜು ಅವರಿಗೆ ತಿಳಿಸಿದರು.

ಇದಕ್ಕೂ ಮೊದಲು ಕೇಜ್ರಿವಾಲ್ ಪರ ವಾದ ಮಂಡಿಸಿದ್ದ ಹಿರಿಯ ವಕೀಲ ಅಭಿಷೇಕ್ ಮನುಸಿಂಘ್ವಿ, ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆಯ ಸೆಕ್ಷನ್ 50 ರ ಅಡಿಯಲ್ಲಿ ಸಮನ್ಸ್ ಪಡೆದ ವ್ಯಕ್ತಿಯು ಸ್ವಯಂಚಾಲಿತವಾಗಿ ಆರೋಪಿಯ ಪಾತ್ರವನ್ನು ವಹಿಸುವುದಿಲ್ಲ ಎಂಬುದು ಖುದ್ದು ಇಡಿ ನಿಲುವಾಗಿದೆ. ಮಾ.16 ರಂದು ಇಡಿ ನೀಡಿದ ಸಮನ್ಸ್ ಪ್ರಕಾರ, ಕೇಜ್ರಿವಾಲ್ ಆರೋಪಿಯಾಗಿರಲಿಲ್ಲ, ಮಾ.16ರವರೆಗೆ ಆರೋಪಿ ಸ್ಥಾನದಲ್ಲಿಲ್ಲ ಇರದ ಕೇಜ್ರಿವಾಲ್ ಏಕಾಏಕಿ ಮಾ.21ರಂದು ಅವರನ್ನು ಬಂಧಿಸಿದಾಗ ಅವರು ಆರೋಪಿ ಹೇಗಾದರು. ಹೇಳಲು ಇಡಿ ಬಳಿ ಯಾವುದೇ ಹೊಸ ವಿಷಯಗಳಿಲ್ಲ ಎಂದು ಹೇಳಿದರು.

ಪ್ರಕರಣಕ್ಕೆ ಸಂಬಂಧಿಸಿದಂತೆ ಇಡಿ ಮತ್ತು ಸಿಬಿಐ ಪರ ವಕೀಲರು ವಾದ ಮಂಡಿಸಬೇಕಿದೆ. ಆದರೆ ಜಾಮೀನು ನೀಡುವ ಸುಪ್ರೀಂಕೋರ್ಟ್ ಅಭಿಪ್ರಾಯಕ್ಕೆ ಪ್ರತಿಕ್ರಿಯಿಸಿದ ಎಎಸ್ಜಿ ರಾಜು, ಸುಪ್ರೀಂ ಕೋರ್ಟ್ನಿಂದ ಜಾಮೀನು ಪಡೆದ ನಂತರ ಎಎಪಿ ಸಂಸದ ಸಂಜಯ್ ಸಿಂಗ್ ನೀಡಿದ ಹೇಳಿಕೆಗಳನ್ನು ಗಮನಿಸುವಂತೆ ನ್ಯಾಯಾಲಯಕ್ಕೆ ಮನವಿ ಮಾಡಿದರು. ವಿಚಾರಣೆ ಮಂಗಳವಾರಕ್ಕೆ ಮುಂದೂಡಿಕೆಯಾಯಿತು.

# ರಾಯ್‌ಬರೇಲಿಯಿಂದ ರಾಹುಲ್ ಗಾಂಧಿ ಕಣಕ್ಕೆ

## ಅಮೇಥಿಯಿಂದ ಕಿಶೋರಿಲಾಲ್ ಶರ್ಮಾ ನಾಮಪತ್ರ ಸಲ್ಲಿಕೆ

**ನವದೆಹಲಿ, ಮೇ 03:** ಕಾಂಗ್ರೆಸ್ ನಾಯಕಿ ಸೋನಿಯಗಾಂಧಿ ಪ್ರತಿನಿಧಿಸುತ್ತಿದ್ದ ಉತ್ತರ ಪ್ರದೇಶದ ರಾಯ್‌ಬರೇಲಿ ಕ್ಷೇತ್ರದಿಂದ ರಾಹುಲ್ ಗಾಂಧಿ ನಾಮಪತ್ರ ಸಲ್ಲಿಸಿದ್ದಾರೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ, ಸೋನಿಯಗಾಂಧಿ, ಪ್ರಿಯಾಂಕಾಗಾಂಧಿ ಹಾಗೂ ರಾಬರ್ಟ್ ವಾದ್ರಾ ಸಮ್ಮುಖದಲ್ಲಿ ರಾಹುಲ್ ನಾಮಪತ್ರ ಸಲ್ಲಿಸಿದ್ದಾರೆ.

ಗಾಂಧಿ ಕುಟುಂಬದ ಪ್ರತಿಷ್ಠಿತ ಕ್ಷೇತ್ರಗಳಾದ ರಾಯ್ ಬರೇಲಿ ಮತ್ತು ಅಮೇಥಿಯಿಂದ ಅಭ್ಯರ್ಥಿಗಳ್ಯಾರು ಎನ್ನುವ ಕುತೂಹಲ ಎಲ್ಲಡೆ ಇತ್ತು. ಇಂದು ಬೆಳಗ್ಗೆ ಪ್ರಕಟಣೆ ಹೊರಡಿಸಿದ ಎಐಸಿಸಿ ರಾಯ್‌ಬರೇಲಿಯಿಂದ ರಾಹುಲ್ ಗಾಂಧಿ ಮತ್ತು ಅಮೇಥಿಯಿಂದ ಗಾಂಧಿ ಪರಿವಾರದ ಆಪ್ತ ಕಿಶೋರಿ ಲಾಲ್ ಶರ್ಮಾ ಹೆಸರನ್ನು ಘೋಷಿಸಲಾಯಿತು.

ಅಮೇಥಿಯಲ್ಲಿ ಶರ್ಮಾ ಪರ ರೋಡ್‌ಶೋ ನಡೆಸುವ ಮೂಲಕ ಪ್ರಿಯಾಂಕಾ ಗಾಂಧಿ ನಾಮಪತ್ರ ಕಾರ್ಯಕ್ರಮದಲ್ಲಿ ಭಾಗಿಯಾದರು. ಬಳಿಕ ರಾಯ್ ಬರೇಲಿಯಲ್ಲಿ ಬೃಹತ್ ರೋಡ್‌ಶೋ ನಡೆಸುವ ಮೂಲಕ ಕಾಂಗ್ರೆಸ್ ನಾಯಕರು ರಾಹುಲ್ ಗಾಂಧಿ ನಾಮಪತ್ರ ಸಲ್ಲಿಕೆ ಕಾರ್ಯಕ್ರಮದಲ್ಲಿ ಭಾಗಿಯಾದರು. ಸಮಾಜವಾದಿ ಪಕ್ಷದ ಕಾರ್ಯಕರ್ತರು ಭಾಗಿಯಾಗುವ



ಮೂಲಕ ಮತ್ತಷ್ಟು ಶಕ್ತಿ ತುಂಬುವ ಕೆಲಸ ಮಾಡಿದರು. ಪ್ರಿಯಾಂಕಾ ಗಾಂಧಿ ಅವರು ಅಮೇಥಿ ಅಥವಾ ರಾಯ್ ಬರೇಲಿಯಿಂದ ಲೋಕಸಭೆ ಚುನಾವಣೆಗೆ ಸ್ಪರ್ಧಿಸುತ್ತಿಲ್ಲ. ಆದರೆ, 25 ವರ್ಷಗಳಲ್ಲಿ ಗಾಂಧಿಯೇತರ ಅಭ್ಯರ್ಥಿ ಅಮೇಥಿಯಿಂದ ಸ್ಪರ್ಧಿಸುತ್ತಿರುವುದು ಇದೇ ಮೊದಲು. 1967 ರಲ್ಲಿ ಲೋಕಸಭಾ ಕ್ಷೇತ್ರವಾಗಿ ರಚನೆಯಾದಾಗಿನಿಂದ, ಅಮೇಥಿ ಸುಮಾರು 31 ವರ್ಷಗಳ ಕಾಲ ಗಾಂಧಿ ಕುಟುಂಬದಿಂದ ಪ್ರತಿನಿಧಿಸಲ್ಪಟ್ಟಿದೆ.

## ಚುನಾವಣೆಗೂ ಮೊದಲೇ ಸೋಲು ಒಪ್ಪಿಕೊಂಡ ಕಾಂಗ್ರೆಸ್: ಸ್ಮೃತಿ ಇರಾನಿ

ಗಾಂಧಿಗೆ ಸ್ಮೃತಿ ಇರಾನಿ ಟಾಂಗ್ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅಮೇಥಿ ಕ್ಷೇತ್ರದಿಂದ ಹಿಂದೆ ಸರಿದ ಬೆನ್ನಲ್ಲೇ ಬಿಜೆಪಿ ವಾಕ್ಸಮರ ಶುರುಮಾಡಿದೆ.

ಇದು ಲೋಕಸಭಾ ಚುನಾವಣೆಗೂ ಮೊದಲೇ ಕಾಂಗ್ರೆಸ್ ಸೋಲನ್ನು ಒಪ್ಪಿಕೊಂಡಿದೆ ಎಂದು ಕೇಂದ್ರ ಸಚಿವೆ ಸ್ಮೃತಿ ಇರಾನಿ ಶುಕ್ರವಾರ ಹೇಳಿದ್ದಾರೆ. ಕಾಂಗ್ರೆಸ್ ನಿಷ್ಠಾವಂತ ಕೆ.ಎಲ್.ಶರ್ಮಾ ಈ ಕ್ಷೇತ್ರದಿಂದ ನಾಮಪತ್ರ ಸಲ್ಲಿಸಿದ್ದಕ್ಕೆ ಪ್ರತಿಕ್ರಿಯಿಸಿದ ಅವರು, ಈ ಕ್ಷೇತ್ರದಲ್ಲಿ ಗೆಲುವಿನ ಅವಕಾಶವಿದೆ ಎಂದು ರಾಹುಲ್ ಗಾಂಧಿ ಭಾವಿಸಿದ್ದರೆ, ಇಲ್ಲಿಂದ ಸ್ಪರ್ಧಿಸುತ್ತಿದ್ದರು. ಸೋಲಿನ ಅರಿವಾಗಿ ಅವರ ಆಪ್ತರನ್ನು ಕಣಕ್ಕಿಳಿಸಿದ್ದಾರೆ. ಮೇ 20 ರಂದು ನಡೆಯಲಿರುವ ಚುನಾವಣೆಯಲ್ಲಿ ಮತ್ತೆ ಗೆಲುವು ಸಾಧಿಸುವುದಾಗಿ ಅವರು ಪ್ರತಿಪಾದಿಸಿದರು. ಅಮೇಥಿ ಜನರು ನರೇಂದ್ರ ಮೋದಿ ಸರ್ಕಾರದಡಿ ಅಭಿವೃದ್ಧಿಯನ್ನು ಕಂಡಿದ್ದಾರೆ, ಕಳೆದ 50 ವರ್ಷಗಳಲ್ಲಿ ಇದು ಏಕೆ ಆಗಲಿಲ್ಲ ಎಂದು ಅಶ್ಚರ್ಯ ವ್ಯಕ್ತಪಡಿಸಿದ



ಅವರು, ಈ ಪ್ರದೇಶದಲ್ಲಿ ಗಾಂಧಿ ಕುಟುಂಬದಲ್ಲಿ ಏಕೆ ಹೆಚ್ಚಿನ ಹಾನಿಯನ್ನುಂಟು ಮಾಡಿದರು ಎಂದು ಜನತೆ ಪ್ರಶ್ನಿಸುತ್ತಿದ್ದಾರೆ ಎಂದು ಇರಾನಿ ಕೇಳಿದರು.

ವಯನಾಡಿದಲ್ಲಿ ಚುನಾವಣೆ ನಂತರ ರಾಹುಲ್ ಗಾಂಧಿ ಹೊಸ ಕ್ಷೇತ್ರ ನೋಡಿಕೊಳ್ಳಬೇಕಾಗುತ್ತದೆ ಎಂದು ಪ್ರಧಾನಿ ಮೋದಿ ಈಗಾಗಲೇ ಭವಿಷ್ಯ ನುಡಿದಿದ್ದಾರೆ. ಇಂದು ಅದು ಸಂಭವಿಸುವುದನ್ನು ನೀವು ನೋಡುತ್ತಿದ್ದೀರಿ ಎಂದು ಇರಾನಿ ಹೇಳಿದರು.

# ಹೆದರಬೇಡಿ, ಹೆದರಿ ಓಡಬೇಡಿ ರಾಹುಲ್ ಗಾಂಧಿ: ಪ್ರಧಾನಿ ಮೋದಿ ವ್ಯಂಗ್ಯ

**ನವದೆಹಲಿ, ಮೇ 03:** ಕೇರಳದ ವಯನಾಡಿನಲ್ಲಿ ಚುನಾವಣೆ ಬಳಿಕ ರಾಹುಲ್ ಗಾಂಧಿ ಬೇರೆಡೆ ಮುಖ ಮಾಡಲಿದ್ದಾರೆ ಎಂದು ನಾನು ಮೊದಲೇ ಹೇಳಿದ್ದೆ ಈಗ ಅಮೇಥಿಯಲ್ಲೂ ಸೋಲಿನ ಭಯ ಕಂಡಿರುವ ಅವರು ರಾಯ್ ಬರೇಲಿಯಿಂದ ಸ್ಪರ್ಧಿಸುತ್ತಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ವ್ಯಂಗ್ಯ ಮಾಡಿದ್ದಾರೆ. ಪಶ್ಚಿಮ ಬಂಗಾಳದ ಬರ್ಧಮಾನ್-ದುರ್ಗಾಪುರದಲ್ಲಿ ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಅವರು, ವಯನಾಡಿನಲ್ಲಿ ಸೋಲಿನ ಬಗ್ಗೆ ತಿಳಿದಿರುವ ರಾಹುಲ್ ಗಾಂಧಿ ಮತ್ತೊಂದು ಕ್ಷೇತ್ರಕ್ಕೆ ಹೋಗಿದ್ದಾರೆ.

ಅಮೇಥಿಯಿಂದ ಸ್ಪರ್ಧಿಸಲಿದ್ದಾರೆ ಎಂದು ಅವರ ಬೆಂಬಲಿಗರು ಹೇಳಿದರು ಆದರೆ ಅವರು ಆಯ್ಕೆ ಮಾಡಿಕೊಂಡಿರುವುದು ಯಾವ ಕ್ಷೇತ್ರ ರಾಯಾಬರೇಲಿ, ಅಮೇಥಿ ಕ್ಷೇತ್ರದಲ್ಲಿ ಸ್ಪರ್ಧೆ ಮಾಡೊಕೆ ರಾಹುಲ್ ಗೆ ಭಯ ಹೀಗಿದ್ದರೂ ಸಹ ರಾಹುಲ್ ಗಾಂಧಿ ಹೇಳೋದು ಹೆದರಬೇಡಿ ಅಂತಾ, ನಾನು ರಾಹುಲ್ ಗಾಂಧಿಗೆ ಹೇಳುತ್ತೇನೆ ಹೆದರಬೇಡಿ, ಓಡಿಹೋಗಬೇಡಿ ಎಂದು ಕುಟುಕಿದರು. ಗಾಂಧಿ ಕುಟುಂಬದ ನಡೆದಿಂದ ಚುನಾವಣಾ ಫಲಿತಾಂಶ ಸ್ಪಷ್ಟವಾಗಿದೆ, ಯಾವುದೇ ಸಮೀಕ್ಷೆ ನಡೆಸುವ ಅಗತ್ಯ ಇಲ್ಲ. ಕಾಂಗ್ರೆಸ್ ಮೊದಲೇ ಕಡಿಮೆ ಸ್ಥಾನಗಳಲ್ಲಿ ಸ್ಪರ್ಧಿಸಿದೆ,



ಕಳೆದ ಬಾರಿಯಷ್ಟು ಸ್ಥಾನಗಳು ಈ ಬಾರಿ ಕಾಂಗ್ರೆಸ್‌ಗೆ ಸಿಗುವುದಿಲ್ಲ ಎಂದು ಹೊಸ ಸವಾಲು ಹಾಕಿದರು. ಸಂವಿಧಾನವನ್ನು ಬದಲಾಯಿಸಿ ದಲಿತ ಮತ್ತು ಇತರ ಹಿಂದುಳಿದ ವರ್ಗಗಳ (ಒಬಿಸಿ) ಕೋಟಾ ಕಸಿದುಕೊಂಡು ಜಿಹಾದಿ ವೋಟ್ ಬ್ಯಾಂಕ್‌ಗೆ ಮೀಸಲಾತಿ ನೀಡಲು ಕಾಂಗ್ರೆಸ್ ಬಯಸಿದೆ ಅವರಿಗೆ (ವಿರೋಧ ಪಕ್ಷಗಳಿಗೆ ) ಅಭಿವೃದ್ಧಿಯನ್ನು ತರಲು ಸಾಧ್ಯವಿಲ್ಲ, ಅವರಿಗೆ ಮತಕ್ಕಾಗಿ ಸಮಾಜವನ್ನು ವಿಭಜಿಸುವುದು ಹೇಗೆ ಎಂದು ತಿಳಿದಿದೆ ಎಂದು ವಾಗ್ದಾಳಿ ನಡೆಸಿದರು. ತೃಣಮೂಲ ಶಾಸಕ ಹುಮಾಯೂನ್ ಕಬೀರ್ ಅವರನ್ನು ಉಲ್ಲೇಖಿಸಿದ ಪ್ರಧಾನಿ, ಟಿಎಂಸಿ ಶಾಸಕರೊಬ್ಬರು ಬಹಿರಂಗ ಬೆದರಿಕೆ ಹಾಕಿದರು.

ಅವರು ಕೇವಲ ಎರಡು ಗಂಟೆಗಳಲ್ಲಿ ಭಾಗೀರಥಿಯಲ್ಲಿ ಹಿಂದೂಗಳನ್ನು ಮುಳುಗಿಸುತ್ತಾರೆ ಎಂದು ಹೇಳಿದರು. ಇದು ಏನು ಭಾಷೆ? ಇದು ಯಾವ ರಾಜಕೀಯ ಸಂಸ್ಕೃತಿ ಬಂಗಾಳದಲ್ಲಿ ಹಿಂದೂಗಳಿಗೆ ಏನಾಗುತ್ತಿದೆ? ಪಶ್ಚಿಮ ಬಂಗಾಳದಲ್ಲಿ ತೃಣಮೂಲ ಹಿಂದೂಗಳನ್ನು ಎರಡನೇ ಪ್ರಜೆಯನ್ನಾಗಿ ಮಾಡಿದೆ ಎಂದು ತೋರುತ್ತಿದೆ ಎಂದರು. ಎಡಪಕ್ಷಗಳು, ತೃಣಮೂಲ ಕಾಂಗ್ರೆಸ್ ಮತ್ತು ಕಾಂಗ್ರೆಸ್ ಪಕ್ಷಕ್ಕೆ ಅಭಿವೃದ್ಧಿಯ ದೃಷ್ಟಿ ಇಲ್ಲ, ಎಡಪಕ್ಷಗಳು ತ್ರಿಪುರಾವನ್ನು ಸಂಪೂರ್ಣವಾಗಿ ನಾಶಪಡಿಸಿದರು. ಅವರು 35 ವರ್ಷಗಳ ಕಾಲ ಸೇವೆ ಸಲ್ಲಿಸಿದರು. ಕಳೆದ ಐದು ವರ್ಷಗಳಲ್ಲಿ ಬಿಜೆಪಿ ತ್ರಿಪುರವನ್ನು ಸಂಪೂರ್ಣವಾಗಿ ಬದಲಾಯಿಸಿದೆ. ನಿಮ್ಮ ಕನಸುಗಳನ್ನು ನನಸಾಗಿಸುವುದು ನನ್ನ ಕನಸು, ನಿಮ್ಮೆಲ್ಲರಿಗೂ ಮತ್ತು ದೇಶಕ್ಕೂ ಸೇವೆ ಸಲ್ಲಿಸಲು ನನಗೆ ಆಶೀರ್ವಾದಿಸಬೇಕು. ನನ್ನ ಬಳಿ ಏನೂ ಇಲ್ಲ ನೀವೆಲ್ಲರೂ ಕುಟುಂಬದವರು, ನಿಮ್ಮಗಾಗಿ ನಿಮ್ಮ ಮಕ್ಕಳಿಗಾಗಿ ಮಾತ್ರ ಕೆಲಸ ಮಾಡುತ್ತೇನೆ ಎಂದರು.



**ರಾಯ್‌ಬರೇಲಿ ಲೋಕಸಭಾ ಕ್ಷೇತ್ರದಿಂದ ನಾಮಪತ್ರ ಸಲ್ಲಿಸಿರುವ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಬಿಜೆಪಿ ಅಭ್ಯರ್ಥಿ ದಿನೇಶ್ ಪ್ರಸಾದ್ ಸಿಂಗ್ ವಿರುದ್ಧ ಭಾರಿ ಅಂತರದಿಂದ ಸೋಲನುಭವಿಸಲಿದ್ದಾರೆ ಎಂದು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಭವಿಷ್ಯ ನುಡಿದಿದ್ದಾರೆ. ಚಿಕ್ಕೋಡಿಯಲ್ಲಿ ಮಾತನಾಡಿದ ಅವರು ಸೋನಿಯಾ ಗಾಂಧಿ ಅವರು ತಮ್ಮ ಪುತ್ರ ರಾಹುಲ್‌ಗೆ 20 ಬಾರಿ ಚಾಲನೆ ನೀಡಿದರು, ಆದರೆ ಅವರು ಯಾವಾಗಲೂ ವಿಫಲರಾಗಿದ್ದಾರೆ, ರಾಹುಲ್ ಅವರನ್ನು 21ನೇ ಬಾರಿಗೆ ಅವಕಾಶ ಸಿಕ್ಕಿದೆ. ಈಗಲೂ ರಾಯ್‌ಬರೇಲಿಯಲ್ಲಿ ವಿಫಲವಾಗುವುದನ್ನು ನಾವು ನೋಡುತ್ತೇವೆ ಎಂದರು.**

# ಆಡಳಿತಕ್ಕೆ ಬಂದ 10 ತಿಂಗಳಲ್ಲಿ ಕರ್ನಾಟಕವನ್ನು ಕಾಂಗ್ರೆಸ್ ಹಾಳುಗೆಡವಿದೆ

**ಬೆಂಗಳೂರು, ಮೇ, 3;** ಕರ್ನಾಟಕದಲ್ಲಿ ಆಡಳಿತಕ್ಕೆ ಬಂದ 10 ತಿಂಗಳಲ್ಲಿ ಇಡೀ ರಾಜ್ಯವನ್ನು ಕಾಂಗ್ರೆಸ್ ಹಾಳುಗೆಡವಿದ್ದು, ಕೇಂದ್ರದಲ್ಲಿ ನರೇಂದ್ರ ಮೋದಿ ಆಡಳಿತ ಅತ್ಯುತ್ತಮವಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಟೀಕಿಸಿದ್ದಾರೆ.

ರಾಜ್ಯದಲ್ಲಿ ಎರಡನೇ ಹಂತದ ಲೋಕಸಭಾ ಚುನಾವಣಾ ಪ್ರಚಾರ ಸಂದರ್ಭದಲ್ಲಿ ಚಿಕ್ಕೋಡಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಎಸ್ಡಿಪಿಐ ಬೆಂಬಲದೊಂದಿಗೆ ಕಾಂಗ್ರೆಸ್ ಆಡಳಿತಕ್ಕೆ ಬರುತ್ತಿದ್ದಂತೆ ಬೆಂಗಳೂರು ರಾಮೇಶ್ವರಂ ಕೆಫೆ ಸ್ಫೋಟ ಸಂಭವಿಸಿತು ಎಂದರು. ಈ ಸ್ಫೋಟವನ್ನು ಗ್ಯಾಸ್ ಸಿಲಿಂಡರ್ ಸ್ಫೋಟ ಎಂದು ಕಾಂಗ್ರೆಸ್ ಹೇಳಿತು, ನಂತರ ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್ಐಎ) ತನಿಖೆಯನ್ನು ಕೈಗೊತ್ತಿಕೊಳ್ಳುತ್ತಿದ್ದಂತೆ ಇದು ಭಯೋತ್ಪಾದಕರು ನಡೆಸಿದ ದುಷ್ಕೃತ್ಯ ಎಂಬುದನ್ನು ಬೆಳಕಿಗೆ ತಂದಿತು. ಹುಬ್ಬಳ್ಳಿಯಲ್ಲಿ ಧರ್ಮಾಂತರಕ್ಕೆ ಒಪ್ಪದ ಒಬ್ಬ ಹೆಣ್ಣು ಮಗಳನ್ನು ಕೊಲೆ ಮಾಡಲಾಯಿತು, ಕಾಂಗ್ರೆಸ್ ಈ ಘಟನೆಯನ್ನು ಖಾಸಗಿ ವಿಷಯ ಎಂಬಂತೆ ಬಿಂಬಿಸಿತು, ಈ ಕೊಲೆ ಘಟನೆಯನ್ನು ಸಿಬಿಐ ತನಿಖೆಗೆ ಕೊಟ್ಟರೆ, ಕೊಲೆ ಅಪರಾಧಿಗಳನ್ನು ಉಲ್ಟಾ ನೇತುಹಾಕಿ, ಶಿಕ್ಷೆಗೆ ಗುರಿಪಡಿಸುವ ಮೂಲಕ ನೇಹಾ ಹಿರೇಮಠ್ ಅವರಿಗೆ ನ್ಯಾಯ ಕೊಡಿಸುವ ಕೆಲಸವನ್ನು ಕೇಂದ್ರ ಸರ್ಕಾರ ಮಾಡಲಿದೆ ಎಂದರು. ರಾಜ್ಯದಲ್ಲಿ ನೀರು ಮತ್ತು ವಿದ್ಯುತ್ ಸಮಸ್ಯೆ ತೀವ್ರವಾಗಿದೆ, ಕಾಂಗ್ರೆಸ್‌ಗೆ ಮತ ಹಾಕದಿದ್ದರೆ, ವಿದ್ಯುತ್ ನಿಲ್ಲಿಸುವುದಾಗಿ ಜನರಿಗೆ ಬೆದರಿಕೆ ಹಾಕಲಾಗುತ್ತಿದೆ. ರಾಜ್ಯದಲ್ಲಿ ಬಿಜೆಪಿ ಆಡಳಿತವಿದ್ದಾಗ, ಕೇಂದ್ರ ಸರ್ಕಾರ ರೈತ ಸಮ್ಮಾನ್ ನಿಧಿ ಯೋಜನೆಯಡಿ ನೀಡುತ್ತಿದ್ದ 6 ಸಾವಿರ ರೂ. ಜೊತೆಗೆ ಹೆಚ್ಚುವರಿಯಾಗಿ 4 ಸಾವಿರ ರೂ. ಸೇರಿ ಒಟ್ಟು 10 ಸಾವಿರ ರೂ.ಗಳನ್ನು ರೈತರಿಗೆ ನೀಡುತ್ತಿತ್ತು. ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತಿದ್ದಂತೆ 4 ಸಾವಿರ ರೂ.ಗಳನ್ನು ಕಡಿತ ಮಾಡುವ ಮೂಲಕ ರೈತ ವಿರೋಧಿ ಕೆಲಸ ಮಾಡಿತು. ಕೇಂದ್ರದ ಎನ್‌ಡಿಎ ಸರ್ಕಾರ ಉತ್ತರ ಕರ್ನಾಟಕದ ಅಭಿವೃದ್ಧಿಗೆ ಹಲವು ಯೋಜನೆಗಳನ್ನು ನೀಡಿದೆ, 13 ಸಾವಿರ ಕೋಟಿ ರೂ. ವೆಚ್ಚದಲ್ಲಿ ರಾಷ್ಟ್ರೀಯ ಹೆದ್ದಾರಿಗಳನ್ನು ನಿರ್ಮಿಸಲಾಗುತ್ತಿದೆ, 930 ಕೋಟಿ ರೂ. ವೆಚ್ಚಲ್ಲಿ ಹೊಸ ರೈಲ್ವೆ ಮಾರ್ಗಗಳ ನಿರ್ಮಾಣಕ್ಕೆ ಮುಂದಾಗಿದೆ. ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ 11 ಸಾವಿರ ಮನೆಗಳನ್ನು ನಿರ್ಮಿಸಿಕೊಡಲಾಗಿದೆ, ಬಡಕುಟುಂಬದ ಪ್ರತಿ ವ್ಯಕ್ತಿಗೆ ತಿಂಗಳಿಗೆ 5 ಕೆಜಿ ಉಚಿತ ಆಹಾರಧಾನ್ಯ ನೀಡಲಾಗುತ್ತಿದೆ, ಮೂರು ಲಕ್ಷ ಮನೆಗಳಿಗೆ ನಲ್ಲಿ ನೀರು ಸಂಪರ್ಕ ಒದಗಿಸಲಾಗಿದೆ, ಉಜ್ವಲ ಯೋಜನೆಯಡಿ ಮೂರು ಲಕ್ಷ ಕುಟುಂಬಕ್ಕೆ ಉಚಿತ ಗ್ಯಾಸ್ ಸಂಪರ್ಕ ಒದಗಿಸಲಾಗಿದೆ, ಉಚಿತ ಶೌಚಾಲಯ ನಿರ್ಮಿಸಿ ಕೊಡಲಾಗಿದೆ.

ಉತ್ತರ ಕರ್ನಾಟಕದಲ್ಲಿ ಎರಡು ಲಕ್ಷ ರೈತರು ಕಿಸಾನ್ ಸಮ್ಮಾನ್ ನಿಧಿ ಫಲಾನುಭವಿಗಳಿದ್ದಾರೆ, ಕಬ್ಬು ಬೆಳಗಾರರಿಗೆ ಅನುಕೂಲ ಮಾಡಲು ಟನ್ ಕಬ್ಬಿಗೆ 340 ರೂ. ಸಬ್ಸಿಡಿ ಹೆಚ್ಚಳ ಮಾಡಲಾಯಿತು ಎಂದರು. ನರೇಂದ್ರ ಮೋದಿ ಅವರು ಎರಡನೇ ಬಾರಿಗೆ ಪ್ರಧಾನಿಯಾಗಿ ಕಾರ್ಯನಿರ್ವಹಿಸುವಲ್ಲಿ ಕರ್ನಾಟಕದ ಜನರ ಕೊಡುಗೆ ಇದೆ, ಮತ್ತೊಮ್ಮೆ ಮೂರನೇ ಬಾರಿಗೆ ಮೋದಿ ಅವರನ್ನು ಪ್ರಧಾನಿ ಮಾಡಿದರೆ, ದೇಶದ ಆರ್ಥಿಕಸ್ಥಿತಿಯನ್ನು ಜಾಗತಿಕವಾಗಿ ಮೂರನೇ ಸ್ಥಾನಕ್ಕೆ ತರುವ ಪ್ರಯತ್ನ ಮಾಡಲಾಗುವುದು. ಕಾಂಗ್ರೆಸ್ ನೇತೃತ್ವದ ಯುಪಿಎ ಆಡಳಿತ ಸಂದರ್ಭದಲ್ಲಿ 12 ಲಕ್ಷ ಕೋಟಿ ರೂ.ಗಳ ಭ್ರಷ್ಟಾಚಾರ ನಡೆಯಿತು, ಮೋದಿ ಅವರು 13 ವರ್ಷ ಗುಜರಾತ್ ಮುಖ್ಯಮಂತ್ರಿಯಾಗಿ ಹಾಗೂ ಕಳೆದ 10 ವರ್ಷದಿಂದ ದೇಶದ ಪ್ರಧಾನಿಯಾಗಿ ಒಟ್ಟು 23 ವರ್ಷಗಳ ಆಡಳಿತದಲ್ಲಿ ಒಂದೇ ಒಂದು ಭ್ರಷ್ಟಾಚಾರ ಹಗರಣ ಇಲ್ಲ ಎಂದರು. ಮೋದಿ ತಮ್ಮ ಆಡಳಿತಾವಧಿಯಲ್ಲಿ ಒಂದು ದಿನವೂ ರಜೆ ತೆಗೆದುಕೊಳ್ಳದೆ ಕೆಲಸ ಮಾಡುತ್ತಿದ್ದಾರೆ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮೂರು ತಿಂಗಳಿಗೊಮ್ಮೆ ಮೋಜು ಮಾಡಲು ವಿದೇಶ ಪ್ರವಾಸ ಮಾಡುತ್ತಾರೆ ಎಂದು ಟೀಕಿಸಿದರು. ಪರಿವಾರ ವಾದದ ಕಾಂಗ್ರೆಸ್ ಬೇಕೇ, ಅಭಿವೃದ್ಧಿಶೀಲ ಬಿಜೆಪಿ ಬೇಕೆ ಎಂಬುದನ್ನು ಮತದಾರರು ನಿರ್ಧರಿಸಬೇಕು ಎಂದು ಕರೆ ನೀಡಿದರು.

ದೇಶದ ಸುರಕ್ಷತೆ ಹಾಗೂ ಸಮಗ್ರ ಅಭಿವೃದ್ಧಿಗೆ ನರೇಂದ್ರ ಮೋದಿ ನೇತೃತ್ವದ ಎನ್ಡಿಎ ಸರ್ಕಾರ ಅಪಾರ ಕೊಡುಗೆ ನೀಡಿದೆ. ಕಾಂಗ್ರೆಸ್ ಪಕ್ಷ ಓಲೈಕೆ ರಾಜಕಾರಣ ಮತ್ತು ಭ್ರಷ್ಟಾಚಾರದಲ್ಲಿ ಮುಳುಗಿ ಹೋಗಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಗುಜರಾತ್ ಮುಖ್ಯಮಂತ್ರಿಯಾಗಿ ನಂತರ ದೇಶದ ಪ್ರಧಾನಮಂತ್ರಿಯಾಗಿ 23 ವರ್ಷಗಳ ತಮ್ಮ ಸುಧೀರ್ಘ ರಾಜಕೀಯ ಜೀವನದಲ್ಲಿ ಯಾವುದೇ





ವಿಚಾರದಲ್ಲೂ ಕೆಟ್ಟ ಹೆಸರು ಪಡೆದಿಲ್ಲ ಎಂದರು.

ನರೇಂದ್ರ ಮೋದಿ ನೇತೃತ್ವದಲ್ಲಿ ಕೇಂದ್ರ ಸರ್ಕಾರ ಕಳೆದ ಹತ್ತು ವರ್ಷಗಳ ಕಾಲಾವಧಿಯಲ್ಲಿ ದೇಶದ ಸಮಗ್ರ ಅಭಿವೃದ್ಧಿ ಹಾಗೂ ಪರಂಪರೆಯನ್ನು ಉಳಿಸಿ ಬೆಳೆಸುವಲ್ಲಿ ಮಹತ್ವದ ಕಾರ್ಯ ಮಾಡಿದೆ ಎಂದು ಅಮಿತ್ ಶಾ ತಿಳಿಸಿದರು.

# ಉತ್ತರಕನ್ನಡ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲ್ಲುವುದು ನಿಶ್ಚಿತ: ಬಿಜೆಪಿಗೆ ತಕ್ಕ ಪಾಠ ಕಲಿಸಲು ಸಿ.ಎಂ ಕರೆ

**ಉತ್ತರಕನ್ನಡ (ಮುಂಡಗೋಡು) ಮೇ 3 :** ಈ ಬಾರಿ ಉತ್ತರಕನ್ನಡ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆದ್ದೇ ಗೆಲ್ಲುತ್ತದೆ ಎಂದು ಸಿ.ಎಂ.ಸಿದ್ದರಾಮಯ್ಯ ಭರವಸೆ ವ್ಯಕ್ತಪಡಿಸಿದರು. ಉತ್ತರಕನ್ನಡ ಜಿಲ್ಲೆ ಲೋಕಸಭಾ ಕ್ಷೇತ್ರದ ಮುಂಡಗೋಡು ನಲ್ಲಿ ಕಾಂಗ್ರೆಸ್ ಅಭ್ಯರ್ಥಿ ಅಂಜಲಿ ನಿಂಬಾಳ್ಕರ್ ಅವರ ಗೆಲುವಿನ ಸಂದೇಶ ನೀಡಿ ಜನಸಮಾವೇಶದಲ್ಲಿ ಮಾತನಾಡಿದರು. ಉತ್ತರಕನ್ನಡ ಜಿಲ್ಲೆಯ ಜನ ರಾಜಕೀಯವಾಗಿ ಪ್ರಜ್ಞಾವಂತರು. ನುಡಿದಂತೆ ನಡೆಯುವವರನ್ನು ಗುರುತಿಸುವ ಪ್ರಜ್ಞಾವಂತಿಕೆ ಇವರಿಗಿದೆ ಎಂದು ಸಿ.ಎಂ.ಸಿದ್ದರಾಮಯ್ಯ ಮೆಚ್ಚುಗೆ ಸೂಚಿಸಿದರು.

ವೃತ್ತಿಯಲ್ಲಿ ವೈದ್ಯೆ ಆಗಿರುವ ಮರಾಠ ಸಮುದಾಯದ ಸಜ್ಜನ ಮತ್ತು ಜನಪರ ಕಾಳಜಿ ಇರುವ ಮಹಿಳೆ ಈ ಬಾರಿ ನಿಮ್ಮ ಪ್ರತಿನಿಧಿಯಾಗಿದ್ದಾರೆ. ಇವರಿಗೆ ಹೆಚ್ಚು ಮತಗಳ ಅಂತರದಿಂದ ಗೆಲ್ಲಿಸಿ ದೆಹಲಿಗೆ ಕಳುಹಿಸಿ. ನಿಮ್ಮ ಎಲ್ಲಾ ಬೇಡಿಕೆಗಳ ಬಗ್ಗೆ ಪಾರ್ಲಿಮೆಂಟಿನಲ್ಲಿ ಹೋರಠ ನಡೆಸಿ ನಿಮಗೆ ಸ್ಪಂದಿಸುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಸುಳ್ಳರು ಯಾರು, ಭಾರತೀಯರನ್ನು ನಂಬಿಸಿ ದ್ರೋಹ ಬಗೆದವರು ಯಾರು ಎನ್ನುವುದನ್ನು ಅರ್ಥ ಮಾಡಿಕೊಳ್ಳುವಷ್ಟು ತಿಳಿವಳಿಕೆ ಈ ಜಿಲ್ಲೆಯ ಜನತೆಗೆ ಇದೆ. ಹೀಗಾಗಿ ಈ ಬಾರಿ ಅತ್ಯಂತ ಪ್ರಜ್ಞಾವಂತಿಕೆಯಿಂದ



ಮತದಾನ ಮಾಡ್ತಾರೆ ಎಂದು ಖಚಿತವಾಗಿ ನುಡಿದರು. ನನಗೆ ಅಧಿಕಾರ ಕೊಡಿ. 100 ದಿನದಲ್ಲಿ ವಿದೇಶದಲ್ಲಿರುವ ಕಪ್ಪುಹಣ ತಂದು ಪ್ರತಿಯೊಬ್ಬ ಭಾರತೀಯರ ಖಾತೆಗೆ 15 ಲಕ್ಷ ಹಾಕ್ತೀವಿ ಅಂದಿದ್ದ ಮೋದಿ ಹತ್ತತ್ತು ವರ್ಷ ನಿಮಗೆಲ್ಲಾ ಮೂರು ನಾಮ ಹಾಕುತ್ತಾ ತಿರುಗಿದ್ರು. ಇಂಥಾ ಸುಳ್ಳುಕೋರರ ಮುಖ ನೋಡಿ ಮತ ಹಾಕಿದ್ರೆ ನಿಮ್ಮ ಮತಕ್ಕೆ ಗೌರವ ಬರುತ್ತದೆಯೇ ಎಂದು ಪ್ರಶ್ನಿಸಿದರು. ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿ ಎಂದಿದ್ದ ಮೋದಿ, ಬೆಲೆಏರಿಕೆಗೆ ಬ್ರೇಕ್ ಹಾಕುವುದಾಗಿ ಹೇಳಿದ್ದ ಮೋದಿ, ರೈತರ ಆದಾಯ ದುಪ್ಪಟ್ಟು ಮಾಡುವುದಾಗಿ ಹೇಳಿದ್ದ ಮೋದಿ ಯಾವುದನ್ನೂ ಈಡೇರಿಸದೆ ಭಾರತೀಯರಿಗೆ ನಂಬಿಸಿ ಮತ ಪಡೆದು ಮೋಸ ಮಾಡಿದರು ಎಂದರು.

### ಸಂಕಷ್ಟಕ್ಕೆ ಸ್ಪಂದಿಸಲು ಗ್ಯಾರಂಟಿ ಯೋಜನೆ

ಮೋದಿ ಸರ್ಕಾರದ ಬೆಲೆ ಏರಿಕೆಯಿಂದ ಹೈರಾಣಾಗಿದ್ದ ರಾಜ್ಯದ ಜನರ ಬದುಕಿಗೆ ಸ್ಪಂದಿಸುವ ಕಾರಣದಿಂದ ನಾವು ಐದು ಗ್ಯಾರಂಟಿಗಳನ್ನು ಜಾರಿ ಮಾಡಿದೆವು. ರಾಜ್ಯದ ಪ್ರತಿ ಕುಟುಂಬಗಳ ಕಷ್ಟಕ್ಕೆ ಸ್ಪಂದಿಸಿದೆವು. ಕೇವಲ ಜನರ ಭಾವನೆಗಳನ್ನು ಕೆರಳಿಸಿ ಬದುಕಿನ ಜತೆ ಚೆಲ್ಲಾಟ ಆಡುವ ಬಿಜೆಪಿಯವರು ಜನರ ಬದುಕನ್ನು ಸಂಕಷ್ಟಕ್ಕೆ ದೂಡಿದರು ಎಂದು ವಿವರಿಸಿದರು. ರಾಜ್ಯದ ಜನರಿಗೆ ಅಕ್ಕಿ ಕೊಡಿ, ಹಣ ಕೊಡ್ತೀವಿ ಎಂದು ಎಷ್ಟು ಕೇಳಿದರೂ ಮೋದಿ ಸರ್ಕಾರ ಅಕ್ಕಿ ಕೊಡದೆ ಸತಾಯಿಸಿತು. ನಿಮಗೆ ಅಕ್ಕಿ ಕೊಡಲು ಒಪ್ಪದ ಬಿಜೆಪಿಯವರು ಈಗ ನಿಮ್ಮ ಮತ ಕೇಳಲು ಬಂದಿದ್ದಾರೆ. ಇವರಿಗೆ ತಕ್ಕ ಪಾಠ ಕಲಿಸಿ ಎಂದು ಕರೆ ನೀಡಿದರು. ಬಡವರು, ಶ್ರಮಿಕರು, ಮಹಿಳೆಯರು, ರೈತರು, ಕಾರ್ಮಿಕರು, ಎಲ್ಲಾ ಜಾತಿ-ಎಲ್ಲಾ ಧರ್ಮದ ದುಡಿಯುವ ವರ್ಗಗಳ ಬದುಕಿಗೆ ನೆರಳಾಗುವ ಗ್ಯಾರಂಟಿಗಳನ್ನು, ಕಾರ್ಯಕ್ರಮಗಳನ್ನು ನಾವು ರೂಪಿಸಿದ್ದೇವೆ. ಬಿಜೆಪಿಯವರಂತೆ ಕೇವಲ ಶ್ರೀಮಂತರ ಸಾಲ ಮನ್ನಾ ಮಾಡಿ ಜನದ್ರೋಹದ ಕೆಲಸ ಮಾಡುವುದಿಲ್ಲ ಎಂದು ನುಡಿದರು. ನಿಮಗೆ ಅಕ್ಕಿ ಕೊಡಲು ನಿರಾಕರಿಸಿದ್ದ ಬಿಜೆಪಿಯವರು ಈಗ ನಿಮ್ಮ ಮತ ಕೇಳಲು ಬರುತ್ತಿದ್ದಾರೆ. ಇವರಿಗೆ ತಕ್ಕ ಪಾಠ ಕಲಿಸಿ ಎಂದು ಮುಖ್ಯಮಂತ್ರಿಗಳು ಕರೆ ನೀಡಿದರು.

### ಕೊರೊನಾ ಲಸಿಕೆ ಪಡೆದವರು ಸಾಯುವ ಕಾಲ ಬಂದಿದೆ- ಡಿ.ಕೆ ಶಿವಕುಮಾರ್

ಉತ್ತರ ಕನ್ನಡದ ಮುಂಡಗೋಡದಲ್ಲಿ ನಡೆದ ಚುನಾವಣಾ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ಬಿಜೆಪಿ ಸರ್ಕಾರ ಸತ್ತು ಹೋಗಿದೆ. ಜನರ, ಬಡವರ ಪರವಾಗಿ ಇಲ್ಲವಾಗಿದೆ. ಕೊರೊನಾ ಸಮಯದಲ್ಲಿ ಆಕ್ಸಿಜನ್ ಇಲ್ಲದೆ ಜನ ಸತ್ತರು, ಚಿಕಿತ್ಸೆ ಸರಿಯಾಗಿ ಸಿಗದೆ ರಾಜ್ಯದಲ್ಲಿ 4 ಲಕ್ಷ ಜನ ಸತ್ತಿದ್ದಾರೆ. ಈಗ ವ್ಯಾಕ್ಸಿನ್ ತೆಗೆದುಕೊಂಡವರು ಸಾಯುವ ಕಾಲ ಬಂದಿದೆ. ಬಿಜೆಪಿಯವರು ಈ ವ್ಯಾಕ್ಸಿನ್ ಕೊಟ್ಟ ಕಂಪನಿಯಿಂದಲೂ ಲಂಚ ಹೊಡೆದಿದ್ದಾರೆ ಎಂಬುದಾಗಿ ಡಿಸಿಎಂ ಡಿಕೆ ಶಿವಕುಮಾರ್ ಗಂಭೀರ ಆರೋಪ ಮಾಡಿದ್ದಾರೆ.



## ನಿತ್ಯ ಪಂಚಾಂಗ 4. 5. 2024 ಶನಿವಾರ



ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ-ಹೇಮಂತ ಋತು, ಚಾಂದ್ರಮಾನ, ಪುಷ್ಯ ಶುದ್ಧ

**ಸರ್ವತ್ರ/ವರೂಥಿನೀ ಏಕಾ., ಮೈಸೂರು ಕೋಟೆ ಶ್ವೇತವರಾಹ ರಥ, ಪೂಳಲಿ ಜಾತ್ರೆ, ವಲ್ಲಭಾಚಾರ್ಯ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

### ರಾಜ್ಯದಲ್ಲಿ ಕಾಂಗ್ರೆಸ್‌ಗೆ 18 ರಿಂದ 20 ಸ್ಥಾನ

# ಸಾಗರ್ ಖಂಡ್ರೆ 2 ಲಕ್ಷ ಮತಗಳ ಅಂತರದಿಂದ ಗೆದ್ದು ಸಂಸದರಾಗುತ್ತಾರೆ: ಈಶ್ವರ ಖಂಡ್ರೆ

**ಬೆಂಗಳೂರು, ಮೇ3–**ಬೀದರ್ ಲೋಕಸಭಾ ಕ್ಷೇತ್ರಕ್ಕೆ ಮೇ 7ರಂದು ರಾಜ್ಯದಲ್ಲಿ 2ನೇ ಹಂತದಲ್ಲಿ ಚುನಾವಣೆ ನಡೆಯುತ್ತಿದೆ. ನನ್ನ ಪುತ್ರ ಸಾಗರ್ ಈಶ್ವರ್ ಖಂಡ್ರೆ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದಾನೆ. ನಾವು ಈ ಬಾರಿ ಕ್ಷೇತ್ರದ ಬಹುತೇಕ ಕಡೆಗಳಲ್ಲಿ ಪ್ರಚಾರ ಮಾಡಿದ್ದು, ಹೋದ ಕಡೆಯಲ್ಲೆಲ್ಲಾ ಅಭೂತಪೂರ್ವವಾದ ಜನ ಬೆಂಬಲ ವ್ಯಕ್ತವಾಗುತ್ತಿದೆ ಎಂದು ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ.

ಎಲ್ಲೆಡೆ ಕಾಂಗ್ರೆಸ್ ಪರವಾದ ಅಲೆ ಕಾಣಿಸುತ್ತಿದೆ. ನನ್ನ ರಾಜಕೀಯ ಅನುಭವದಲ್ಲಿ, ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಮತದಾರ ಯಾರಿಗೆ ಮತ ಹಾಕಬೇಕು ಎಂಬುದನ್ನು ಈಗಾಗಲೇ ನಿರ್ಧರಿಸಿದ್ದಾರೆ ಎನಿಸುತ್ತಿದೆ. ಜನರ ನಾಡಿ ಮಿಡಿತ ನೋಡಿದಾಗ ಬೀದರ್ ಮತ್ತು ರಾಜ್ಯದ ಜನತೆ ಬದಲಾವಣೆ ಬಯಸುತ್ತಿದ್ದಾರೆ ಎಂಬುದು ವೇದ್ಯವಾಗುತ್ತಿದೆ.

ರಾಜ್ಯದಲ್ಲಿ ಕಳೆದ ಬಾರಿ ಅಂದರೆ 2019ರಲ್ಲಿ ಕಾಂಗ್ರೆಸ್ ಪಕ್ಷ ಒಂದೇ ಒಂದು ಸ್ಥಾನದಲ್ಲಿ



ಮಾತ್ರ ಗೆದ್ದಿತ್ತು. ಅದಕ್ಕೆ ಕಾರಣಗಳೂ ನಿಮಗೆಲ್ಲರಿಗೂ ತಿಳಿದಿದೆ.

ನಾವು ಜೆಡಿಎಸ್ ಜೊತೆ ಮೈತ್ರಿ ಮಾಡಿಕೊಂಡು ದೊಡ್ಡ ತಪ್ಪು ಮಾಡಿದ ಹಿನ್ನೆಲೆಯಲ್ಲಿ ಜೆಡಿಎಸ್ ಸ್ಪರ್ಧಿಸಿದ್ದ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಬಿಜೆಪಿಗೆ ಮತ ಹಾಕಿದರು, ಅದೇ ರೀತಿ ಕಾಂಗ್ರೆಸ್ ಸ್ಪರ್ಧಿಸಿದ್ದ ಕ್ಷೇತ್ರಗಳಲ್ಲಿ ಜೆಡಿಎಸ್ ಕಾರ್ಯಕರ್ತರೂ ಬಿಜೆಪಿಗೆ ಮತ ಹಾಕಿದರು, ಪುಲ್ವಾಮಾ ಪ್ರಭಾವವೂ ಕಳೆದ ಚುನಾವಣೆಯ ಮೇಲಿತ್ತು.

ಆದರೆ ಈ ಬಾರಿ ಜನತೆ ಬಿಜೆಪಿಯ ಸುಳ್ಳುಗಳಿಂದ, ಜನವಿರೋಧಿ, ರೈತ ವಿರೋಧಿ ನೀತಿಗಳಿಂದ ರೋಸತ್ತು ಹೋಗಿದ್ದಾರೆ. ಅದೇ ವೇಳೆ ನಮ್ಮ ಸರ್ಕಾರದ ಗ್ಯಾರಂಟಿಗಳು ಕಟ್ಟ ಕಡೆಯ ವ್ಯಕ್ತಿಗೂ ತಲುಪಿದ್ದು, ಜನರಿಗೆ ಕಾಂಗ್ರೆಸ್ ಪಕ್ಷದ ಬಗ್ಗೆ ವಿಶ್ವಾಸ ಇಮ್ಮಡಿಯಾಗಿದೆ. ಹೀಗಾಗಿ ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲಿ ಎಂದು ಅಪೇಕ್ಷೆ ಪಡುತ್ತಿದ್ದಾರೆ.

ನಮ್ಮ ಪಂಚನ್ಯಾಯ ಮತ್ತು 25 ಗ್ಯಾರಂಟಿಗಳ ನಿರೀಕ್ಷೆಯಲ್ಲಿದ್ದಾರೆ. ಈ ಬಾರಿ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಕನಿಷ್ಠ 18 ರಿಂದ 20 ಸ್ಥಾನಗಳಲ್ಲಿ ಗೆಲ್ಲುತ್ತದೆ. ಅದೇ ರೀತಿ ಬೀದರ್ ಲೋಕಸಭಾ ಚುನಾವಣೆಯಲ್ಲಿ ಕೂಡ ಕಾಂಗ್ರೆಸ್ ಅಭ್ಯರ್ಥಿ ಸಾಗರ್ ಈಶ್ವರ ಖಂಡ್ರೆ ಕನಿಷ್ಠ 2 ಲಕ್ಷ ಮತಗಳ ಅಂತರದಿಂದ ಜಯ ಸಾಧಿಸುತ್ತಾರೆ ಎಂಬ ವಿಶ್ವಾಸ ನನಗಿದೆ ಎಂದು ಸಚಿವ ಈಶ್ವರ ಖಂಡ್ರೆ ಹೇಳಿದರು.

# ಎಚ್.ಡಿ.ರೇವಣ್ಣ ಮನೆ ಮೇಲೆ ಎಸ್‌ಐಟಿ ಅಧಿಕಾರಿಗಳ ದಾಳಿ

**ಬೆಂಗಳೂರು, ಮೇ.3–** ಬೆಂಗಳೂರಿನಲ್ಲಿರುವ ಶಾಸಕ ಎಚ್.ಡಿ. ರೇವಣ್ಣನವರ ಮನೆ ಮೇಲೆ ನಿನ್ನೆ ರಾತ್ರಿ ಎಸ್‌ಐಟಿ ಅಧಿಕಾರಿಗಳು ದಾಳಿ ನಡೆಸಿದ್ದು, ದಾಳಿಯಲ್ಲಿ ಮಹ್ವದ ಮಾಹಿತಿಗಳನ್ನು ಕಲೆ ಹಾಕಿದ್ದಾರೆ ಎನ್ನಲಾಗಿದೆ. ದಾಳಿ ವೇಳೆ ಎಚ್.ಡಿ ರೇವಣ್ಣನವರು ಮನೆಯಲ್ಲಿ ಇರಲಿಲ್ಲ ಎನ್ನಲಾಗಿದೆ. ಬೆಂಗಳೂರಿನ ಬಸವನಗುಡಿ ಯಲ್ಲಿರುವ ಎಚ್.ಡಿ.ರೇವಣ್ಣನವರ ಮನೆ ಮೇಲೆ ದಾಳಿ ನಡೆಸಿದ್ದು, ವಿಡಿಯೋವನ್ನು ಮಾಡಿಕೊಂಡಿದ್ದಾರೆ ಎನ್ನಲಾಗಿದೆ. ಇನ್ನೂ ಹಲವು ಎಸ್‌ಐಟಿ ಅಧಿಕಾರಿಗಳು ಹಾಸನದ ಕೆಲವು ಕಡೆಗಳಲ್ಲಿ ಕೂಡ ದಾಳಿ ನಡೆಸಿದ್ದು, ವಿಡಿಯೋದಲ್ಲಿರುವ ಮನೆಗಳ ಹುಡುಕಾಡದಲ್ಲಿ ಇದ್ದಾರೆ




ಎನ್ನಲಾಗಿದೆ.

ಇದಲ್ಲದೇ ವಿಡಿಯೋ ದಲ್ಲಿರುವ ಮಹಿಳೆಯರನ್ನು ಕೂಡ ಪತ್ತೆ ಹಚ್ಚುವುದಕ್ಕೆ ಕೂಡ ಮುಂದಾಗಿದ್ದು, ಕೆಲವು ಮಹಿಳೆಯರನ್ನು ವಿಡಿಯೋದಲ್ಲಿರುವ ಮಹಿಳೆಯರನ್ನು ಪತ್ತೆ ಹಚ್ಚಿ ಅವರಿಗೆ ನೋಟಿಸ್ ನೀಡಿ ವಿಚಾರಣೆಗೆ ಬರುವಂತೆ ಸೂಚನೆ ನೀಡಲಿದ್ದಾರೆ ಎನ್ನಲಾಗಿದೆ.

# ಚುನಾವಣೆ ನಂತರ ಬಿಜೆಪಿಗೆ ವಾಪಸ್: ಈಶ್ವರಪ್ಪ

**ಶಿವಮೊಗ್ಗ, ಮೇ.3–** ಬಿಜೆಪಿ ಉಚ್ಚಾಟಿತ ನಾಯಕ ಕೆ.ಎಸ್. ಈಶ್ವರಪ್ಪ ಬಿಜೆಪಿ 27 ಸ್ಥಾನಗಳನ್ನು ಗೆಲ್ಲಬೇಕು, ಸ್ವತಂತ್ರ ಅಭ್ಯರ್ಥಿಯಾಗಿ ನಾನು ಒಂದು ಸ್ಥಾನವನ್ನು ಗೆಲ್ಲಬೇಕು ಮತ್ತು ಕರ್ನಾಟಕದಲ್ಲಿ ಒಟ್ಟು 28 ಸದಸ್ಯರು (28 ಸ್ಥಾನಗಳಲ್ಲಿ) ನರೇಂದ್ರ ಮೋದಿಯವರನ್ನು ಪ್ರಧಾನಿಯನ್ನಾಗಿ ಮಾಡಲು ಕೊಡುಗೆ ನೀಡುತ್ತಾರೆ ಎಂದು ನಾನು ಬಯಸುತ್ತೇನೆ ಎಂದು ಹೇಳಿದ್ದಾರೆ.

ಅವರು ಮಾಧ್ಯಮಗಳ ಜೊತೆಗೆ ಮಾತನಾಡುತ್ತ ಬಿಜೆಪಿ ನನ್ನ ತಾಯಿ. ನನ್ನ ಪದವಿಯ ನಂತರ ನಾನು ಬಿಜೆಪಿಗೆ ಸೇರಿಕೊಂಡೆ ಮತ್ತು ಅಂದಿನಿಂದ ಇಂದಿನವರೆಗೆ ನಾನು ಅದರ



ತತ್ವಗಳಿಗೆ ಬದ್ಧನಾಗಿದ್ದೇನೆ. ನಾನು ಇಲ್ಲಿಯವರೆಗೆ ಯಾವುದೇ ಪಕ್ಷಕ್ಕೆ ಸೇರಿಲ್ಲ. ಮತ್ತು ಕೊನೆಯವರೆಗೂ ಬೇರೆ ಯಾವುದೇ ಪಕ್ಷಕ್ಕೆ ಸೇರುವುದಿಲ್ಲ ಕೆಲವು ಸಮಸ್ಯೆಗಳಿಂದಾಗಿ, ನಾನು ಪಕ್ಷದಿಂದ ಹೊರಗುಳಿದಿದ್ದೇನೆ ಆದರೆ ಚುನಾವಣೆಯ ನಂತರ, ನಾನು ನನ್ನ ತಾಯಿಯ ಬಳಿಗೆ ಹೋಗುತ್ತೇನೆ ಎಂದು ಹೇಳಿದ್ದಾರೆ.

# ಚುನಾವಣೆಗೂ ಮುನ್ನ ಬಿಜೆಪಿ ಸಂಸದ ಉಮೇಶ್ ಜಾಧವ್‌ಗೆ 'ಕೈ' ಶಾಕ್




**ಕಲಬುರಗಿ, ಮೇ.3–**ರಾಜ್ಯದಲ್ಲಿ ಎರಡನೇ ಹಂತದ ಚುನಾವಣೆಗೆ ಸಿದ್ಧತೆಗಳು ನಡೆದಿದ್ದು, ಮೇ 7 ರಂದು 14 ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ. ಈ ಪೈಕಿ ಕಲಬುರಗಿ ಲೋಕಸಭಾ ಕ್ಷೇತ್ರವೂ ಒಂದು. ಕಲಬುರಗಿ ಲೋಕಸಭಾ ಕ್ಷೇತ್ರದಲ್ಲಿ ಹಾಲಿ ಸಂಸದ ಉಮೇಶ್ ಜಾಧವ್ ಬಿಜೆಪಿ ಅಭ್ಯರ್ಥಿಯಾಗಿದ್ದರೆ, ಕಾಂಗ್ರೆಸ್ ನಿಂದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಅಳಿಯ ರಾಧಾಕೃಷ್ಣ ಕಣಕ್ಕಿಳಿದಿದ್ದಾರೆ. ಉಮೇಶ್ ಜಾಧವ್ ಅವರ ಹತ್ತಿರದ ಸಂಬಂಧಿ ಹಾಗೂ ಬಂಜಾರ ಸಮಿತಿ ಅಧ್ಯಕ್ಷ ವಿಠ್ಠಲ್ ಜಾಧವ್ ಕಾಂಗ್ರೆಸ್ ಸೇರ್ಪಡೆಯಾಗಿದ್ದಾರೆ.

# ರೈತರ ಪರವಾಗಿ ಬಿಜೆಪಿ ಕಾರ್ಯಕ್ರಮ ರೂಪಿಸಿಲ್ಲ: ಕೆ.ಎಚ್.ಮುನಿಯಪ್ಪ ಟೀಕೆ

**ಯಾದಗಿರಿ, ಮೇ.3–** ಶಹಾಪುರ ತಾಲ್ಲೂಕಿನ, ನಗನೂರು ಗ್ರಾಮದಲ್ಲಿಂದು ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರಾದ ಕೆ.ಎಚ್. ಮುನಿಯಪ್ಪ ನವರು ರಾಯಚೂರು ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಕುಮಾರ್ ನಾಯಕ್ ರವರ ಪರವಾಗಿ ಮತಯಾಚನೆ ಮಾಡಿದರು.

ಅನುಭವಿ ಅಧಿಕಾರಿಯಾಗಿ ಕೆಲಸ ಮಾಡಿರುವ ಕುಮಾರ್ ಉತ್ತಮ ಕೆಲಸಗಾರ ಅವರನ್ನು ಹೈಕಮಾಂಡ್ ಆಯ್ಕೆ ಮಾಡಿ ಕಳುಹಿಸಿದೆ ಅವರನ್ನು ತಾವು ಹೆಚ್ಚಿನ ಮತಗಳ ಅಂತರದಿಂದ ಗೆಲ್ಲಿಸ ಬೇಕು ಎಂದರು. ರೈತರ ಪರವಾದ ಪಕ್ಷ ಅದು ಕಾಂಗ್ರೆಸ್ ಪಕ್ಷ ಬಿಜೆಪಿ ಸರ್ಕಾರ ರೈತರ ಪರವಾದ ಯಾವುದೇ ತೀರ್ಮಾನವನ್ನು ಮಾಡಲಿಲ್ಲಾ ನಮ್ಮ ಸರ್ಕಾರ ಕೇಂದ್ರದಲ್ಲಿ ಬಂದರೆ ನಾವು ರೈತರ ಸಾಲ ಮನ್ನಾ ಮಾಡುತ್ತೇವೆ, ನಮ್ಮ ಪಕ್ಷದ ಪ್ರಣಾಳಿಕೆ ನೀಡಿರುವ ಈ ಗ್ಯಾರಂಟಿಗಳು ಜನಸಾಮಾನ್ಯರಿಗೆ



ತಲುಪಿಸುವಲ್ಲಿ ಯಶ್ವಿಯಾಗಿದ್ದೇವೆ. ನಮ್ಮ ಸರ್ಕಾರ ನುಡಿದಂತೆ ನಡೆದ ಸರ್ಕಾರ ನಾವು ನೀಡಿದ ಎಲ್ಲಾ ಗ್ಯಾರಂಟಿಗಳನ್ನು ನಾವು ಈಡೇರಿಸಿದ್ದೇವೆ

ನಮ್ಮ ಸರ್ಕಾರ ಬಂದು ಮೊಟ್ಟ ಮೊದಲ ಕ್ಯಾಬಿನೆಟ್‌ನಲ್ಲಿ ನಾವು ಈ ಐದು ಗ್ಯಾರಂಟಿಗಳನ್ನು ಈಡೇರಿಸಿದ್ದೇವೆ. ನಮ್ಮ ಯೋಜನೆಗಳು ಬೇರೆ ಯಾವುದೇ ರಾಜ್ಯ ದಲ್ಲಿಯೂ ನೀಡಿಲ್ಲಾ ನಾವು ನಮ್ಮ ಸರ್ಕಾರದ ಅಭಿವೃದ್ಧಿ ಕಾರ್ಯಗಳೊಂದಿಗೆ ನಾವು ಸರ್ಕಾರವನ್ನು ಮಾಡುತ್ತಿದ್ದೇವೆ ತಾವೆಲ್ಲರೂ ಈ ಬಾರಿ ಕುಮಾರ್ ನಾಯಕ್ ಅವರನ್ನು ಜಯಭೇರಿ ಮಾಡಬೇಕೆಂದು ಮತದಾರರಲ್ಲಿ ಮತಯಾಚನೆ ಮಾಡಿದರು.

ಈ ಸಂದರ್ಭದಲ್ಲಿ ಸಣ್ಣ ಕೈಗಾರಿಕೆ ಸಚಿವರಾದ ಶರಣಬಸಪ್ಪಗೌಡ ದರ್ಶನಾಪುರ ,ಬಸಣ ಗೌಡ ಯಾಲಗಿ ಜಿಲ್ಲಾ ಪಂಚಾಯತ ಮಾಜಿ ಸದಸ್ಯರು, ಬೈರೇಗೌಡ ,ಮಲ್ಲಣ್ಣ,ಬೋರೇಗೌಡಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಧೈರ್ಯವಿದ್ದರೆ ಉಪಚುನಾವಣೆ ಎದುರಿಸಿ: ಸುನೀಲ್ ಕುಮಾರ್

**ಶಿರಸಿ, ಮೇ.3–** 'ಯಲ್ಲಾಪುರ ಕ್ಷೇತ್ರದ ಶಾಸಕ ಶಿವರಾಮ ಹೆಬ್ಬಾರ್‌ಗೆ ಬಿಜೆಪಿಯಲ್ಲಿ ಇರಲು ಇಷ್ಟವಿಲ್ಲದಿದ್ದರೆ, ರಾಜೀನಾಮೆ ನೀಡಿ ಉಪಚುನಾವಣೆ ಎದುರಿಸಲಿ' ಎಂದು ಬಿಜೆಪಿ ಪ್ರಧಾನ ಕಾರ್ಯದರ್ಶಿ, ಶಾಸಕ ವಿ.ಸುನೀಲ್ ಕುಮಾರ್ ಸವಾಲು ಹಾಕಿದರು. 'ಹೆಬ್ಬಾರ್‌ಗೆ ಬಿಜೆಪಿ ಎಲ್ಲ ಅವಕಾಶ ನೀಡಿದೆ.

ಏಕೆ ಪ್ರಚಾರಕ್ಕೆ ಬರುತ್ತಿಲ್ಲ ಎಂಬುದನ್ನು ಸ್ಪಷ್ಟಪಡಿಸಬೇಕು.




ಬಿಜೆಪಿಗೆ ಕಾರ್ಯಕರ್ತರೇ ಶಕ್ತಿಯಾಗಿದ್ದು ಹೆಬ್ಬಾರ್‌ಗೆ ಬೇರೆಡೆ ಹೋಗಿ ಗೆಲ್ಲುವ ವಿಶ್ವಾಸವಿದ್ದರೆ ಹೋಗಲಿ ಎಂದು ತಿಳಿಸಿದರು.

# ಪ್ರಜ್ವಲ್ ರೇವಣ್ಣರಿಗೆ ಸೇರಿದ 3 ಫಾರ್ಮ್‌ಹೌಸ್ ಮೇಲೆ ದಾಳಿ

**ಬೆಂಗಳೂರು, ಮೇ.3–** ಹಾಸನ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಅವರದ್ದು ಎನ್ನಲಾದ ಅಶ್ಲೀಲ ವೀಡಿಯೊ ಪೆನ್ ಡ್ರೈವ್ ಪ್ರಕರಣಕ್ಕೆ ಸಂಬಂಧಿಸಿ ವಿಶೇಷ ತನಿಖಾ ತಂಡ ತನಿಖೆ ಚುರುಕುಗೊಳಿಸಿದ್ದು, ಪ್ರಜ್ವಲ್‌ಗೆ ಸೇರಿರುವ 3 ಫಾರ್ಮ್‌ಹೌಸ್ ಗಳಿಗೆ ದಾಳಿ ನಡೆಸಿದೆ. ಇಂದು ಮುಂಜಾನೆ 3:30ರ ಸುಮಾರಿಗೆ ಬೆಂಗಳೂರಿನ ಬಸವನಗುಡಿ ಯಲ್ಲಿ ರುವ ಪ್ರಜ್ವಲ್‌ಗೆ ಸೇರಿರುವ ತೋಟದ ಮನೆ, ಹೊಳೆನರಸೀಪುರ ತೋಟದ ಮನೆ ಪಡುವಲ ಹಿಪ್ಪೆಯ ಫಾರ್ಮ್ ಹೌಸ್‌ಗೆ ದಾಳಿ ನಡೆಸಿರುವ ಸಿಟ್ ದಾಳಿ ಮಾಹಿತಿ ಕಲೆ ಹಾಕಿದ್ದಾರೆ ಸುಮಾರು 30ಕ್ಕೂ ಅಧಿಕ ಅಧಿಕಾರಿ, ಸಿಬ್ಬಂದಿ ಮೂರೂ ಕಡೆ ಏಕಕಾಲಕ್ಕೆ ದಾಳಿ ನಡೆಸಿದ್ದಾರೆ.

# ಹುಣಸಗಿ ತಾಲೂಕಿನಲ್ಲಿ ರಾಜುಗೌಡ ಮತಯಾಚನೆ



**ಯಾದಗಿರಿ, ಮೇ.3–** ಇತ್ತೀಚೆಗೆ ಕಾಂಗ್ರೆಸ್ಸಿನ ರಾಜಾ ವೆಂಕಟಪ್ಪ ನಾಯಕ ಅವರು ನಿಧನರಾದ ಹಿನ್ನೆಲೆಯಲ್ಲಿ, ಯಾದಗಿರಿ ಜಿಲ್ಲೆಯ ಸುರಪುರ ಕ್ಷೇತ್ರಕ್ಕೆ ಇದೀಗ ಉಪಚುನಾವಣೆ ನಡೆಯುತ್ತಿದ್ದು ಅಲ್ಲಿ ಬಿಜೆಪಿ ಅಭ್ಯರ್ಥಿ ರಾಜುಗೌಡ ಸ್ಪರ್ಧಿದ್ದಾರೆ. ಅವರು ಯಾದಗಿರಿ ಜಿಲ್ಲೆ ಹುಣಸಗಿ ತಾಲೂಕಿನಲ್ಲಿ ಮತಯಾಚನೆ ಮಾಡಿದರು.

ಹಾಗಾಗಿ ಇಂದು ಅವರು ಯಾದಗಿರಿ ಜಿಲ್ಲೆಯ ಹುಣಸಗಿ ತಾಲೂಕಿನಲ್ಲಿ ಮತಯಾಚನೆ ಮಾಡುವ ವೇಳೆ ಮಾತನಾಡಿದ ಅವರು, ನನಗೆ ತಂದೆ-ತಾಯಿ ಇಲ್ಲ . ಇಲ್ಲಿ ಬಂದ ಎಲ್ಲ ತಾಯಂದಿರ ಹತ್ತಿರ ನನ್ನ ಕಾರ್ಯಕರ್ತರ ಹತ್ತಿರ ಎಲ್ಲಾ ಅಣ್ಣ-ತಮ್ಮಂದಿರ ಹತ್ತಿರ ಎಲ್ಲ ನನ್ನ ಬಿಜೆಪಿ ಕಾರ್ಯಕರ್ತರು ನಿಮಗೆ ಕೈ ಮುಗಿದು ನಿಮ್ಮ ಕಾಲಿಗೆ ನಮಸ್ಕಾರ ಮಾಡಿ ಕೇಳುತ್ತೇನೆ ನಮಗೆ ಆಶೀರ್ವಾದ ಮಾಡಿ ಎಂದು ಕೇಳಿಕೊಳ್ಳುತ್ತೇನೆ ಎಂದು ವೇದಿಕೆ ಮೇಲೆ ದೀರ್ಘ ದಂಡ ನಮಸ್ಕಾರ ಹಾಕಿದರು.

# ವೀರಶೈವ-ಲಿಂಗಾಯತ ಮತಬುಟ್ಟಿಗೆ ಪಕ್ಷಗಳ ಕಸರತ್ತು

**ಬೆಂಗಳೂರು, ಮೇ.3–** ಜಿದ್ದಾಜಿದ್ದಿನ ಕುರುಕ್ಷೇತ್ರವಾಗಿರುವ 2ನೇ ಹಂತದ 14 ಲೋಕಸಭಾ ಕ್ಷೇತ್ರಗಳ ಪೈಕಿ ಅಭ್ಯರ್ಥಿಗಳ ಸೋಲು-ಗೆಲುವಿನಲ್ಲಿ ನಿರ್ಣಾಯಕ ಪಾತ್ರ ವಹಿಸಿರುವ ವೀರಶೈವ ಲಿಂಗಾಯತ ಮತಬುಟ್ಟಿಗೆ ಎಲ್ಲಾ ಪಕ್ಷಗಳೂ ಕೈ ಹಾಕಿವೆ.

ಇದೇ 7 ರಂದು ಶಿವಮೊಗ್ಗ, ದಾವಣಗೆರೆ, ಉತ್ತರ ಕನ್ನಡ, ಚಿಕ್ಕೋಡಿ, ಬೆಳಗಾವಿ, ಧಾರವಾಡ, ಹಾವೇರಿ, ಬಳ್ಳಾರಿ, ಕೊಪ್ಪಳ, ರಾಯಚೂರು, ಬಾಗಲಕೋಟೆ, ಬೀದರ್, ವಿಜಾಪುರ ಹಾಗೂ ಕಲಬುರಗಿ ಲೋಕಸಭಾ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ಬಹುತೇಕ ಎಲ್ಲಾ ಕ್ಷೇತ್ರಗಳಲ್ಲಿ ವೀರಶೈವ ಲಿಂಗಾಯತರೇ ನಿರ್ಣಾಯಕರಾಗಿದ್ದು, ಈ ಸಮುದಾಯವನ್ನು ಸೆಳೆಯಲು ಅಭ್ಯರ್ಥಿಗಳ ಜೊತೆಗೆ ಕಾಂಗ್ರೆಸ್ ಮತ್ತು ಎನ್‌ಡಿಎ ಮೈತ್ರಿಕೂಟ ಇನ್ನಿಲ್ಲದ ಕಸರತ್ತು ನಡೆಸಿದೆ.

ವೀರಶೈವ ಸಮುದಾಯದ ಒಳಪಂಗಡಗಳಿಗೆ ಅನುಗುಣವಾಗಿ ಕಾಂಗ್ರೆಸ್ ಮತ್ತು ಬಿಜೆಪಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಹೀಗಾಗಿ ಈ ಸಮುದಾಯವನ್ನು ಸೆಳೆಯಲು ಇನ್ನಿಲ್ಲದ ತಂತ್ರಗಾರಿಕೆಯನ್ನು ರೂಪಿಸಲಾಗುತ್ತದೆ.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಮಧ್ಯಕರ್ನಾಟಕ, ಕಲ್ಯಾಣ ಕರ್ನಾಟಕ ಮತ್ತು ಕಿತ್ತೂರು ಕರ್ನಾಟಕದಲ್ಲಿ ಬಿಜೆಪಿ ಲೆಕ್ಕಾಚಾರವನ್ನು ತಲೆಕೆಳಗೆ ಮಾಡಿ ಭರ್ಜರಿ ಫಸಲು ತೆಗೆದಿದ್ದ ಕಾಂಗ್ರೆಸ್ ಈಗಲೂ ಈ ಚುನಾವಣೆಯಲ್ಲೂ ಅದೇ ಫಲಿತಾಂಶ ಬರಬಹುದು ಎಂಬ ನಿರೀಕ್ಷೆ ಇಟ್ಟುಕೊಂಡಿದೆ. ಹೀಗಾಗಿಯೇ ವೀರಶೈವ ಸಮುದಾಯದ ಒಳಪಂಗಡಗಳಾದ ಪಂಚಮಶಾಲಿ, ಗಾಣಿಗ ಮತ್ತು ಸಾಧು ಲಿಂಗಾಯತರಿಗೆ ಜನಸಂಖ್ಯೆಗನುಗುಣವಾಗಿ ಟಿಕೆಟ್ ಹಂಚಿಕೆ ಮಾಡಿದೆ. ಈವರೆಗೂ ವೀರಶೈವ ಲಿಂಗಾಯತ ಮತಗಳು ತನಗೆ ಯಾವಾಗಲೂ ಕಟ್ಟಿಟ್ಟ ಬುತ್ತಿ ಎಂಬ ನಿರೀಕ್ಷೆಯಲ್ಲಿದ್ದ ಬಿಜೆಪಿಗೆ ಕಳೆದ ವಿಧಾನಸಭಾ ಚುನಾವಣೆಯಲ್ಲಿ ಫಲಿತಾಂಶ ಮರ್ಮಾಘಾತ ನೀಡಿತ್ತು. ಸಮುದಾಯದ ಪ್ರಭಾವಿ ನಾಯಕ ಬಿ.ಎಸ್. ಯಡಿಯೂರಪ್ಪ ರಾಜೀನಾಮೆ ಹಾಗೂ ಆ ಸಮುದಾಯವನ್ನು ಕಡೆಗಣಿಸಿದ್ದರ ಪರಿಣಾಮ ಬಿಜೆಪಿ ಚುನಾವಣೆಯಲ್ಲಿ ಭಾರಿ ಬೆಲೆ ತೆತ್ತಿತ್ತು. ಯಾವಾಗ ತನ್ನ ಸಾಂಪ್ರದಾಯಿಕ ಮತ ಬ್ಯಾಂಕ್ ಕೈಬಿಟ್ಟು ಹೋಗಲಿದೆ ಎಂಬುದು ಅರಿವಾಗುತ್ತಿದ್ದಂತೆ ಬಿಜೆಪಿ ತನ್ನ ರಣತಂತ್ರವನ್ನು ಬದಲಾಯಿಸಿದೆ.

ರಾಜ್ಯದಲ್ಲಿ ಶೇಕಡಾ 17 ರಷ್ಟು ಇದೇ ಸಮುದಾಯ ಜನರಿದ್ದಾರೆ. ಇವರನ್ನು ಬಿಟ್ಟರೆ ಒಕ್ಕಲಿಗರು ಹೆಚ್ಚಾಗಿದ್ದಾರೆ. ರಾಜ್ಯದ ಜನಸಂಖ್ಯೆಯಲ್ಲಿ ಈ ಸಮುದಾಯದ ಪಾತ್ರ ಶೇಕಡಾ 12 ರಷ್ಟಿದೆ. ಲಿಂಗಾಯತರು ಇತ್ತೀಚಿನ ಕೆಲವು ದಶಕಗಳಿಗೆ ಬಿಜೆಪಿ ಪಕ್ಷದತ್ತ ಮುಖ ಮಾಡಿದ್ದಾರೆ. ಇನ್ನು ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಮಾಡಿಕೊಂಡಿದ್ದರಿಂದ, ಉತ್ತರ ಕರ್ನಾಟಕದಲ್ಲಿ ಮೈತ್ರಿ ಎಷ್ಟರಮಟ್ಟಿಗೆ ಕೈ ಹಿಡಿಯಲಿದೆ ಎಂಬುದನ್ನು ಕಾದು ನೋಡಬೇಕಿದೆ. ಅಂದಹಾಗೆ 2019ರ ಚುನಾವಣೆಯಲ್ಲಿ ಬಿಜೆಪಿ ಈ ಕ್ಷೇತ್ರದಲ್ಲಿ ಕ್ಲೀನ್ ಸ್ವೀಪ್ ಸಾಧನೆ ಮಾಡಿತ್ತು.

ಕಳೆದ ವರ್ಷ ನಡೆದ ವಿಧಾನಸಭಾ ಚುನಾವಣೆಯಲ್ಲಿ 37 ಲಿಂಗಾಯತ ಶಾಸಕರು ಗೆದ್ದು ಬೀಗಿದ್ದಾರೆ. 2018ಕ್ಕೆ ಹೋಲಿಸಿದರೆ ಈ ಸಂಖ್ಯೆ ಹೆಚ್ಚಾಗಿದೆ. ಬಿಜೆಪಿ ಕಳೆದ ಚುನಾವಣೆಯಲ್ಲಿ ಕೇವಲ 15 ಲಿಂಗಾಯತ ಅಭ್ಯರ್ಥಿಗಳು ಗೆದ್ದಿದ್ದರು. ಇನ್ನು ಒಟ್ಟಾರೆ ಲಿಂಗಾಯತ ಶಾಸಕರ ಸಂಖ್ಯೆಯು ಹೆಚ್ಚಾಗಿದ್ದು, ಇದರ ಲಾಭವನ್ನು ಪಕ್ಷಗಳು ಹೇಗೆ ಪಡೆಯಲಿವೆ ಎಂಬುದು ದೊಡ್ಡ ಪ್ರಶ್ನೆ ಆಗಿದೆ.

ಕರ್ನಾಟಕದ 224 ಕ್ಷೇತ್ರಗಳಲ್ಲಿ 90 ಕ್ಷೇತ್ರಗಳಲ್ಲಿ ಲಿಂಗಾಯತ ಸಮುದಾಯವೇ ಡಾಮಿನೆಟೆಡ್ ಇದೆ. ಇನ್ನು ಈ ಸಮುದಾಯ ಬಿಜೆಪಿಯಿಂದ ಕಾಂಗ್ರೆಸ್ ಕಡೆ ಮುಖ ಮಾಡಿರಲು ಹಲವು ಕಾರಣಗಳಿವೆ. ಲಿಂಗಾಯತ ಸಮುದಾಯದ ಪ್ರಭಾವಿ ಮುಖಂಡ ಬಿಎಸ್ ಯಡಿಯೂರಪ್ಪ ಅವರನ್ನು ಮೂಲೆಗುಂಪು ಮಾಡಿದ್ದು, ಪಕ್ಷಕ್ಕೆ ಪೆಟ್ಟು ನೀಡಿದೆ. ಈಗ ಮತ್ತೆ ಬಿಜೆಪಿಯತ್ತ ಲಿಂಗಾಯತ ಸಮುದಾಯ ಮುಖ ಮಾಡಿದೆ. ದೇಶದ ವಿಚಾರಕ್ಕೆ ಬಂದಾಗ ಈ ಸಮುದಾಯ ಒಟ್ಟಾಗಿ ನಿಲ್ಲುವುದು ಕಳೆದ ಹಲವು ಚುನಾವಣೆಗಳಲ್ಲಿ ಎದ್ದು ಕಾಣುತ್ತದೆ. ಈಗ ರಣ ರಂಗದಲ್ಲಿ ಮತ್ತೆ ಬಿಎಸ್ವೈ ಕಾಣಿಸಿಕೊಂಡಿದ್ದು, ಇವರ ಮಗನಿಗೂ ದೊಡ್ಡ ಜವಾಬ್ದಾರಿಯನ್ನು ನೀಡಲಾಗಿದೆ.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಪಕ್ಷ ಟಿಕೆಟ್ ನೀಡದೇ ಇರುವ ಕಾರಣಕ್ಕೆ ಬಿಜೆಪಿ ಬಿಟ್ಟು ಕಾಂಗ್ರೆಸ್ ಸೇರಿದ್ದ ಲಕ್ಷ್ಮಣ ಸವದಿ, ಜಗದೀಶ್ ಶೆಟ್ಟರ್ ಪಕ್ಷಕ್ಕೆ ಕೊಂಚ ಪೆಟ್ಟು ಬಿದ್ದಿತ್ತು. ಆದರೆ ಈಗ ರಾಜಕೀಯ ಸಮೀಕರಣ ಬದಲಾಗಿದೆ. ಕಾಂಗ್ರೆಸ್ಗೆ ಕೈ ನೀಡಿರುವ ಜಗದೀಶ್ ಶೆಟ್ಟರ್ ಮತ್ತೆ ಬಿಜೆಪಿ ಬಾವುಟ ಹಿಡಿದಿದ್ದಾರೆ. ಅಲ್ಲದೆ ಬೆಳಗಾವಿ ಕ್ಷೇತ್ರದಿಂದ ಲೋಕಸಭಾ ಚುನಾವಣೆಯ ಅಖಾಡದಲ್ಲಿ ಅದೃಷ್ಟ ಪರೀಕ್ಷೆಗೆ ಮುಂದಾಗಿದ್ದಾರೆ.

ಜಗದೀಶ್ ಶೆಟ್ಟರ್ ಘರ್ ವಾಪಸಿಯಿಂದ ಪಕ್ಷದಲ್ಲಿ ಕಾಣಿಸಿಕೊಂಡಿದ್ದ ಸಣ್ಣ ಬಿರುಕು ಸಹ ಮುಚ್ಚಿದಂತೆ ಕಾಣುತ್ತದೆ. ಈ ಬಾರಿ ಬಿಜೆಪಿ ಕಳೆದ ಬಾರಿಯಂತೆ ಈ ಭಾಗದಲ್ಲಿ ಕ್ಲೀನ್‌ಸ್ವೀಪ್ ಸಾಧನೆಯನ್ನು ಮಾಡಲು ಎದುರು ನೋಡುತ್ತಿದೆ. ಈ ಬಾರಿ ಬೆಳಗಾವಿ ಕ್ಷೇತ್ರದ ಮೂಲಕ ಮೊದಲ ಬಾರಿಗೆ ಲೋಕಸಭಾ ಪ್ರವೇಶಿಸಲು ಜಗದೀಶ್ ಶೆಟ್ಟರ ಎದುರು ನೋಡುತ್ತಿದ್ದಾರೆ. ಪ್ರಸಕ್ತ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಒಟ್ಟು 9 ಲಿಂಗಾಯತ ಅಭ್ಯರ್ಥಿಗಳಿಗೆ ಅವಕಾಶ ನೀಡಿದರೆ, ಮೂವರು ಒಕ್ಕಲಿಗರಿಗೆ ಚುನಾವಣೆ ಸ್ಪರ್ಧಿಸುವ ಅವಕಾಶ ನೀಡಿದೆ. ಈ ಅಂಕಿ ಅಂಶದಲ್ಲಿ ಕಾಂಗ್ರೆಸ್ ಕೊಂಚ ಹಿಂದೆ ಬಿದ್ದಿದೆ. ಕಾಂಗ್ರೆಸ್ 5 ಲಿಂಗಾಯತ, 6 ಒಕ್ಕಲಿಗರಿಗೆ ಅವಕಾಶ ನೀಡಿದೆ. ಇನ್ನು ಜೆಡಿಎಸ್ ಇಬ್ಬರು ಒಕ್ಕಲಿಗ ಅಭ್ಯರ್ಥಿಗಳಿಗೆ ಮಣೆ ಹಾಕಿದೆ.

ಕಾಂಗ್ರೆಸ್ ಸಹ ಈ ಹಿಂದೆ ಅಹಿಂದ ಮತಗಳನ್ನು ತನ್ನತ್ತ ಸೆಳೆಯಲು ಬೇಕಾದ ಪ್ರಯತ್ನಗಳು ಮಾಡಿಕೊಂಡಿದೆ. ಅಂದಹಾಗೆ ಕಾಂಗ್ರೆಸ್ ಲಿಂಗಾಯತ, ಒಕ್ಕಲಿಗರು ಈ ಎರಡು ಸಮುದಾಯಕ್ಕಿಂತಲೂ ಹೆಚ್ಚಿನ ಒತ್ತನ್ನು ಬೇರೆ ಸಮುದಾಯಕ್ಕೆ ನೀಡಿ ಮತದಾರರ ಮನವೊಲಿಸುವಲ್ಲಿ ಸಫಲವಾಗಿದೆ. ಕಾಂಗ್ರೆಸ್ ಕುರುಬ ಸಮುದಾಯದ ಸಿದ್ಧರಾಮಯ್ಯ ಅವರನ್ನು ಸಿಎಂ ಮಾಡಿದ್ದು, ರಾಷ್ಟ್ರೀಯ ಅಧ್ಯಕ್ಷರನ್ನಾಗಿ ದಲಿತ ಮುಖಂಡ ಮಲ್ಲಿಕಾರ್ಜುನ್ ಖರ್ಗೆ ಅವರನ್ನು ನೇಮಕ ಮಾಡಿದ್ದು, ಭಾರಿ ಪೆಟ್ಟು ನೀಡಲು ತಂತ್ರರೂಪಿಸಿದೆ.



ತುಮಕೂರು ನಗರದ ಬಿಂದು ಮಹೇಶ್ ಹಿರಿಯ ಪುತ್ರನ ವಿವಾಹ ಮಹೋತ್ಸವ ಶ್ರೀಗಳ ಸಮ್ಮುಖದಲ್ಲಿ ನೆರವೇರಿತು.

# ಮೃಣಾಲ್ ಹೆಬ್ಬಾಳ್ಕರ್ ಪರ ನಿರಂಜನ ಹಿರೇಮಠ ಪ್ರಚಾರ ನೇಹಾ ಪೋಷಕರ ವಿರುದ್ಧ ಜಾಲತಾಣದಲ್ಲಿ ಆಕ್ರೋಶ

**ಬೆಳಗಾವಿ, ಮೇ.3–** ಹುಬ್ಬಳ್ಳಿಯ ನೇಹಾ ಹಿರೇಮಠ ಕೊಲೆ ಪ್ರಕರಣ ರಾಜ್ಯದಲ್ಲಿ ಸಂಚಲನ ಸೃಷ್ಟಿಸಿತ್ತು. ಈ ಪ್ರಕರಣ ರಾಜಕೀಯ ಸ್ವರೂಪ ಪಡೆದುಕೊಂಡಿದೆ.

ಇದೀಗ ನೇಹಾ ಹಿರಮೇಠ ತಂದೆ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಕಾಂಗ್ರೆಸ್ ಸದಸ್ಯ ನಿರಂಜನ ಹಿರೇಮಠ ಅವರು ಗುರುವಾರ (ಮೇ 02) ಲಕ್ಷ್ಮೀ ಹೆಬ್ಬಾಳ್ಕರ್ ಅವರನ್ನು ಬೆಳಗಾವಿಯಲ್ಲಿ ಭೇಟಿಯಾದರು. ಬಳಿಕ ಬೆಳಗಾವಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪರ ಪ್ರಚಾರ ಮಾಡಿದರು. ಇದು ನೆಟ್ಟಿಗರ ಆಕ್ರೋಶಕ್ಕೆ ಕಾರಣವಾಗಿದೆ.

**ಮೃಣಾಲ್ ಪರ ನಿರಂಜನ ಪ್ರಚಾರ:** ನೇಹಾ ಹಿರೇಮಠ ತಂದೆ ನಿರಂಜನ ಹಿರೇಮಠ ಗುರುವಾರ ಲಕ್ಷ್ಮೀ ಹೆಬ್ಬಾಳ್ಕರ್ ಮನೆಗೆ ಭೇಟಿ ನೀಡಿ, ಕೆಲವೊತ್ತು ಮಾತುಕತೆ ನಡೆಸಿದರು.



ಬಳಿಕ ಬೆಳಗಾವಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪರ ಪ್ರಚಾರ ಮಾಡಿದರು. ಪ್ರಚಾರ ಭಾಷಣದಲ್ಲಿ ನಿರಂಜನ ಹಿರೇಮಠ, ಹೆಬ್ಬಾಳ್ಕರ್ ಅವರಿಗೆ ಮತಹಾಕಿ ಎಂದು ಮತಯಾಚಿಸಿದರು.

> ಕಳೆದ ತಿಂಗಳು ಗುರುವಾರ (ಏ.18) ರಂದು ಮಧ್ಯಾಹ್ನ ಹುಬ್ಬಳ್ಳಿಯ ಬಿವಿಬಿ ಕಾಲೇಜು ಆವರಣದಲ್ಲಿ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಸದಸ್ಯ ನಿರಂಜನ ಹಿರೇಮಠ ಅವರ ಪುತ್ರಿ, ವಿದ್ಯಾರ್ಥಿನಿ ನೇಹಾ ಕೊಲೆಯಾಗಿತ್ತು. ಇದೀಗ ನೇಹಾ ಹಿರೇಮಠ ತಂದೆ ನಿರಂಜನ ಹಿರೇಮಠ ಬೆಳಗಾವಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪ್ರಚಾರ ಮಾಡಿದ್ದಾರೆ.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ದೇಶದ ಸಮಗ್ರ ಅಭಿವೃದ್ಧಿ, ಸುರಕ್ಷತೆಗೆ ಮೋದಿ ಗ್ಯಾರಂಟಿಯನ್ನು ಬೆಂಬಲಿಸಿ: ಅಮಿತ್ ಶಾ


**ಬೆಂಗಳೂರು, ಮೇ 4:** ಕುಟುಂಬವಾದದ ಕಾಂಗ್ರೆಸ್ ಬೇಕೇ? ಪರಂಪರೆ ಕಾಪಾಡುವ ಬಿಜೆಪಿ ಬೇಕೇ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಪ್ರಶ್ನಿಸಿದರು. ಹುಕ್ಕೇರಿಯಲ್ಲಿ ಇಂದು ಬೃಹತ್ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಭಾಷಣ ಮಾಡಿದ ಅವರು, ಮೋದಿಯವರಿಗೆ 10 ವರ್ಷ ಬೆಂಬಲ ನೀಡಿದ್ದೀರಿ ಎಂದರಲ್ಲದೆ, ಅಯೋಧ್ಯೆಯಲ್ಲಿ ರಾಮಮಂದಿರ ಮಾಡಬೇಕಿತ್ತೇ ಎಂದು ಪ್ರಶ್ನಿಸಿ 'ಹೌದು' ಎಂದು ಜನರಿಂದ ಉತ್ತರ ಪಡೆದರು.

ಕಾಂಗ್ರೆಸ್ ಪಕ್ಷವು ರಾಮಮಂದಿರ ನಿರ್ಮಾಣ ವಿಚಾರವನ್ನು ವಿಳಂಬ ಮಾಡಿತು. ಮೋದಿ ಮೊಕದ್ದಮ್ಮೆ ಗೆದ್ದು, ಭೂಮಿಪೂಜೆ ಮಾಡಿ ಪ್ರಾಣಪ್ರತಿಷ್ಠಾಪನೆಯನ್ನೂ ಮಾಡಿದರು. ರಾಹುಲ್, ಸೋನಿಯಾ, ಖರ್ಗೆಯವರಿಗೆ ಆಮಂತ್ರಣಪತ್ರ ಇದ್ದರೂ ಅವರು ಗೈರುಹಾಜರಾದರು. ಮತಬ್ಯಾಂಕ್‌ಗಾಗಿ ಈ ನಿರ್ಧಾರ ಮಾಡಿದ್ದಾರೆ. ಇವರಿಗೆ ಮತ ಕೊಡಲು ಸಾಧ್ಯವೇ ಎಂದು ಕೇಳಿದರು.

ಕಾಶಿ ವಿಶ್ವನಾಥ ಮಂದಿರವನ್ನು ಔರಂಗಜೇಬನು ಹಾಳುಮಾಡಿದ್ದ. ಕಾಶಿ ಕಾರಿಡಾರ್, ಸೋಮನಾಥ ಮಂದಿರ ಮೊದಲಾದ ಕೆಲಸಗಳನ್ನು ಮೋದಿಜೀ ಮಾಡಿದ್ದಾರೆ. ಕಾಂಗ್ರೆಸ್ ಪಕ್ಷವು ತುಷ್ಟೀಕರಣಕ್ಕಾಗಿ ಈ ಎಲ್ಲ ವಿಚಾರಗಳನ್ನು ಕಡೆಗಣಿಸಿತ್ತು ಎಂದು ಆಕ್ಷೇಪಿಸಿದರು. ಕಾಶ್ಮೀರ ನಮ್ಮದಲ್ಲವೇ ಎಂದು ಪ್ರಶ್ನಿಸಿದ ಅವರು, ಖರ್ಗೆಯವರು ನಮಗೆ ಕಾಶ್ಮೀರದ ಜೊತೆಗೇನು ಸಂಬಂಧ ಎನ್ನುತ್ತಾರೆ. ಆದರೆ, ಇಲ್ಲಿನ ಜನತೆ ಕಾಶ್ಮೀರಕ್ಕಾಗಿ ತಮ್ಮ ಪ್ರಾಣವನ್ನೇ ಕೊಡಲು ಸಿದ್ಧರಿದ್ದಾರೆ ಎಂದು ಹೇಳಿದರು. 370ನೇ ವಿಧಿ ರದ್ದು ಮಾಡಬೇಕಿತ್ತಲ್ಲವೇ ಎಂದು ಕೇಳಿದರು.

ಕಾಂಗ್ರೆಸ್ ಪಕ್ಷವು ಕಾಶ್ಮೀರಕ್ಕೆ 370ನೇ ವಿಧಿಯಡಿ ನೀಡಿದ್ದ ವಿಶೇಷ ಸ್ಥಾನಮಾನವನ್ನು ಮೋದಿ ಅವರು ರದ್ದುಮಾಡಿದ್ದಾರೆ.ಕಾಶ್ಮೀರದ ಆತಂಕವಾದ, ಭಯೋತ್ಪಾದನೆ ಈಗ ಇಲ್ಲವಾಗಿದೆ ಎಂದು ನುಡಿದರು. ರಾಹುಲ್ ಬಾಬಾ ಅವರು ಸಂಸತ್ತಿನಲ್ಲಿ ಆಗ ಮಾತನಾಡಿದ್ದರು. 370 ನೇ ವಿಧಿ ರದ್ದು ಮಾಡಿದರೆ ರಕ್ತದ ನದಿ ಹರಿಯುತ್ತದೆ ಎಂದಿದ್ದರು. 5 ವರ್ಷ ಕಳೆದರೂ ಏನೂ ಸಮಸ್ಯೆ ಆಗಿಲ್ಲ ಎಂದು ನುಡಿದರು. ಮೋದಿಜೀ ಅವರು ದೇಶವನ್ನು ಬಾಧಿಸುತ್ತಿದ್ದ ಭಯೋತ್ಪಾದಕತೆಯಿಂದ ಮುಕ್ತಿ ಕೊಟ್ಟಿದ್ದಾರೆ; ಪಿಎಫ್ಐ ನಿಷೇಧಿಸಿದ್ದಾರೆ.

ಎಸ್‌ಡಿಪಿಐ ಬೆಂಬಲದೊಂದಿಗೆ ಕಾಂಗ್ರೆಸ್ ಸರಕಾರ ನಡೆಯುತ್ತಿದೆ ಎಂದು ಟೀಕಿಸಿದ ಅವರು, ಬೆಂಗಳೂರು ಬಾಂಬ್ ಸ್ಫೋಟವನ್ನು ಪ್ರಸ್ತಾಪಿಸಿದರು. ನೇಹಾ ಹಿರೇಮಠ ಅವರ ಹತ್ಯೆ ಕೇಸನ್ನು ಸರಿಯಾಗಿ ತನಿಖೆ ಮಾಡಲು ಆಗದಿದ್ದರೆ ಸಿಬಿಐಗೆ ಕೊಡಿ ಎಂದು ರಾಜ್ಯ ಸರಕಾರಕ್ಕೆ ಎಚ್ಚರಿಸಿದರು. ಹಿಂದೂ ವಿರೋಧಿಗಳು ಮತ್ತು ಹಿಂದೂಗಳಿಗೆ ಅವಮಾನ ಮಾಡುವವರು ಮತ್ತು ಹಿಂದೂ ಸನಾತನ ಧರ್ಮ ಸಂರಕ್ಷಣೆ ಮಾಡುವವರ ನಡುವೆ ಮತಸಮರ ನಡೆದಿದೆ ಎಂದು ತಿಳಿಸಿದರು. ಅಣ್ಣಾ ಸಾಹೇಬ ಜೊಲ್ಲೆ ಅವರಿಗೆ ಕೊಟ್ಟ ಮತವು ಮೋದಿಯವರಿಗೆ ತಲುಪಲಿದೆ ಎಂದರು. ಕರ್ನಾಟಕದಲ್ಲಿ ಬಿಜೆಪಿ ಸರಕಾರ ಇದ್ದಾಗ ರೈತರಿಗೆ 10 ಸಾವಿರ ಸಿಗುತ್ತಿತ್ತು. ರಾಜ್ಯ ಸರಕಾರ ಕೊಡುತ್ತಿದ್ದ 4 ಸಾವಿರವನ್ನು ರದ್ದು ಮಾಡಿದ್ದಾರೆ. ಯಾಕೆ ಹೀಗೆ ಮಾಡಿದ್ದೀರಿ.ಬರಗಾಲ, ನೀರಿನ ಸಮಸ್ಯೆ ತೀವ್ರಗೊಂಡಿದೆ. ವಿದ್ಯುತ್ ಸಂಕಷ್ಟ ಎದುರಾಗಿದೆ. ಕಾಂಗ್ರೆಸ್ಸಿಗರು ಕರ್ನಾಟಕವನ್ನು ದಿವಾಳಿ ಮಾಡಿದ್ದಾರೆ. ಮೋದಿಯವರಿಗೆ ಮತ ಕೊಟ್ಟರೆ ಕರ್ನಾಟಕದ ಸಮಗ್ರ ಅಭಿವೃದ್ಧಿ ಮಾಡುತ್ತೇವೆ ಎಂದು ಅವರು ಪ್ರಕಟಿಸಿದರು. ನದಿ ಜೋಡಣೆ ಮೂಲಕ ನೀರಿನ ಸಮಸ್ಯೆ ಪರಿಹರಿಸುವುದಾಗಿ ತಿಳಿಸಿದರು. ಇಲ್ಲಿನ 3 ಲಕ್ಷ ಮನೆಗಳಿಗೆ ನಳ್ಳಿ ನೀರು ಸಂಪರ್ಕ, ಗ್ಯಾಸ್ ಸಂಪರ್ಕ, 2 ಲಕ್ಷ ರೈತರಿಗೆ ಕಿಸಾನ್ ಸಮ್ಮಾನ್ ಸೇರಿ ವಿವಿಧ ಅಭಿವೃದ್ಧಿ ಕಾರ್ಯಗಳ ಕುರಿತು ಕೂಡ ಅವರು ಇದೇವೇಳೆ ಮಾಹಿತಿ ಕೊಟ್ಟರು. ರಾಹುಲ್ ಬಾಬಾ ಕಂಪೆನಿಯಿಂದ ದೇಶವನ್ನು ಸುರಕ್ಷಿತವಾಗಿ ಇಡಲು ಸಾಧ್ಯವಿಲ್ಲ.



ಮೋದಿಜೀ ಅವರ ಅವಧಿಯಲ್ಲಿ ದೇಶ ಸುರಕ್ಷಿತವಾಗಿತ್ತು; ಸಮೃದ್ಧ ದೇಶವಾಗಿ ಭಾರತ ಹೊರಹೊಮ್ಮಿದೆ. ಸೋನಿಯಾ ಗಾಂಧಿ, ರಾಹುಲ್, ಮನಮೋಹನ್ ಸಿಂಗ್ ಅವರ ಸರಕಾರ ಇದ್ದಾಗ ಬಾಂಬ್ ಸ್ಫೋಟ, ಭಯೋತ್ಪಾದನೆ ನಿರಂತರವಾಗಿ ನಡೆದಿತ್ತು ಎಂದು ವಿವರಿಸಿದರು.

ಜಗತ್ತಿನ 3ನೇ ಪ್ರಮುಖ ಆರ್ಥಿಕ ಶಕ್ತಿಯಾಗಿ ಭಾರತ ಹೊರಹೊಮ್ಮಲು ಮೋದಿ ಗ್ಯಾರಂಟಿಯನ್ನು ಬೆಂಬಲಿಸಿ ಎಂದು ಮನವಿ ಮಾಡಿದರು. ರಾಹುಲ್ ಬಾಬಾ ಅಮೇಥಿಯಿಂದ ರಾಯಬರೇಲಿಗೆ ಓಡಿದ್ದಾರೆ. ರಾಹುಲ್ ಬಾಬಾಗೆ ಸೋಲು ಖಚಿತ ಎಂದು ತಿಳಿಸಿದರು. ಕೋವಿಡ್ ಲಸಿಕೆಯನ್ನು ಮೋದಿ ಲಸಿಕೆ ಎಂದು ರಾಹುಲ್ ಬಾಬಾ ಹೇಳಿದ್ದರು. ಅಲ್ಲದೆ ಸದ್ದಿಲ್ಲದೆ ರಾತ್ರಿ ಲಸಿಕೆ ಹಾಕಿಸಿಕೊಂಡಿದ್ದರು ಎಂದು ವ್ಯಂಗ್ಯವಾಡಿದರು.

ಒಂದೆಡೆ 12 ಲಕ್ಷ ಕೋಟಿಯ ಹಗರಣಗಳ, ಭ್ರಷ್ಟಾಚಾರ ಮಾಡಿದ ಕಾಂಗ್ರೆಸ್ ಪಕ್ಷ ಇದೆ. ಇನ್ನೊಂದೆಡೆ 23 ವರ್ಷ ಸಿಎಂ, ಪ್ರಧಾನಿ ಆಗಿದ್ದರೂ ಒಂದೇ ಒಂದು ಪೈಸೆಯ ಭ್ರಷ್ಟಾಚಾರದ ಆರೋಪ ಇಲ್ಲದ ಪ್ರಾಮಾಣಿಕರಾದ ನರೇಂದ್ರ ಮೋದಿಯವರು ಇದ್ದಾರೆ ಎಂದು ವಿಶ್ಲೇಷಿಸಿದರು. ಮುಂದಿನ 5 ವರ್ಷಗಳ ಕಾಲ ಇವರಿಬ್ಬರ ನಡುವೆ ಯಾರಿಗೆ ಅಧಿಕಾರ ಎಂಬುದನ್ನು ಆಯ್ಕೆ ನಡೆಸಬೇಕಿದೆ ಎಂದು ತಿಳಿಸಿದರು. ಅಣ್ಣಾಸಾಹೇಬ ಜೊಲ್ಲೆಯವರನ್ನು ಗೆಲ್ಲಿಸಿ; ಮೋದಿಜೀ ಅವರಿಗೆ 400ಕ್ಕೂ ಹೆಚ್ಚು ಸ್ಥಾನಗಳೊಂದಿಗೆ ಅಧಿಕಾರ ಕೊಡಿ ಎಂದು ವಿನಂತಿಸಿದರು.

ಭಾಷಣದ ಆರಂಭದಲ್ಲಿ ಜೈ ಶಿವಾಜಿ, ಜೈ ಭವಾನಿ ಘೋಷಣೆ ಕೂಗಿದರು. ಶಿವಾಜಿ ಮಹಾರಾಜರು ಹಿಂದವೀ ಸ್ವರಾಜ್ ಸ್ಥಾಪಿಸಿದ್ದರು ಎಂದು ನೆನಪಿಸಿದರು. ಅಭ್ಯರ್ಥಿ ಅಣ್ಣಾಸಾಹೇಬ ಜೊಲ್ಲೆ, ಪ್ರಮುಖರಾದ ಶಶಿಕಲಾ ಜೊಲ್ಲೆ, ಧುರ್ಯೋಧನ ಐಹೊಳೆ, ಡಾ.ರಾಜೇಶ್ ನೇರ್ಲಿಗೆ, ಈರಣ್ಣ ಕಡಾಡಿ, ಚಂದ್ರಶೇಖರ ಕವಟಗಿಮಠ, ನಿಖಿಲ್ ಕಟ್ಟಿ, ರಮೇಶ್ ಕತ್ತಿ, ರಮೇಶ್ ಕವಟಗಿಮಠ, ಮಹಾಂತೇಶ ಕವಟಗಿಮಠ, ಬಸವರಾಜ ಹುಂಡ್ರಿ ಪ್ರಮುಖರು ಇದ್ದರು.



ಪ್ರಧಾನಿ ನರೇಂದ್ರ ಮೋದಿ ಅವರು ಶುಕ್ರವಾರ ಜಾರ್ಖಂಡ್‌ನ ಚೈಬಾಸಾದಲ್ಲಿ ಬಿಜೆಪಿ ಕುಂತಿ ಅಭ್ಯರ್ಥಿ ಅರ್ಜುನ್ ಮುಂಡಾ ಮತ್ತು ಸಿಂಗ್‌ಭೂಮ್ ಅಭ್ಯರ್ಥಿ ಗೀತಾ ಕೋಡಾ ಪರವಾಗಿ ಚುನಾವಣಾ ಪ್ರಚಾರ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

# ವಿಚಾರಣೆಗೆ ಹಾಜರಾಗುವಂತೆ ಭವಾನಿ ರೇವಣ್ಣಗೆ ಎಸ್‌ಐಟಿ ನೋಟಿಸ್

**ಹಾಸನ, ಮೇ.3–** ಸಂಸದ ಪ್ರಜ್ವಲ್ ರೇವಣ್ಣ ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಭವಾನಿ ರೇವಣ್ಣಗೆ ಸ್ಥಳೀಯ ಪೊಲೀಸರ ಮೂಲಕ ಎಸ್‌ಐಟಿ ನೋಟಿಸ್ ನೀಡಿದೆ.

ಶನಿವಾರ ವಿಚಾರಣೆಗೆ ಹಾಜರಾಗಲು ಸೂಚನೆ ನೀಡಲಾಗಿದೆ. ಇಂದು ಸ್ಥಳೀಯರ ಪೊಲೀಸರು ಹಳೆನರಸೀಪುರದಲ್ಲಿರುವ ಎಚ್.ಡಿ. ರೇವಣ್ಣ ಮನೆಗೆ ನೋಟಿಸ್ ನೀಡಿ ಹೋಗಿರುವ ಬಗ್ಗೆ ಮಾಹಿತಿ ಸಿಗುತ್ತಿದ್ದು, ಭವಾನಿ



ರೇವಣ್ಣ ವಿಚಾರಣೆಗೆ ಹಾಜರಾಗುವಂತೆ ಎಸ್‌ಐಟಿ ನೋಟಿಸ್ ನೀಡಿದೆ ಎಂದು ತಿಳಿದುಬಂದಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಸಂಸದ ಪ್ರಜ್ವಲ್ ರೇವಣ್ಣ ಹಾಗೂ ಜೆಡಿಎಸ್ ಶಾಸಕ ಎಚ್ ಡಿ ರೇವಣ್ಣಗೆ ಎಸ್‌ಐಟಿ ವಿಚಾರಣೆ ಎರಡು ಬಾರಿ ನೋಟಿಸ್ ನೀಡಿದೆ. ನಾಳೆ ವಿಚಾರಣೆಗೆ ಹಾಜರಾಗುವಂತೆ ಅವರಿಗೂ ಕೂಡ ಎಸ್‌ಐಟಿ ನೋಟಿಸ್ ನೀಡಿದೆ. ಆದರೂ ಕೂಡ ಅವರಿಬ್ಬರೂ ಇದುವರೆಗೂ ಎಸ್‌ಐಟಿ ವಿಚಾರಣೆಗೆ ಹಾಜರಾಗಿಲ್ಲ.

# ಪ್ರಜ್ವಲ್ ವಿರುದ್ಧ ನ್ಯಾಯಾಧೀಶರ ಎದುರು ಸಂತ್ರಸ್ತೆ ಹೇಳಿಕೆ: ಜಿ.ಪರಮೇಶ್ವರ್

**ಬೆಂಗಳೂರು,ಮೇ.3–** ಹಾಸನ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಅವರ ವಿರುದ್ಧದ ಲೈಂಗಿಕ ದೌರ್ಜನ್ಯ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಸಂತ್ರಸ್ತೆಯೊಬ್ಬರು ನ್ಯಾಯಾಧೀಶರ ಮುಂದೆ ತಮ್ಮ ಹೇಳಿಕೆ ದಾಖಲಿಸಿದ್ದಾರೆ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದರು. ಸದಾಶಿವನಗರದ ತಮ್ಮ ನಿವಾಸದ ಬಳಿ ಇಂದು ಮಾಧ್ಯಮದವರೊಂದಿಗೆ



ಮಾತನಾಡಿದ ಅವರು, ಸಂತ್ರಸ್ತೆಯೊಬ್ಬರು ಪೊಲೀಸರಿಗೆ ದೂರು ನೀಡಿದ್ದಾರೆ.

ಎಸ್‌ಐಟಿ ಅಧಿಕಾರಿಗಳು ಒತ್ತಾಯಪೂರ್ವಕವಾಗಿ ಹೇಳಿಕೆ ಪಡೆದುಕೊಂಡಿದ್ದಾರೆ ಎಂಬ ಆರೋಪ ಬರಬಾರದು. ಅದಕ್ಕಾಗಿ ಮ್ಯಾಜಿಸ್ಟ್ರೇಟ್ ಮುಂದೆಯೇ ಸೆಕ್ಷನ್ 164 ಅಡಿ ಹೇಳಿಕೆ ಕೊಡಿಸಲಾಗಿದೆ ಎಂದು ಮಾಹಿತಿ ನೀಡಿದರು.

**ನೋಟಿಸ್‌ಗೆ ಸ್ಪಂದಿಸದಿದ್ದರೆ ಕಾನೂನು ಕ್ರಮ**

ಪ್ರಜ್ವಲ್ ರೇವಣ್ಣಗೆ ಸೆಕ್ಷನ್ 41ಂ ಅಡಿಯಲ್ಲಿ ನೋಟಿಸ್ ನೀಡಲಾಗಿದೆ. ಅವರ ಪರ ವಕೀಲರು ಕಾಲಾವಕಾಶ ಕೇಳಿದ್ದಾರೆ. ಇದಕ್ಕೆ ಅವಕಾಶವಿಲ್ಲ ಎಂದು ತಿಳಿಸಿದ್ದೇವೆ.

ರೇವಣ್ಣ ಅವರಿಗೂ ಕೂಡ 41ಂ ಅಡಿಯಲ್ಲೇ ನೋಟಿಸ್ ನೀಡಲಾಗಿದೆ. ರೇವಣ್ಣ ಸಹ 24 ಗಂಟೆ ಕಾಲಾವಕಾಶ ಕೇಳಿದ್ದಾರೆ. ಕಾನೂನು ಪ್ರಕಾರ ಮತ್ತೊಂದು ನೋಟಿಸ್ ನೀಡಿದ್ದೇವೆ. ಇದಕ್ಕೆ ಸ್ಪಂದಿಸದಿದ್ದರೆ, ಕಾನೂನು ಪ್ರಕಾರವೇ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಪ್ರಜ್ವಲ್ ರೇವಣ್ಣ ಕುರಿತು ಲುಕ್‌ಔಟ್ ನೋಟಿಸ್ ಹೊರಡಿಸಲಾಗಿದೆ.

ಎಲ್ಲ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಗಳಿಗೆ ಫೋಟೋಸಮೇತ ನೋಟಿಸ್ ಕಳುಹಿಸಲಾಗಿದೆ. ನಿಯಮಾನುಸಾರ ಪ್ರಕಾರವೇ ಲುಕ್ ಔಟ್ ನೋಟಿಸ್ ನೀಡಲಾಗಿದೆ.

ರೇವಣ್ಣ ಅವರ ಮನೆ ಮೇಲೆ ಎಸ್‌ಐಟಿ ದಾಳಿ ನಡೆಸಿರುವುದು ಗೊತ್ತಿಲ್ಲ. ಅವರು ದುಬೈಗೆ ಹೋಗಿರುವುದು ಗೊತ್ತಿಲ್ಲ. ಜರ್ಮನಿಗೆ ಹೋಗಿದ್ದಾರೆ ಎಂಬ ಮಾಹಿತಿ ಇದೆ. ಜರ್ಮನಿಯಿಂದ ಕರೆತರಲು ಕೇಂದ್ರದ ನೆರವು ಬೇಕು. 2ನೇ ನೋಟಿಸ್‌ಗೂ ಸ್ಪಂದಿಸದಿದ್ದರೆ ಮುಂದಿನ ತೀರ್ಮಾನವೇನು ಎಂಬುದನ್ನು ಎಸ್‌ಐಟಿ ಅಧಿಕಾರಿಗಳು ಕೈಗೊಳ್ಳುತ್ತಾರೆ ಎಂದರು.

# ಬ್ರಿಜ್‌ಭೂಷಣ್ ಪುತ್ರನಿಗೆ ಬಿಜೆಪಿ ಟಿಕೆಟ್: ಕುಸ್ತಿಪಟುಗಳ ನಿರಾಶೆ

**ನವದೆಹಲಿ, ಮೇ.3–** ಕುಸ್ತಿಪಟುಗಳಿಗೆ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಬಿಜೆಪಿ ಸಂಸದ, ಭಾರತೀಯ ಕುಸ್ತಿ ಒಕ್ಕೂಟದ ಮಾಜಿ ಅಧ್ಯಕ್ಷ ಬ್ರಿಜ್‌ಭೂಷಣ್ ಶರಣ್ ಸಿಂಗ್ ವಿರುದ್ಧ ಕುಸ್ತಿಪಟುಗಳು ವ್ಯಾಪಕ ಪ್ರತಿಭಟನೆ ನಡೆಸಿದ್ದರು. ಅವರನ್ನು ಆ ಬಳಿಕ ಕುಸ್ತಿ ಫೆಡರೇಶನ್ ಅಧ್ಯಕ್ಷ ಸ್ಥಾನದಿಂದ ಅಮಾನತುಗೊಳಿಸಿ ಪ್ರಕರಣ ದಾಖಲಿಸಲಾಗಿತ್ತು.

ಉತ್ತರಪ್ರದೇಶದ ಕೈಸರ್‌ಗಂಜ್ ಕ್ಷೇತ್ರದ ಸದ್ಯಸ ಬ್ರಿಜ್‌ಭೂಷಣ್ ಶರಣ್ ಸಿಂಗ್‌ಗೆ ಈ ಬಾರಿ ಟಿಕೆಟ್ ನೀಡಲಾಗಿಲ್ಲ. ಬದಲಾಗಿ ಆತನ ಪುತ್ರನಿಗೆ ಟಿಕೆಟ್ ನೀಡಲಾಗಿದ್ದು, ಕುಸ್ತಿಪಟುಗಳ ಆಕ್ಷೇಪಕ್ಕೆ ಕಾರಣವಾಗಿದೆ.

ಬ್ರಿಜ್ ಭೂಷಣ್ ಅವರ ಕಿರಿಯ ಮಗ ಕರಣ್(33) ಫೆಬ್ರವರಿಯಲ್ಲಿ ಉತ್ತರಪ್ರದೇಶ ಕುಸ್ತಿ ಸಂಸ್ಥೆಯ ಅಧ್ಯಕ್ಷರಾಗಿ ನೇಮಿಸಲಾಗಿತ್ತು. ಇದೇ ಕರಣ್ ಭೂಷಣ್ ಸಿಂಗ್‌ಗೆ ಲೋಕಸಭೆ ಚುನಾವಣೆಗೆ ಬಿಜೆಪಿ ಟಿಕೆಟ್ ನೀಡಿರುವುದು ಭಾರೀ ಟೀಕೆಗೆ ಕಾರಣವಾಗಿದೆ.

ಟಿಕೆಟ್ ಘೋಷಣೆಯಾಗುತ್ತಿದ್ದಂತೆ ಎಕ್ಸ್‌ನಲ್ಲಿ ಪ್ರತಿಕ್ರಿಯಿಸಿದ ರಿಯೋ ಒಲಿಂಪಿಕ್ಸ್ ಕಂಚಿನ ಪದಕ ವಿಜೇತೆ ಸಾಕ್ಷಿ ಮಲಿಕ್, ಭಾರತದ ಹೆಣ್ಣುಮಕ್ಕಳು ಸೋತಿದ್ದಾರೆ, ಬ್ರಿಜ್ ಭೂಷಣ್ ಗೆದ್ದಿದ್ದಾರೆ ಎಂದು ಬರೆದಿದ್ದಾರೆ.

ನಾವೆಲ್ಲರೂ ನಮ್ಮ ವೃತ್ತಿಜೀವನವನ್ನು ಪಣಕ್ಕಿಟ್ಟಿದ್ದೇವೆ, ಬೀದಿಯಲ್ಲಿ ದಿನಗಳನ್ನು ಕಳೆದಿದ್ದೇವೆ. ಬ್ರಿಜ್ ಭೂಷಣ್ ಅವರನ್ನು ಇನ್ನೂ ಬಂಧಿಸಿಲ್ಲ.

ನಾವು ಯಾವತ್ತೂ ಕೇಳಿದ್ದು ನ್ಯಾಯ ಮಾತ್ರ. ಆದರೆ ಬಂಧಿಸುವುದು ಬಿಡಿ, ಅವರ ಮಗನಿಗೆ ಟಿಕೆಟ್ ಸಿಕ್ಕಿದ್ದು ಅದು ಭಾರತದ ಕೋಟ್ಯಂತರ ಹೆಣ್ಣುಮಕ್ಕಳ ಉತ್ಸಾಹವನ್ನು ಮುರಿದಿದೆ. ಅವರ ಕುಟುಂಬಕ್ಕೆ ಟಿಕೆಟ್ ನೀಡಲಾಗಿದೆ. ಒಬ್ಬ ವ್ಯಕ್ತಿಯ ಮುಂದೆ ಸರ್ಕಾರ ಏಕೆ ದುರ್ಬಲವಾಗಿದೆ ನಿಮಗೆ ಬೇಕಾಗಿರುವುದು ಭಗವಾನ್ ರಾಮನ ಹೆಸರಿನಲ್ಲಿ ಮತಗಳು, ಅವರ ನೀತಿಗಳನ್ನು ಅನುಸರಿಸುವ ಬಗ್ಗೆ ನಿಮ್ಮ ನಿಲುವು ಏನು ಎಂದು ಸಾಕ್ಷಿ ಮಲಿಕ್ ಪ್ರಶ್ನಿಸಿದ್ದಾರೆ.

ಕಳೆದ ವರ್ಷ ಬ್ರಿಜ್‌ಭೂಷಣ್ ಅವರ ಸಹಾಯಕ ಸಂಜಯ್ ಸಿಂಗ್ WFI ಚುನಾವಣೆಯಲ್ಲಿ ಗೆದ್ದ ನಂತರ ಪ್ರತಿಭಟನೆ ವ್ಯಕ್ತಪಡಿಸಿ ಸಾಕ್ಷಿ ಮಲಿಕ್ ಕುಸ್ತಿಗೆ ನಿವೃತ್ತಿ ಘೋಷಿಸಿದ್ದರು. ನಾವು ತೀವ್ರವಾಗಿ ನಿರಾಶೆಗೊಂಡಿದ್ದೇವೆ. ಕುಸ್ತಿಪಟುಗಳಿಗೆ ಇನ್ನೂ ಯಾವುದೇ ನ್ಯಾಯ ಸಿಕ್ಕಿಲ್ಲ ಮತ್ತು ಕರಣ್ ಅವರಿಗೆ ಟಿಕೆಟ್ ಸಿಕ್ಕಿರುವುದು ಯಾರೂ ನಮ್ಮ ಬಗ್ಗೆ ನಿಜವಾಗಿಯೂ ಕಾಳಜಿ ವಹಿಸು ವುದಿಲ್ಲ ಎಂಬುವುದನ್ನು ತೋರಿಸುತ್ತದೆ. ನನ್ನ ಮಗಳು ಪ್ರತಿಭಟಿಸಿ ಕುಸ್ತಿಯನ್ನು ತೊರೆದಳು.

ಭಜರಂಗ್ ಮತ್ತು ವಿನೇಶ್ ಫೋಗಟ್ ತಮ್ಮ ರಾಷ್ಟ್ರೀಯ ಗೌರವಗಳನ್ನು ಹಿಂದಿರುಗಿಸಿದರು. ಎಲ್ಲವೂ ವ್ಯರ್ಥವಾಯಿತು ಎಂದು ತೋರುತ್ತದೆ ಎಂದು ಮಲಿಕ್ ಅವರ ತಾಯಿ ಹೇಳಿದ್ದಾರೆ. ಜೂನ್ 2023ರಲ್ಲಿ ದೆಹಲಿ ಪೊಲೀಸರು ಬ್ರಿಜ್‌ಭೂಷಣ್ ವಿರುದ್ಧ ಭಾರತೀಯ ದಂಡ ಸಂಹಿತೆಯ ಸೆಕ್ಷನ್ 354, 354ಅ, 345ಂಯಡಿ ದಾಖಲಾದ ಪ್ರಕರಣಕ್ಕೆ ಸಂಬಂಧಿಸಿ 1,000 ಪುಟಗಳ ಚಾರ್ಜ್‌ಶೀಟ್ ಸಲ್ಲಿಸಿದ್ದರು.

ಸದ್ಯ ಪ್ರಕರಣದ ವಿಚಾರಣೆ ದೆಹಲಿಯ ರೋಸ್ ಅವೆನ್ಯೂ ಕೋರ್ಟ್‌ನಲ್ಲಿ ನಡೆಯುತ್ತಿದೆ. ಈ ಕುರಿತ ಮುಂದಿನ ವಿಚಾರಣೆ ಮೇ.7ರಂದು ನಡೆಯಲಿದೆ.

ಕುಸ್ತಿಪಟು ಜಿತೇಂದರ್ ಕುಮಾರ್ ಈ ಬಗ್ಗೆ ಪ್ರತಿಕ್ರಿಯಿಸಿದ್ದು, ಕರಣ್‌ಗೆ ಬಿಜೆಪಿ ಟಿಕೆಟ್ ನೀಡಿರುವುದು ಬೆನ್ನಿಗೆ ಇರಿತ ಎಂದು ಕರೆದಿದ್ದಾರೆ. ಇದಕ್ಕಾಗಿಯೇ ನಾವು ರಸ್ತೆಗಳಲ್ಲಿ ಮಲಗಿದ್ದೇವೆಯೇ ನಾವು ಹೋರಾಟ ಮಾಡಿದ್ದು ಇದಕ್ಕಾಗಿಯೇ ಬ್ರಿಜ್ ಭೂಷಣ್



ಅವರ ಜನರು ಒಕ್ಕೂಟದ ನಾಯಕತ್ವ ವಹಿಸಿಕೊಂಡರು ಮತ್ತು ಈಗ ಅವರ ಮಗ ಚುನಾವಣೆಯಲ್ಲಿ ಸ್ಪರ್ಧಿಸಲಿದ್ದಾರೆ.

ಇದು ನಾಚಿಕೆಗೇಡಿನ ಸಂಗತಿ ಎಂದು ಹೇಳಿದ್ದಾರೆ. ಈ ಕುರಿತು ಪ್ರತಿಕ್ರಿಯಿಸಿರುವ ಬ್ರಿಜ್ ಭೂಷಣ್ ಶರಣ್ ಸಿಂಗ್ ವಿರುದ್ಧ ನಡೆದಿದ್ದ ಪ್ರತಿಭಟನೆಯಲ್ಲಿ ಮುಂಚೂಣಿಯಲ್ಲಿದ್ದ ಖ್ಯಾತ ಕುಸ್ತಿಪಟು ಬಜರಂಗ್ ಪುನಿಯ, ಬಿಜೆಪಿ ಮಹಿಳೆಯರ ಸುರಕ್ಷತೆ ಬಗ್ಗೆ ತಲೆಕೆಡಿಸಿಕೊಳ್ಳುವುದಿಲ್ಲ ಹಾಗೂ ಪರಿವಾರವಾದ ಅಥವಾ ವಂಶಪಾರಂಪರ್ಯ ರಾಜಕಾರಣ ಆಡಳಿತಾರೂಢ ಬಿಜೆಪಿಯಲ್ಲೂ ಬೇರೂರಿದೆ ಎಂದು ಹೇಳಿದ್ದಾರೆ.

# ಸರ್ಕಾರಿ ನೌಕರ ಸಂಬಳ ಇಲ್ಲವೆಂದರೆ ರಾಜಕೀಯ ನಿವೃತ್ತಿ–ಸಿದ್ದರಾಮಯ್ಯ

**ಬೆಂಗಳೂರು, ಮೇ.03–** ಗ್ಯಾರಂಟಿಗಳನ್ನು ಜಾರಿಗೆ ತಂದ ಮೇಲೆ ಸರ್ಕಾರದಲ್ಲಿ ಸಂಬಳ ಕೊಡಲು ದುಡ್ಡಿಲ್ಲ ಎಂದು ಸುಳ್ಳು ಹೇಳಿದ್ದಾರೆ. ಯಾರಾದರೂ ಸರ್ಕಾರಿ ನೌಕರ ನಮಗೆ ಸಂಬಳ ನಿಂತುಹೋಗಿದೆ ಎಂದರೆ ನಾನು ರಾಜಕೀಯ ನಿವೃತ್ತಿ ಪಡೆಯುತ್ತೇನೆ. ಸುಳ್ಳು ಹೇಳಲು ಇತಿಮಿತಿ ಇರಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.ಸುಳ್ಳು ಆರೋಪ ಮಾಡುವವರಿಗೆ ಕರ್ನಾಟಕದ ಹಣಕಾಸಿನ ಪರಿಸ್ಥಿತಿ ಗೊತ್ತಿದೆಯೋ ಇಲ್ಲವೋ ತಿಳಿದಿಲ್ಲ.ಖಜಾನೆ ಖಾಲಿಯಾಗಿದ್ದರೆ ನಾವು ಅಧಿಕಾರಕ್ಕೆ ಬಂದ ನಂತರ ಗ್ಯಾರಂಟಿಗಳನ್ನು ಜಾರಿ ಮಾಡಲು ಸಾಧ್ಯವಾಗುತ್ತಿತ್ತೇ? 36000 ಕೋಟಿ ರೂಗಳನ್ನು ವೆಚ್ಚ ಮಾಡಲು ಸಾಧ್ಯವಾಗುತ್ತಿತ್ತೆ. 1.20 ಲಕ್ಷ ಕೋಟಿ ರೂ.ಗಳನ್ನು ಅಭಿವೃದ್ಧಿಗೆ ಹಾಗೂ ಗ್ಯಾರಂಟಿಗಳಿಗೆ ಮೀಸಲಿರಿಸಲಾಗಿದೆ ನರೇಂದ್ರ ಮೋದಿಯವರೇ ಎಂದರು. ಕಾಂಗ್ರೆಸ್ ಸರ್ಕಾರದ ಮೇಲೆ ಅಪಪ್ರಚಾರ ಮಾಡುತ್ತಿದ್ದಾರೆ. ಮೊದಲು ಗ್ಯಾರಂಟಿ ಜಾರಿ ಮಾಡಿದರೆ ಆರ್ಥಿಕವಾಗಿ ದಿವಾಳಿಯಾಗುತ್ತಾರೆ ಎನ್ನುತ್ತಿದ್ದವರು ಈಗ ಚುನಾವಣೆಯಾಗುವರೆಗೆ ಮಾತ್ರ ಗ್ಯಾರಂಟಿಗಳು ಇರಲಿವೆ ಎನ್ನುತ್ತಿದ್ದಾರೆ. ಅಪಪ್ರಚಾರವನ್ನು ಬಿಜೆಪಿ ಕೂಡಲೇ ನಿಲ್ಲಿಸಬೇಕು. ಯಾವ ಕಾರಣಕ್ಕೂ ಗ್ಯಾರಂಟಿ ಯೋಜನೆಗಳು ನಿಲ್ಲುವುದಿಲ್ಲ ಎಂದರು. ಇದು ನಿರಂತರ. ಜನ ಆಶೀರ್ವದಿಸಿ ಮತ್ತೆ ಅಧಿಕಾರ ಕೊಟ್ಟರೇ ಮುಂದೆಯೂ ಜಾರಿಯಾಗಲಿದೆ ಎಂದರು. ಮೋದಿಯವರು ಲೂಟಿ ಹೊಡೆಯುವ ಗ್ಯಾಂಗ್ ಬಂದಿದೆ ಎಂದಿದ್ದಾರೆ. ನಾವು ಲೂಟಿ ಹೊಡೆಯುವವರಲ್ಲ. ಈ ರಾಜ್ಯದ ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು, ಮಹಿಳೆಯರು ಆರ್ಥಿಕವಾಗಿ ಸಾಮಾಜಿಕವಾಗಿ ಶಕ್ತಿ ತುಂಬುವವರು. ಸಮಾಜದ ಮುಖ್ಯವಾಹಿನಿಗೆ



ಅವರು ಬರಬೇಕೆಂದು ನಂಬಿಕೆ ಇಟ್ಟವರು ಕಾಂಗ್ರೆಸ್ ನವರು . ಲೂಟಿ ಮಾಡಲು ಬಂದಿದ್ದವರು ಬಿಜೆಪಿಯವರು ಎಂದರು. ಗುತ್ತಿಗೆದಾರರ ಸಂಘದವರು 40% ಸರ್ಕಾರ ಎಂದು ಹೇಳಿದ್ದರು. ಇದರ ತನಿಖೆಗೆ ಆಯೋಗ ಈಗಾಗಲೇ ರಚನೆಯಾಗಿ ತನಿಖೆ ನಡೆಯುತ್ತಿದೆ. ಆರೋಪ ಸಾಬೀತಾದರೆ ಲೂಟಿ ಹೊಡೆದ ಗ್ಯಾಂಗ್ ಪತ್ತೆಹಚ್ಚಿ ಶಿಕ್ಷೆ ಕೊಡಿಸುವ ಕೆಲಸ ಮಾಡುತ್ತೇವೆ. ನಾವು ನುಡಿದಂತೆ ನಡೆದಿದ್ದೇವೆ. ಮತ ಹಾಕುವ ಮುನ್ನ ನುಡಿದಂತೆ ಯಾರು ನಡೆದಿದ್ದಾರೆ ಎಂದು ಮತದಾರರು ಪರಿಶೀಲಿಸಬೇಕು ಎಂದರು.ಕೇಂದ್ರ ಸರ್ಕಾರದಲ್ಲಿ 30 ಲಕ್ಷ ಹುದ್ದೆಗಳು ಖಾಲಿ ಇವೆ. ಅವನ್ನೂ ಭರ್ತಿ ಮಾಡಿಲ್ಲ.ಭರ್ತಿ ಮಾಡಿದ್ದರೆ ದಲಿತರು ಹಿಂದುಳಿದವರಿಗೆ 50% ಮೀಸಲಾತಿ ದೊರೆಯುತ್ತಿತ್ತು. ಉಳಿದದ್ದು ಇತರರಿಗೆ ದೊರೆಯುತ್ತಿತ್ತು. ನರೇಂದ್ರ ಮೋದಿಯವರು ಅದನ್ನೂ ಮಾಡಲಿಲ್ಲ. ಎಲ್ಲಾ ಅಗತ್ಯ ವಸ್ತುಗಳ ಬೆಲೆ ಗಗನಕ್ಕೆ ಏರಿದೆ. ಇವನ್ನು ಕಡಿಮೆ ಮಾಡುವುದಾಗಿ ಹೇಳಿದ್ದರು. ಯಾವುದರ ಬೆಲೆಯೂ ಕಡಿಮೆ ಮಾಡಲು ಆಗಲಿಲ್ಲ. ಒಳ್ಳೆಯ ದಿನಗಳು ಬರುತ್ತವೆ ಎಂದು ಹೇಳಿ ಹತ್ತು ವರ್ಷಗಳಾದರೂ ಬಡವರ ಜೀವನ ಸುಧಾರಣೆ ಆಗಲಿಲ್ಲ. ಬದಲಿಗೆ ಕಷ್ಟಕ್ಕೆ ಸಿಲುಕಿದ್ದಾರೆ ಎಂದರು.

# ರೇವಣ್ಣಗೆ ಮತ್ತೊಂದು ಸಂಕಷ್ಟ: ಮಹಿಳೆ ಅಪಹರಣ ಮೊಕದ್ದಮೆ ದಾಖಲು–ಸತೀಶ್ ಬಾಬಣ್ಣ ಬಂಧನ

ಮೈಸೂರು, ಲೈಂಗಿಕ ದೌರ್ಜನ್ಯದ ಪ್ರಕರಣ ಎದುರಿಸುತ್ತಿರುವ ಜೆಡಿಎಸ್ ಶಾಸಕ ಎಚ್.ಡಿ. ರೇವಣ್ಣ ಅವರಿಗೆ ಮತ್ತೊಂದು ಸಂಕಷ್ಟ ಎದುರಾಗಿದೆ.ಮನೆಯಲ್ಲಿ ಕೆಲಸಕ್ಕಿದ್ದ ಮಹಿಳೆಯನ್ನು ಅಪಹರಿಸಿದ ಆರೋಪದ ಮೇಲೆ ಮೈಸೂರು ಜಿಲ್ಲೆಯ ಕೆ.ಆರ್. ನಗರ ಪೊಲೀಸ್ ಠಾಣೆಯಲ್ಲಿ ಗುರುವಾರ ಪ್ರಕರಣ ದಾಖಲಾಗಿದೆ.

ಈ ಪ್ರಕರಣದಲ್ಲೂ ಎಚ್.ಡಿ.ರೇವಣ್ಣ ಮೊದಲ ಆರೋಪಿ (ಎ1) ಹಾಗೂ ಕೆ. ಆರ್. ನಗರ ತಾಲ್ಲೂಕಿನ ಹೆಬ್ಬಾಳು ಕೊಪ್ಪಲಿನ ಸತೀಶ್ ಬಾಬಣ್ಣ ಎರಡನೇ ಆರೋಪಿಯಾಗಿದ್ದಾರೆ. ರೇವಣ್ಣ ಮನೆಯಲ್ಲಿ ಕೆಲಸ ಮಾಡುತ್ತಿದ್ದ ನನ್ನ ತಾಯಿಯನ್ನು ಅಪಹರಿಸಿದ್ದಾರೆ ಎಂದು ಅವರ ಪುತ್ರ ರಾಜು ದೂರು ನೀಡಿದ್ದು, ಎಫ್‌ಐಆರ್ ದಾಖಲಾಗಿದೆ. 'ನನ್ನ ತಾಯಿ ಆರು ವರ್ಷದಿಂದ ಹೊಳೆನರಸೀಪುರದ ಚೆನ್ನಾಂಬಿಕ ಥಿಯೇಟರ್ ಬಳಿ ಇರುವ ರೇವಣ್ಣ ಅವರ ಮನೆಯಲ್ಲಿ ಕೆಲಸ ಮಾಡುತ್ತಿದ್ದರು. ಕಳೆದ 3 ವರ್ಷದಿಂದ ಅಲ್ಲಿ ಕೆಲಸ ಬಿಟ್ಟಿದ್ದು, ಊರಿನಲ್ಲಿ ಕೂಲಿ ಮಾಡುತ್ತಿದ್ದರು. ಲೋಕಸಭಾ ಚುನಾವಣೆ ಸಮಯದಲ್ಲಿ ಭವಾನಿ ಅವರು ಮತ್ತೆ ಕೆಲಸಕ್ಕೆ ಕರೆದಿದ್ದಾರೆಂದು ಹೇಳಿ ಹೆಬ್ಬಾಳಕೊಪ್ಪಲಿನ ಸತೀಶ್ ಬಾಬಣ್ಣ ನನ್ನ ತಾಯಿಯನ್ನು ಕರೆದುಕೊಂಡು ಹೋಗಿದ್ದರು' ಎಂದು ತಿಳಿಸಿದ್ದಾರೆ.

'ಚುನಾವಣೆಯ ದಿನ ತಾಯಿಯನ್ನು ಮತ್ತೆ ಮನೆಗೆ ಕರೆದುಕೊಂಡು ಬಂದು ಬಿಟ್ಟಿದ್ದರು. ನಂತರ ಏ.29ರಂದು ರಾತ್ರಿ ಮನೆಗೆ ಬಂದ ಬಾಬಣ್ಣ ನಿಮ್ಮ ತಾಯಿ ಪೊಲೀಸರಿಗೆ ಸಿಕ್ಕರೆ ಪ್ರಕರಣ ದಾಖಲಾಗುತ್ತದೆ. ಅವರನ್ನು ರೇವಣ್ಣ ಸಾಹೇಬರು ಕರೆದುಕೊಂಡು ಹೋಗಲು ತಿಳಿಸಿದ್ದಾರೆಂದು ಹೇಳಿ ಒತ್ತಾಯದಿಂದ ಬೈಕ್‌ನಲ್ಲಿ ಕರೆದುಕೊಂಡು ಹೋಗಿದ್ದಾರೆ' ಎಂದು ಆರೋಪಿಸಿದ್ದಾರೆ.

'ಏ.1ರಂದು ನನ್ನ ಸ್ನೇಹಿತರು ಕೆಲವರು

**ಅಶ್ಲೀಲ ವಿಡಿಯೋ ವಿವಾದದಲ್ಲಿ ನನ್ನ ತಾಯಿ ಚಿತ್ರವೂ ಇದೆ. ವಿಡಿಯೋಗಳು ಬಹಿರಂಗವಾದ ಬಳಿಕ ತಾಯಿ ದಿಢೀರ್ ನಾಪತ್ತೆಯಾಗಿದ್ದಾರೆ ಎಂದು ಸಂತ್ರಸ್ತ ವ್ಯಕ್ತಿ ದೂರಿನಲ್ಲಿ ತಿಳಿಸಿದ್ದಾರೆ – ಮಹಿಳೆ ಪುತ್ರ**

ಮನೆಗೆ ಬಂದು, ನಿನ್ನ ತಾಯಿಯ ವಿಡಿಯೊ ಮೊಬೈಲ್ ಫೋನ್‌ನಲ್ಲಿ ಹರಿದಾಡುತ್ತಿದೆ. ನಿನ್ನ ತಾಯಿ ಕೈ ಮುಗಿದರೂ ಪ್ರಜ್ವಲ್ ಅಣ್ಣ ಬಲತ್ಕಾರ ಮಾಡಿರುವ ದೃಶ್ಯ ವಿಡಿಯೊದಲ್ಲಿದೆ. ಆ ಬಗ್ಗೆ ದೊಡ್ಡ ಪ್ರಕರಣವೂ ದಾಖಲಾಗಿದೆ ಎಂದರು. ಆಗ, ಬಾಬಣ್ಣ ಅವರಿಗೆ ಕರೆ ಮಾಡಿ ತಾಯಿಯನ್ನು ಕರೆದುಕೊಂಡು ಬನ್ನಿ ಎಂದು ತಿಳಿಸಿದೆ. ಅವರು, ಈ ಹಿಂದೆ ರೇವಣ್ಣ ಸಾಹೇಬರ ಮಗ ಬೇರೆಯವರೊಂದಿಗೆ ಗಲಾಟೆ ಮಾಡಿದಾಗ ನಿಮ್ಮ ತಾಯಿಯೂ ದೊಣ್ಣೆ ಹಿಡಿದು ನಿಂತಿರುವ ಫೋಟೊ ಬಂದಿದೆ. ಹೀಗಾಗಿ ಅವರ ಮೇಲೂ ಎಫ್.ಐ.ಆರ್. ದಾಖಲಾಗಿದೆ. ಇನ್ನು ಜಾಮೀನಿನ ಮೇಲೆ ಬಿಡಿಸಿಕೊಂಡು ಬರಬೇಕು ಎಂದರು. ಸತೀಶ್ ಅವರ ಹೀರೋ ಹೊಂಡಾ ಸ್ಪ್ಲೆಂಡರ್ ಬೈಕ್ ನಲ್ಲಿ ಕರೆದುಕೊಂಡು ಹೋದರು. ನನ್ನ ತಾಯಿಯನ್ನು ಎಲ್ಲಿಗೆ ಕರೆದುಕೊಂಡು ಹೋದರು ಎಂಬುದು ನಮಗೆ ಗೊತ್ತಿಲ್ಲ. ನಮ್ಮ ಮೇಲೆ ಪ್ರಕರಣ ದಾಖಲಾಗುತ್ತದೆ ಎಂದು ಸುಳ್ಳು ಹೇಳಿ ತಾಯಿಯನ್ನು ಒತ್ತಾಯದಿಂದ ಕರೆದೊಯ್ದು ನಮಗೆ ಗೊತ್ತಿಲ್ಲದ ಕಡೆ ಕೂಡಿಹಾಕಿದ್ದಾರೆ. ನನ್ನ ತಾಯಿಯ ಜೀವಕ್ಕೆ ತೊಂದರೆ ಇದೆ. ತಾಯಿಯನ್ನು ಕರೆದೊಯ್ಯಲು ಹೇಳಿದ ರೇವಣ್ಣ ಹಾಗೂ ಕರೆದೊಯ್ದ ಸತೀಶ್ ಬಾಬಣ್ಣ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು' ಎಂದು ದೂರಿನಲ್ಲಿ ಕೋರಿದ್ದಾರೆ.

ಪ್ರಕರಣದ 2ನೇ ಆರೋಪಿ ಸತೀಶ್ ಬಾಬಣ್ಣ ಅವರನ್ನು ಪೊಲೀಸರು ಬಂಧಿಸಿದ್ದು, ವಿಚಾರಣೆ ನಡೆಸುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.

**ಲೈಂಗಿಕ ದೌರ್ಜನ್ಯ ಪ್ರಕರಣ**

# ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ 2ನೇ ಎಫ್‌ಐಆರ್ ದಾಖಲು

**ಬೆಂಗಳೂರು, ಮೇ.3–** ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ದೂರು ಸಲ್ಲಿಕೆಯಾಗಿದ್ದು, ಇದೀಗ ಪ್ರಜ್ವಲ್ ರೇವಣ್ಣ ವಿರುದ್ಧ ಮತ್ತೊಂದು FIR ದಾಖಲಾಗಿದೆ. ಸಂತ್ರಸ್ತ ಮಹಿಳೆಯ ಪತಿ ಸಿಐಡಿ ಅಧಿಕಾರಿಗಳಿಗೆ ದೂರು ಸಲ್ಲಿಸಿದ್ದಾರೆ. ನಿನ್ನೆ ಹಾಸನ ಮೂಲದ ಸಿಐಡಿಗೆ ನೊಂದ ಮಹಿಳೆಯ ಪತಿಯಿಂದ ಪ್ರಜ್ವಲ್ ರೇವಣ್ಣ ವಿರುದ್ಧ ದೂರು ಸಲ್ಲಿಸಿದ್ದಾರೆ. ದೂರು ಆಧರಿಸಿ ಇದೀಗ ಸಿಐಡಿ ಅಧಿಕಾರಿಗಳು ದಾಖಲಿಸಿಕೊಂಡಿದ್ದಾರೆ. ಎಫ್‌ಐಆರ್ ನಲ್ಲಿ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಎ 1 ಆರೋಪಿ ಎಂದು ಹೇಳಲಾಗುತ್ತಿದೆ.

ಈ ವೇಳೆ ಸಂತ್ರಸ್ತ ಮಹಿಳೆ ದೂರಿನಲ್ಲಿ ಉಲ್ಲೇಖಿಸಿದ್ದು, ಮಗಳ ಓದಿನ ಬಗ್ಗೆ ಸಂತ್ರಸ್ತ ಮಹಿಳೆ ಸಹಾಯ ಕೇಳಿದ್ದಳು. ಹಾಸನದ ಸಂಸದರ ಮನೆಗೆ ಬರುವಂತೆ ತಿಳಿಸಿದರು. ಬೇರೆಯವರನ್ನು ಕಳಿಸಿ ನಮ್ಮನ್ನು ಮಾತ್ರ ಇರುವಂತೆ ಹೇಳಿದ್ದರು. ನಂತರ ರೂಮಿಗೆ ಕರೆದೊಯ್ದು ಅತ್ಯಾಚಾರಕ್ಕೆ ಯತ್ನಿಸಿದರು. ನಿನ್ನ ಪತಿಗೆ ಕಡಿಮೆ ಮಾತಾಡಲು ಹೇಳು. ಇಲ್ಲ ಅಂದರೆ ಸರಿ ಇರಲ್ಲ. ನನ್ನ ಬಳಿ ಗನ್ ಇದೆ ನಾವು ಹೇಳಿದಂತೆ ಕೇಳದಿದ್ದರೆ ಪತಿಯನ್ನು ಮುಗಿಸುವೆ ಎಂದು ನನಗೆ ಬೆದರಿಕೆ ಹಾಕಿದ್ದರು.

ಅದಕ್ಕೆ ನಾನು ಹೆದರಿಕೊಂಡು ಸುಮ್ಮನೆ ಕುಳಿತುಕೊಂಡೆ. ನಂತರ ನನ್ನ ಮೇಲೆ ಪ್ರಜ್ವಲ್ ಅತ್ಯಾಚಾರ ಎಸಗಿದ್ದಾರೆ. ಅತ್ಯಾಚಾರ ಎಸಗಿದ ದೃಶ್ಯವನ್ನು ಮೊಬೈಲ್‌ನಲ್ಲಿ ಸೆರೆಹಿಡಿದರು. ವಿಡಿಯೋದಲ್ಲಿ ನನ್ನ ಮುಖ ಇಲ್ಲ ಈ ವಿಚಾರ ಹೇಳಿದರೆ ವಿಡಿಯೋ ವೈರಲ್ ಮಾಡುವ ಬೆದರಿಕೆ ಕೂಡ ಹಾಕಿದ್ದರು ಎಂದು ಮಹಿಳೆ ದೂರು ಸಲ್ಲಿಸಿದ್ದಾಳೆ ಇದೀಗ ಸಂತ್ರಸ್ತ ಮಹಿಳೆ ಹೇಳಿಕೆಯನ್ನು ಉಲ್ಲೇಖಿಸಿದ್ದಾರೆ.

ಈ ಹೇಳಿಕೆ ಆಧರಿಸಿ ಅಧಿಕಾರಿಗಳು ಈಗಾಗಲೇ ಲೈಂಗಿಕ ದೌರ್ಜನ್ಯ ಆರೋಪದಡಿ ದಾಖಲಾಗಿದ್ದ ಎಫ್‌ಐಆರ್‌ಗೆ ಹೊಸದಾಗಿ ಐಪಿಸಿ ಸೆಕ್ಷನ್–376 ಅನ್ನು ಸೇರ್ಪಡೆಗೊಳಿಸುವ ಮೂಲಕ ಅತ್ಯಾಚಾರ



ಪ್ರಕರಣ ದಾಖಲಿಸಿಕೊಂಡಿದ್ದಾರೆ. ಪ್ರಜ್ವಲ್ ರೇವಣ್ಣ ಹಲವು ಆಮಿಷವೊಡ್ಡಿ ಅತ್ಯಾಚಾರ ಎಸಗಿದ್ದಾರೆ ಎಂದು ಸಂತ್ರಸ್ತೆ ನ್ಯಾಯಾಧೀಶರ ಮುಂದೆ ಹೇಳಿದ್ದಾರೆ. ಸಿಆರ್‌ಪಿಸಿ 164 ಅಡಿಯಲ್ಲಿ ಹೇಳಿಕೆ ದಾಖಲಿಸಲಾಗಿದೆ. ಸಂತ್ರಸ್ತೆಯ ಮಾಹಿತಿಯನ್ನು ಗೌಪ್ಯವಾಗಿರಿಸಲಾಗಿದೆ.

**ಪ್ರಜ್ವಲ್ ಬಂಧನ ಖಚಿತ:**

ಪ್ರಕರಣಕ್ಕೆ ಸಂಬಂಧಿಸಿದಂತೆ ಮತ್ತೊಂದು ದೂರು ದಾಖಲಾಗಿದೆ. ಈ ದೂರಿನಲ್ಲಿ ಬಿಗಿಯಾದ ಸೆಕ್ಷನ್‌ಗಳನ್ನು ದಾಖಲಿಸಲಾಗಿದ್ದು, ಇದರಡಿ ಪ್ರಜ್ವಲ್ ಅವರ ಬಂಧನ ಖಚಿತವಾಗಿದೆ. ಪ್ರಜ್ವಲ್ ರೇವಣ್ಣ ಮೇಲೆ ದಾಖಲಾಗಿರುವ ಎರಡನೇ ಎಫ್‌ಐಆರ್ ಸಿಐಡಿ ಸೈಬರ್ ಠಾಣೆಯಲ್ಲಿ ದಾಖಲಾಗಿದೆ.

ಎರಡನೇ ಎಫ್‌ಐಆರ್‌ನಲ್ಲಿ ದಾಖಲಿಸಿರುವ ಸೆಕ್ಷನ್‌ಗಳು ಹೆಚ್ಚು ಬಿಗಿಯಾಗಿದ್ದು, ತನಿಖೆಗೆ ಹಾಸನ ಸಂಸದರ ಬಂಧನವನ್ನು ಅನಿವಾರ್ಯವಾಗಿಸಿವೆ. ಐಪಿಸಿ376(2)ಎನ್ 506,354ಎ1, 354ಬಿ, 354ಸಿ ಸೆಕ್ಷನ್‌ಗಳು ಹಾಗೂ ಐಟಿ ಕಾಯ್ದೆ ಅಡಿ ಎಫ್‌ಐಆರ್ ದಾಖಲಿಸಲಾಗಿವೆ.




ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ಶುಕ್ರವಾರ ರಾಯಚೂರಿನಲ್ಲಿ ಮಹಿಳಾ ಕಾಂಗ್ರೆಸ್ ಕಾರ್ಯಕರ್ತರು ಧರಣಿ ನಡೆಸಿದರು

# ಸಿಎಎ ಪೌರತ್ವ: ಪ್ರಕ್ರಿಯೆಗೆ ಈ ತಿಂಗಳಲ್ಲೇ ಚಾಲನೆ: ಅಮಿತ್ ಶಾ

**ನವದೆಹಲಿ, ಮೇ.3–**ದೇಶದಲ್ಲಿ ನಡೆಯುತ್ತಿರುವ ಲೋಕಸಭಾ ಚುನಾವಣೆಯ ಕೊನೆಯ ಹಂತದ ಮೊದಲು ಪೌರತ್ವ ತಿದ್ದುಪಡಿ ಕಾಯ್ದೆ ಅಥವಾ ಸಿಎಎ ಅಡಿಯಲ್ಲಿ ಮೊದಲ ಪೌರತ್ವವನ್ನು ನೀಡಲಾಗುವುದು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಗುರುವಾರ ಹೇಳಿದ್ದಾರೆ. ಸಿಎಎ ಅಡಿಯಲ್ಲಿ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದೆ.

ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು ಮಾರ್ಚ್‌ನಲ್ಲಿ ಸಿಎಎ ಅನ್ನು ಜಾರಿಗೆ ತಂದಿತು, ಇದು ಡಿಸೆಂಬರ್ 31, 2014 ಕ್ಕಿಂತ ಮೊದಲು ಭಾರತಕ್ಕೆ ಪ್ರವೇಶಿಸಿದ ಪಾಕಿಸ್ತಾನ, ಬಾಂಗ್ಲಾದೇಶ ಮತ್ತು ಅಫ್ಘಾನಿಸ್ತಾನದಿಂದ ದಾಖಲೆರಹಿತ ಮುಸ್ಲಿಮೇತರ ವಲಸಿಗರಿಗೆ ಪೌರತ್ವ ಪಡೆಯಲು ಅವಕಾಶ ಮಾಡಿಕೊಡುತ್ತದೆ. ಡಿಸೆಂಬರ್ 2019 ರಲ್ಲಿ ಸಂಸತ್ತು ಕಾನೂನು ಅಂಗೀಕರಿಸಿದ ನಾಲ್ಕು ವರ್ಷಗಳ ನಂತರ ಮಹತ್ವದ ಬೆಳವಣಿಗೆ



ಬಂದಿದೆ.

**ಪ್ರತಿಪಕ್ಷಗಳ ಟೀಕೆ:** ಸಿಎಎ ಬಗ್ಗೆ ವಿರೋಧ ಪಕ್ಷಗಳು ಮೊದಲಿನಿಂದಲೂ ವಿರೋಧ ವ್ಯಕ್ತಪಡಿಸಿಕೊಂಡು ಬಂದಿವೆ. ಕಾಯ್ದೆಯಲ್ಲಿರುವ ಅಧಿಸೂಚಿತ ನಿಯಮಗಳು ಅಸಂವಿಧಾನಿಕ, ತಾರತಮ್ಯ ಮತ್ತು ಸಂವಿಧಾನದಲ್ಲಿ ಪ್ರತಿಪಾದಿಸಲಾದ ಪೌರತ್ವದ ಜಾತ್ಯತೀತ ತತ್ವದ ಉಲ್ಲಂಘನೆಯಾಗಿದೆ ಎಂದು ಹೇಳಿವೆ.

ಗುರುವಾರ ನೀಡಿದ ಸಂದರ್ಶನದಲ್ಲಿ ಅಮಿತ್ ಶಾ, ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಎನ್ಡಿಎ 400 ಸ್ಥಾನಗಳನ್ನು ದಾಟುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಮತ ಎಣಿಕೆ ದಿನ ಮಧ್ಯಾಹ್ನ 12.30 ಕ್ಕೆ ಮುನ್ನವೇ ಎನ್ಡಿಎ 400ರ ಗಡಿಯನ್ನು ದಾಟುತ್ತದೆ. ಮೋದಿ ಮತ್ತೆ ಪ್ರಧಾನಿಯಾಗುತ್ತಾರೆ. ಮೊದಲ ಎರಡು ಹಂತಗಳಲ್ಲಿ ನೂರಕ್ಕೂ ಹೆಚ್ಚು ಸೀಟುಗಳನ್ನು ಗೆಲ್ಲುವ ವಿಶ್ವಾಸವಿದೆ. 400ರ ಗುರಿಯನ್ನು ದಾಟುವಲ್ಲಿ ನನಗೆ ಯಾವುದೇ ಸಂಶಯವಿಲ್ಲ ಎಂದು ಸುದ್ದಿ ಸಂಸ್ಥೆಗೆ ನೀಡಿದ ಸಂದರ್ಶನದಲ್ಲಿ ತಿಳಿಸಿದ್ದಾರೆ.

# ಬಿಜೆಪಿಯಿಂದ ಧರ್ಮದ ಆಯುಧ ಬಳಕೆ: ಪರಕಾಲ ಪ್ರಭಾಕರ್ ಆರೋಪ


**ಕೋಲ್ಕತ್ತಾ, ಮೇ 3:** ಬಿಜೆಪಿ ಆಡಳಿತದ ನವ ಭಾರತದಲ್ಲಿ ರಾಜಕೀಯ ಉದ್ದೇಶಗಳಿಗಾಗಿ ಧರ್ಮವನ್ನು ಆಯುಧವನ್ನಾಗಿಸಲಾಗಿದೆ ಎಂದು ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಪತಿ ಹಾಗೂ ರಾಜಕೀಯ ಅರ್ಥಶಾಸ್ತ್ರಜ್ಞ ಪರಕಾಲ ಪ್ರಭಾಕರ್ ಹೇಳಿದ್ದಾರೆ.

ಕೋಲ್ಕತ್ತಾದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಪರಕಾಲ ಪ್ರಭಾಕರ್, ಒಕ್ಕೂಟ ವ್ಯವಸ್ಥೆಯನ್ನು ನಾಶಪಡಿಸುವ ಪ್ರಯತ್ನಗಳು ನಡೆದಿವೆ. ದೇಶದಲ್ಲಿ ಧರ್ಮವು ಯಾವಾಗಲೂ ಇತ್ತು. ಆದರೆ, ಬಿಜೆಪಿ ಆಡಳಿತದ ಈ 'ನವ ಭಾರತ'ದಲ್ಲಿ ಹೊಸ ವಿಷಯವೆಂದರೆ ರಾಜಕೀಯ ಉದ್ದೇಶಗಳು ಮತ್ತು ಹಿತಾಸಕ್ತಿಗಳಿಗಾಗಿ ಧರ್ಮವನ್ನು ಆಯುಧವನ್ನಾಗಿಸಲಾಗಿದೆ ಎಂದು ಹೇಳಿದ್ದಾರೆ.

ದೇಶದ ಆರ್ಥಿಕ ಮತ್ತು ಸಾಮಾಜಿಕ ವ್ಯವಸ್ಥೆಯು ಅಪಾಯದಲ್ಲಿದೆ. ಕೇಂದ್ರ ಸರ್ಕಾರವು ಟೀಕೆಗಳನ್ನು ಸ್ವೀಕರಿಸುವುದಿಲ್ಲ. ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗಿಯಾಗದೆ ಇರುವವರು ತಮ್ಮನ್ನು ತಾವು ಸ್ವಾತಂತ್ರ್ಯ ಹೋರಾಟಗಾರರೆಂದು ಕರೆದುಕೊಳ್ಳುತ್ತಿದ್ದಾರೆ. ಇದು ನಾಚಿಗೇಡಿನ ಸಂಗತಿ. ನವಭಾರತದಲ್ಲಿ ಅಸಮಾನತೆ ತಾಂಡವವಾಡುತ್ತಿದೆ. ಆರ್ಥಿಕವಾಗಿ ಸಶಕ್ತರಾಗಿರುವ ಶೇಕಡ ಒಂದರಷ್ಟು ಜನರು ರಾಷ್ಟ್ರದ ಶೇ.40ರಷ್ಟು ಸಂಪನ್ಮೂಲವನ್ನು ಹೊಂದಿದ್ದಾರೆ ಎಂದು ಪರಕಾಲ ಪ್ರಭಾಕರ್ ಹೇಳಿದ್ದಾರೆ.

ಮೋದಿ ನೇತೃತ್ವದ ಪ್ರಸ್ತುತ ಬಿಜೆಪಿ ಸರಕಾರದ ಪ್ರಬಲ ಟೀಕಾಕಾರಾಗಿರುವ ಪರಕಾಲ ಪ್ರಭಾಕರ್ ಅವರು ಒರ್ವ ಭಾರತೀಯ ರಾಜಕೀಯ ಅರ್ಥಶಾಸ್ತ್ರಜ್ಞ ಮತ್ತು ಸಾಮಾಜಿಕ ವಿಮರ್ಶಕರಾಗಿದ್ದಾರೆ. ಇವರು ಲಂಡನ್ ಸ್ಕೂಲ್ ಆಫ್ ಎಕನಾಮಿಕ್ಸ್‌ನಿಂದ ಪಿಹೆಚ್ಡಿ ಪಡೆದಿದ್ದರು. ಜುಲೈ 2014 ಮತ್ತು ಜೂನ್ 2018ರ ನಡುವೆ ಸಂವಹನ ಸಲಹೆಗಾರರಾಗಿ ಆಂಧ್ರ ಪ್ರದೇಶ ಸರ್ಕಾರದಲ್ಲಿ ಕ್ಯಾಬಿನೆಟ್ ದರ್ಜೆಯ ಸ್ಥಾನವನ್ನು ಹೊಂದಿದ್ದರು.

ನೋಟು ರದ್ದತಿಯನ್ನು ಒಂದು ದೊಡ್ಡ ಪ್ರಮಾದ ಎಂದು ಕರೆದಿದ್ದ ಪರಕಾಲ ಪ್ರಭಾಕರ್, ಅರ್ಥಶಾಸ್ತ್ರದಲ್ಲಿ ಮೂಲಭೂತ ತರಬೇತಿ ಹೊಂದಿರುವ ಯಾವುದೇ ಅರ್ಥಶಾಸ್ತ್ರಜ್ಞರು, ಇಷ್ಟು ದೊಡ್ಡ ಪ್ರಮಾಣದಲ್ಲಿ ನೋಟು ಅಮಾನೀಕರಣವನ್ನು ಶಿಫಾರಸು ಮಾಡುತ್ತಿರಲಿಲ್ಲ ಎಂದು ಹೇಳಿದ್ದರು. ಸ್ವಾತಂತ್ರ್ಯ ಹಾಗೂ ಸಂವಿಧಾನ ರೂಪಿಸಿದ ಆಶಯಗಳಿಗೆ ವಿರುದ್ಧವಾಗಿ ದೇಶ ಸಾಗುತ್ತಿದೆ.



ಜನರು ಭ್ರಮೆಗಳನ್ನೇ ವಾಸ್ತವವೆಂದು ನಂಬಿಕೊಂಡು ಸಂಭ್ರಮಿಸುತ್ತಿದ್ದಾರೆ.

ಕೇಂದ್ರದ ಯೋಜನೆಗಳ ಶೇ 80ರಷ್ಟು ಹಣವನ್ನು ಪ್ರಚಾರಕ್ಕೆ ಬಳಸಲಾಗುತ್ತಿದೆ. ಪ್ರಶ್ನಿಸಿದವರನ್ನು ಹತ್ತಿಕ್ಕುವ ಕೆಲಸ ನಡೆಯುತ್ತಿದೆ. ಭಿನ್ನಾಭಿಪ್ರಾಯಕ್ಕೆ ಅವಕಾಶ ನೀಡುತ್ತಿಲ್ಲ ಎಂದು ಅವರು ಹೇಳಿದ್ದರು.

# ಲಡಾಖ್‌ನ ಬಿಜೆಪಿ ಸಂಸದ ತ್ಸೆರಿಂಗ್ ನಮ್ಗ್ಯಾಲ್‌ಗೆ ಕಾಂಗ್ರೆಸ್ ಟಿಕೆಟ್

**ಲಡಾಖ್, ಮೇ3–** ಲಡಾಖ್ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಹಾಲಿ ಸಂಸದ ತ್ಸೆರಿಂಗ್ ನಮ್ಗ್ಯಾಲ್‌ಗೆ ಪಕ್ಷದಿಂದ ಟಿಕೆಟ್ ಕೈತಪ್ಪಿದ್ದು ಹೊಸ ಅಭ್ಯರ್ಥಿಯನ್ನು ಬಿಜೆಪಿ ಘೋಷಿಸಿದೆ. ಬಿಜೆಪಿ ಹಾಲಿ ಸಂಸದನಿಗೆ ಕಾಂಗ್ರೆಸ್ ಟಿಕೆಟ್ ನೀಡಿದ್ದು, ಪಕ್ಷದ ಅಧಿಕೃತ ಅಭ್ಯರ್ಥಿಯನ್ನಾಗಿ ಘೋಷಣೆ ಮಾಡಿದೆ. ಈ ಮೂಲಕ ಕೇಂದ್ರಾಡಳಿತ ಪ್ರದೇಶದಲ್ಲಿ ಕಾಂಗ್ರೆಸ್–ಬಿಜೆಪಿ ನಡುವೆ ಜಿದ್ದಾಜಿದ್ದಿನ ಸ್ಪರ್ಧೆ ಏರ್ಪಡಲಿದೆ. ಕಾಂಗ್ರೆಸ್ ಈ ಬಗ್ಗೆ ಅಧಿಕೃತ ಘೋಷಣೆ ಮಾಡಿದ್ದು, ಕೇಂದ್ರ ಚುನಾವಣಾ ಸಮಿತಿ ತ್ಸೆರಿಂಗ್ ನಮ್ಗ್ಯಾಲ್ ಅವರನ್ನು ಲಡಾಖ್ ನಲ್ಲಿ ಪಕ್ಷದ ಅಭ್ಯರ್ಥಿಯನ್ನಾಗಿ ಘೋಷಣೆ ಮಾಡುವುದಕ್ಕೆ ಅನುಮೋದನೆ ನೀಡಿದೆ ಎಂದು ಹೇಳಿದೆ. ಇದಕ್ಕೂ ಮೊದಲು ಬಿಜೆಪಿ ಏ.23 ರಂದು ಲಡಾಖ್‌ನಿಂದ ತಾಶಿ ಗ್ಯಾಲ್ಸನ್ ಅವರನ್ನು ಅಭ್ಯರ್ಥಿಯನ್ನಾಗಿ ಘೋಷಿಸಿತ್ತು.

ತಾಶಿ ಗ್ಯಾಲ್ಸನ್ ಅವರು ಲಿಂಗ್ಶೆಡ್ ಕ್ಷೇತ್ರದ ಕೌನ್ಸಿಲರ್ ಆಗಿದ್ದಾರೆ ಮತ್ತು 2020 ರಲ್ಲಿ 6ನೇ ಲಡಾಖ್ ಸ್ವಾಯತ್ತ ಗುಡ್ಡಗಾಡು ಅಭಿವೃದ್ಧಿ ಮಂಡಳಿ, (LAHDC), ಲೇಹ್‌ನ ಅಧ್ಯಕ್ಷ ಮತ್ತು ಮುಖ್ಯ



ಕಾರ್ಯನಿರ್ವಾಹಕ ಕೌನ್ಸಿಲರ್ ಆಗಿ ಆಯ್ಕೆಯಾಗಿದ್ದರು. ಲಡಾಖ್ ವಿಷಯವಾಗಿ ಉಪವಾಸ ಮುಷ್ಕರ ಕೈಬಿಟ್ಟ ಸೋನಮ್ ವಾಂಗ್ ಚುಕ್ 2019 ರ ಚುನಾವಣೆಯಲ್ಲಿ, ಬಿಜೆಪಿ ಪಕ್ಷದ ಜಮ್ಯಾಂಗ್ ತ್ಸೆರಿಂಗ್ ನಮ್ಗ್ಯಾಲ್ ಅವರು ಲಡಾಖ್‌ನಲ್ಲಿ ವಿಜಯಶಾಲಿಯಾಗಿ ಹೊರಹೊಮ್ಮಿದರು, 42,914 ಮತಗಳು ಮತ್ತು 33.9 ಶೇಕಡಾ ಮತಗಳೊಂದಿಗೆ ಗಮನಾರ್ಹ ಜನಾದೇಶವನ್ನು ಪಡೆದರು. ಸಜ್ಜದ್ ಹುಸೇನ್ ಸ್ವತಂತ್ರ ಅಭ್ಯರ್ಥಿ 31,984 ಮತಗಳನ್ನು ಗಳಿಸಿದ್ದರು. ಲಡಾಖ್‌ನಲ್ಲಿ ಮೇ.20 ರಂದು ಚುನಾವಣೆ ನಡೆಯಲಿದೆ.

# ಗಾಂಧಿ ಕುಟುಂಬದ ಭದ್ರಕೋಟೆ ರಾಯ್‌ಬರೇಲಿ

**ನವದೆಹಲಿ, ಮೇ.3–** ಗಾಂಧಿ ಕುಟುಂಬದ ಭದ್ರಕೋಟೆ ಉತ್ತರ ಪ್ರದೇಶದ ರಾಯ್ ಬರೇಲಿಯಿಂದ ರಾಹುಲ್ ಗಾಂಧಿ ಸ್ಪರ್ಧಿಸಿದ್ದಾರೆ. ರಾಹುಲ್ ಗಾಂಧಿ ರಾಯ್‌ಬರೇಲಿಯಿಂದ ಸ್ಪರ್ಧಿಸುತ್ತಿರುವ ಗಾಂಧಿ ಕುಟುಂಬದ ಎಂಟನೇ ಸದಸ್ಯರಾಗಿದ್ದಾರೆ. ರಾಯ್ ಬರೇಲಿಯಲ್ಲಿ ಮೊದಲ ಲೋಕಸಭೆ ಚುನಾವಣೆಯಿಂದ ಈವರೆಗೂ ಹಲವು ಏಳುಬೀಳುಗಳನ್ನು ನೋಡಿದೆ. ಅದಾಗ್ಯೂ ಕ್ಷೇತ್ರದ ಜನರು ಬಹುತೇಕ ಸಂದರ್ಭದಲ್ಲಿ ಗಾಂಧಿ ಕುಟುಂಬದ್ದೇ ಮೇಲುಗೈ ಮಾಡಿದ್ದಾರೆ.


ರಾಯ್ ಬರೇಲಿ ಲೋಕಸಭೆ ಚುನಾವಣಾ ಇತಿಹಾಸ ಸಾಕಷ್ಟು ಕುತೂಹಲಕಾರಿ ಘಟ್ಟಗಳನ್ನು ನೋಡಿದೆ. 1951–52 ರಲ್ಲಿ ನಡೆದ ಮೊದಲ ಲೋಕಸಭಾ ಚುನಾವಣೆಯಲ್ಲಿ ರಾಯ್ ಬರೇಲಿ ಮತ್ತು ಪ್ರತಾಪಗಢ ಜಿಲ್ಲೆಗಳನ್ನು ಒಳಗೊಂಡ ಒಂದು ಲೋಕಸಭಾ ಸ್ಥಾನವಿತ್ತು. ಇಂದಿರಾ ಗಾಂಧಿ ಅವರ ಪತಿ ಫಿರೋಜ್ ಗಾಂಧಿ ಅವರು ಇಲ್ಲಿಂದ ಕಾಂಗ್ರೆಸ್ ಟಿಕೆಟ್‌ನಲ್ಲಿ ಸ್ಪರ್ಧಿಸಿ ಗೆದ್ದಿದ್ದರು. 1957ರಲ್ಲಿ ರಾಯ್ ಬರೇಲಿ ಕ್ಷೇತ್ರ ಅಸ್ತಿತ್ವಕ್ಕೆ ಬಂದಾಗ ಫಿರೋಜ್ ಗಾಂಧಿ ಮತ್ತೊಮ್ಮೆ ಇಲ್ಲಿಂದ ಸಂಸದರಾದರು. ಇಂದಿರಾ ಮತ್ತು ಫಿರೋಜ್ ಗಾಂಧಿ 26 ಮಾರ್ಚ್ 1942ರಂದು ವಿವಾಹ ವಾದರು.

1960 ರಲ್ಲಿ ಫಿರೋಜ್ ಗಾಂಧಿ ಯವರು ರಾಯ್ ಬರೇಲಿಯಿಂದ ನಾಲ್ಕು ಚುನಾವಣೆಗಳಿಗೆ ಸ್ಪರ್ಧಿಸಿದರು. ನಂತರ ನಡೆದ ಉಪಚುನಾವಣೆ ಹಾಗೂ 1962ರ ಚುನಾವಣೆಗಳಲ್ಲಿ ಗಾಂಧಿ ಕುಟುಂಬದ ಯಾರೂ ಇಲ್ಲಿಂದ ಸ್ಪರ್ಧಿಸಿರಲಿಲ್ಲ. 1962ರಲ್ಲಿ ಕಾಂಗ್ರೆಸ್ನಿಂದ ಸ್ಪರ್ಧಿಸಿದ್ದ ಬೈಜನಾಥ ಕುರಿಲ್ ಜನಸಂಘದ ಅಭ್ಯರ್ಥಿ ತಾರಾವತಿ ಅವರನ್ನು ಸೋಲಿಸಿದ್ದರು. ಫಿರೋಜ್ ಗಾಂಧಿಯವರ ಮರಣದ ನಾಲ್ಕು ವರ್ಷಗಳ ನಂತರ ಇಂದಿರಾ ಗಾಂಧಿ 1964 ರಲ್ಲಿ ರಾಜ್ಯಸಭೆಯನ್ನು ತಲುಪಿದರು. ಇಂದಿರಾ 1967 ರವರೆಗೆ ರಾಜ್ಯಸಭಾ ಸಂಸದ ರಾಗಿದ್ದರು. 1966ರಲ್ಲಿ ಇಂದಿರಾ ದೇಶದ ಮೊದಲ ಮಹಿಳಾ



ಪ್ರಧಾನಿಯಾದಾಗಲೂ ರಾಜ್ಯಸಭಾ ಸದಸ್ಯೆಯಾಗಿದ್ದರು. 1967 ಇಂದಿರಾ ರಾಯ್ ಬರೇಲಿ ಕ್ಷೇತ್ರದಿಂದ ಚುನಾವಣಾ ರಾಜಕೀಯ ಪ್ರವೇಶಿಸಿದರು.

ಈ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದ ಇಂದಿರಾ ಅವರು ಸ್ವತಂತ್ರ ಅಭ್ಯರ್ಥಿ ಬಿ.ಸಿ.ಸೇಠ್ ಅವರನ್ನು 91,703 ಮತಗಳಿಂದ ಸೋಲಿಸಿದ್ದರು. 1971ರ ಲೋಕಸಭೆ ಚುನಾವಣೆಯಲ್ಲಿ ಇಂದಿರಾಗಾಂಧಿ ಮತ್ತೊಮ್ಮೆ ಕಾಂಗ್ರೆಸ್ ಪಕ್ಷದಿಂದ ಕಣದಲ್ಲಿದ್ದು, ಸಂಯುಕ್ತ ಸಮಾಜವಾದಿ ಪಕ್ಷದ ರಾಜ್ ನಾರಾಯಣ್ ಅವರನ್ನ 1,11,810 ಮತಗಳ ಅಂತರದಿಂದ ಸೋಲಿಸಿದರು. ಆದರೆ, ಇಂದಿರಾ ಗಾಂಧಿ ಅವರು ಸರ್ಕಾರಿ ಯಂತ್ರಗಳನ್ನು ದುರುಪಯೋಗಪಡಿಸಿ ಕೊಂಡಿದ್ದಾರೆ ಮತ್ತು ಚುನಾವಣಾ ಅಕ್ರಮ ಎಸಗಿದ್ದಾರೆ ಎಂದು ಆರೋಪಿಸಿ ರಾಜನಾರಾಯಣ್ ಅವರು ಅಲಹಾಬಾದ್ ಹೈಕೋರ್ಟ್‌ನಲ್ಲಿ ಚುನಾವಣಾ ಫಲಿತಾಂಶವನ್ನು ಪ್ರಶ್ನಿಸಿದರು. ಅರ್ಜಿಯ ತೀರ್ಪನ್ನು ನೀಡುವಾಗ, ಅಲಹಾಬಾದ್ ಹೈಕೋರ್ಟ್ ಇಂದಿರಾ ಗಾಂಧಿಯವರ ಚುನಾವಣೆ ಅಕ್ರಮ ಎಂದು ಘೋಷಿಸಿತು. ಇಂದಿರಾ ಅವರು ಹೈಕೋರ್ಟ್‌ನಲ್ಲಿ




ತೀರ್ಪನ್ನು ಸುಪ್ರೀಂಕೋರ್ಟ್‌ನಲ್ಲಿ ಪ್ರಶ್ನಿಸಿದರು. ಕೆಲವು ದಿನಗಳ ನಂತರ, ದೇಶದಲ್ಲಿ ತುರ್ತು ಪರಿಸ್ಥಿತಿಯನ್ನು ಘೋಷಿಸಲಾಯಿತು.

ತುರ್ತುಪರಿಸ್ಥಿತಿಯ ಅವಧಿ ಮುಗಿದ ನಂತರ 1977ರಲ್ಲಿ ನಡೆದ ಲೋಕಸಭೆ ಚುನಾವಣೆಯಲ್ಲಿ ರಾಯಬರೇಲಿ ಕ್ಷೇತ್ರದಿಂದ ಸ್ಪರ್ಧಿಸಿದ್ದ ಇಂದಿರಾಗಾಂಧಿ ಸೋಲನುಭವಿಸಬೇಕಾಯಿತು. ಅವರನ್ನು ಭಾರತೀಯ ಲೋಕದಳದ ಅಭ್ಯರ್ಥಿ ರಾಜ ನಾರಾಯಣ್ 55,202 ಮತಗಳಿಂದ ಸೋಲಿಸಿದರು. 1984ರ ಲೋಕಸಭೆ ಚುನಾವಣೆಯಲ್ಲಿ ಅರುಣ್ ನೆಹರೂ ಕೂಡ ಈ ಕ್ಷೇತ್ರದಿಂದ ಗೆದ್ದಿದ್ದರು. ಇದಾದ ಕೆಲವು ವರ್ಷ ಬಿಜೆಪಿ ಮತ್ತು ಲೋಕದಳ ಇಲ್ಲಿ ಸ್ಪರ್ಧಿಸಿ ಗೆದ್ದಿದ್ದವು.

2004 ರಲ್ಲಿ, ರಾಹುಲ್ ಗಾಂಧಿ ಚುನಾವಣಾ ರಾಜಕೀಯಕ್ಕೆ ಪ್ರವೇಶಿಸಿದಾಗ, ಸೋನಿಯಾ ಗಾಂಧಿ ಅವರಿಗೆ ಅಮೇಥಿ ಸ್ಥಾನವನ್ನು ಬಿಟ್ಟುಕೊಟ್ಟು ರಾಯ್ ಬರೇಲಿಯಿಂದ ಸ್ಪರ್ಧಿಸಲು ಪ್ರಾರಂಭಿಸಿದರು. 2004ರ ಲೋಕಸಭಾ ಚುನಾವಣೆಯಲ್ಲಿ ಸೋನಿಯಾ ಗಾಂಧಿ ಅವರು ಎಸ್ಪಿಯ ಅಶೋಕ್ ಕುಮಾರ್ ಸಿಂಗ್ ಅವರನ್ನು ಸೋಲಿಸಿದರು. 2009ರ ಲೋಕಸಭೆ ಚುನಾವಣೆ ಯಲ್ಲಿ ಸೋನಿಯಾ ಗಾಂಧಿ ರಾಯ್ ಬರೇಲಿ ಕ್ಷೇತ್ರವನ್ನು ಉಳಿಸಿಕೊಳ್ಳುವಲ್ಲಿ ಯಶಸ್ವಿಯಾದರು. ಈ ಚುನಾವಣೆಯಲ್ಲಿ ಸೋನಿಯಾ



ಅವರು ಬಿಎಸ್ಪಿ ಟಿಕೆಟ್‌ನಲ್ಲಿದ್ದ ಆರ್‌ಎಸ್ ಕುಶ್ವಾಹಾ ವಿರುದ್ಧ ದೊಡ್ಡಗೆಲುವು ದಾಖಲಿಸಿದರು. 2014 ರಲ್ಲಿ ಸೋನಿಯಾ ಗಾಂಧಿ ಅವರು ಈ ಕ್ಷೇತ್ರದಿಂದ ಭರ್ಜರಿ ಗೆಲುವು ಸಾಧಿಸಿದರು. ಬಿಜೆಪಿಯ ಅಜಯ್ ಅಗರ್ವಾಲ್ ಅವರನ್ನು 3,52,713 ಮತಗಳಿಂದ ಸೋಲಿಸಿದರು. ಕಳೆದ ಚುನಾವಣೆಯಲ್ಲಿ ಅಂದರೆ 2019 ರಲ್ಲಿ ಸೋನಿಯಗಾಂಧಿ ಗೆದ್ದರೂ ಗೆಲುವಿನ ಅಂತರ ಕಡಿಮೆಯಾಗಿದೆ. ಈ ಬಾರಿ ರಾಹುಲ್ ಗಾಂಧಿ ಸ್ಪರ್ಧೆ ಇನ್ನಷ್ಟು ಕುತೂಹಲ ಹೆಚ್ಚಿಸಿದೆ.

# ಶಿವಸೇನೆ ನಾಯಕಿಯ ನ್ನು ಕರೆತರಬೇಕಿದ್ದ ಹೆಲಿಕಾಪ್ಟರ್ ರಾಯಗಢದಲ್ಲಿ ಪತನ



**ಮುಂಬೈ, ಮೇ.3–** ಶಿವಸೇನೆ ನಾಯಕರನ್ನು ಕರೆತರಲು ಹೊರಟಿದ್ದ ಹೆಲಿಕಾಪ್ಟರ್ ಪತನಗೊಂಡಿರುವ ಘಟನೆ ಮಹಾರಾಷ್ಟ್ರದ ರಾಯಗಢದಲ್ಲಿ ಶುಕ್ರವಾರ ನಡೆದಿದೆ.

ಹೆಲಿಕಾಪ್ಟರ್ ಲ್ಯಾಂಡಿಂಗ್ ವೇಳೆ ವಾಲಿದ ಪರಿಣಾಮ ಇಬ್ಬರು ಪೈಲಟ್‌ಗಳು ಗಾಯಗೊಂಡಿದ್ದಾರೆ. ಘಟನೆ ಸಂಭವಿಸಿದಾಗ ಚಾಪರ್ ಶಿವಸೇನೆಯ ಶಿಂಧೆ ಬಣದ ನಾಯಕಿ ಸುಷ್ಮಾ ಅಂಧಾರೆಯನ್ನು ಪ್ರಸ್ತುತ ಲೋಕಸಭೆ ಚುನಾವಣೆಯಲ್ಲಿ ಸಾರ್ವಜನಿಕ ರ್‍ಯಾಲಿಗಾಗಿ ಕರೆದೊಯ್ಯಲು ಹೋಗುತ್ತಿತ್ತು. ಶುಕ್ರವಾರ ಬೆಳಗ್ಗೆ 9.30ರ ಸುಮಾರಿಗೆ ಹೆಲಿಕಾಪ್ಟರ್‌ನ ಪೈಲಟ್‌ಗಳು ಅದನ್ನು ಮಹುಹಾದ್‌ನಲ್ಲಿರುವ ತಾತ್ಕಾಲಿಕ ಹೆಲಿಪ್ಯಾಡ್‌ನಲ್ಲಿ ಇಳಿಸಲು ಪ್ರಯತ್ನಿಸಿದಾಗ ಈ ದುರ್ಘಟನೆ ಸಂಭವಿಸಿದೆ. ಹೆಲಿಕಾಪ್ಟರ್ ವಾಲಿದ್ದು, ಪೈಲಟ್‌ಗಳಿಗೆ ಗಾಯಗಳಾಗಿವೆ.

ಲ್ಯಾಂಡಿಂಗ್ ಸಮಯದಲ್ಲಿ ಹೆಲಿಕಾಪ್ಟರ್ ತನ್ನ ನಿಯಂತ್ರಣವನ್ನು ಕಳೆದುಕೊಂಡಿತ್ತು, ಹೆಲಿಪ್ಯಾಡ್‌ನಲ್ಲಿ ಧೂಳೆಬ್ಬಿಸುತ್ತಿತ್ತು, ದೊಡ್ಡದಾಗಿ ಶಬ್ದ ಮಾಡುತ್ತಾ ಸಮತೋಲನವನ್ನು ಕಳೆದುಕೊಂಡಿತ್ತು. ಘಟನೆಯಲ್ಲಿ ಹೆಲಿಕಾಪ್ಟರ್‌ನ ರೋಟರ್ ಬ್ಲೇಡ್‌ಗಳಿಗೂ ಹಾನಿಯಾಗಿದೆ.

ಘಟನೆಯ ನಂತರ, ಪೊಲೀಸರು ಮತ್ತು ತುರ್ತು ತಂಡದ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ, ಪೈಲಟ್‌ಗಳನ್ನು ರಕ್ಷಿಸಿದರು ಮತ್ತು ಅವರಿಗೆ ಪ್ರಥಮ ಚಿಕಿತ್ಸೆ ನೀಡಿದರು. ಮೈದಾನವು ಸಮತಟ್ಟಾಗಿ ರದ ಕಾರಣ ಘಟನೆ ಸಂಭವಿಸಿದೆ ಎನ್ನಲಾಗಿದೆ. ರಾಯಗಢ ಲೋಕಸಭಾ ಕ್ಷೇತ್ರಕ್ಕೆ ಮೇ 7 ರಂದು ಮೂರನೇ ಹಂತದಲ್ಲಿ ಮತದಾನ ನಡೆಯಲಿದೆ.

# ಅಮೇಥಿಯ ಕಾಂಗ್ರೆಸ್ ಅಭ್ಯರ್ಥಿ ಕಿಶೋರಿಲಾಲ್ ಶರ್ಮಾ


**ನವದೆಹಲಿ, ಮೇ.3–** ರಾಹುಲ್ ಗಾಂಧಿ ಸ್ಪರ್ಧಿಸಲಿದ್ದಾರೆ ಎನ್ನಲಾಗಿದ್ದ ಅಮೇಥಿ ಲೋಕಸಭಾ ಕ್ಷೇತ್ರದಿಂದ ಕಿಶೋರಿಲಾಲ್ ಶರ್ಮಾ ಅವರನ್ನು ಕಾಂಗ್ರೆಸ್ ಹೈಕಮಾಂಡ್ ಕಣಕ್ಕಿಳಿಸಿದ್ದು ಅವರು ಬಿಜೆಪಿಯ ಸ್ಮೃತಿ ಇರಾನಿ ವಿರುದ್ಧ ಸೆಣಸಲಿದ್ದಾರೆ.

ಗಾಂಧಿ ಕುಟುಂಬದ ಭದ್ರ ಕೋಟೆ ಎನಿಸಿಕೊಂಡಿದ್ದ ಕ್ಷೇತ್ರದಲ್ಲಿ ಕಿಶೋರಿ ಲಾಲ್ ಶರ್ಮಾ ಅವರಿಗೆ ಟಿಕೆಟ್ ನೀಡಿರುವುದು ಅಚ್ಚರಿಕೆ ಬೆಳವಣಿಯಾಗಿದ್ದು ಕಿಶೋರಿಲಾಲ್ ಶರ್ಮಾ ಯಾರು ಅವರ ಹಿನ್ನಲೆ ಏನು ಎನ್ನುವ ಚರ್ಚೆ ಶುರುವಾಗಿದೆ.

ನಾಲ್ಕು ದಶಕಗಳಿಂದ ಗಾಂಧಿ ಕುಟುಂಬದ ಜೊತೆಗೆ ನಂಟು ಹೊಂದಿರುವ ಕಿಶೋರಿಲಾಲ್ ಶರ್ಮಾ, ಮೂಲತಃ ಪಂಜಾಬ್‌ನ ಲೂಧಿಯಾನದವರಾದವರು. 1983ರಲ್ಲಿ ರಾಜೀವ್ ಗಾಂಧಿ ಯವರೊಂದಿಗೆ ರಾಯ್‌ಬರೇಲಿ ಮತ್ತು ಅಮೇಥಿ ಪ್ರವೇಶಿಸಿದ ಅವರು ಈಗಲೂ ಕ್ಷೇತ್ರದಲ್ಲಿ ನಿರಂತರ ಸಂಪರ್ಕ ಹೊಂದಿದ್ದಾರೆ.

ಮೇ 1991ರಲ್ಲಿ ರಾಜೀವ್ ಗಾಂಧಿಯವರ ಮರಣದ ನಂತರ ಗಾಂಧಿ ಕುಟುಂಬದೊಂದಿಗಿನ ಅವರ ಸಂಬಂಧವು ಹೆಚ್ಚು ಕೌಟುಂಬಿಕವಾಗಿದೆ. ಸೋನಿಯಾ ಗಾಂಧಿ ಅವರು ರಾಜಕೀಯಕ್ಕೆ ಪ್ರವೇಶಿಸಿ ಮೊದಲ ಬಾರಿಗೆ ಕ್ಷೇತ್ರಕ್ಕೆ ಭೇಟಿ ನೀಡಿದಾಗ ಕಿಶೋರಿ ಲಾಲ್ ಶರ್ಮಾ ಜೊತೆಗಿದ್ದರು. ಸೋನಿಯಾ ಗಾಂಧಿ ಅವರು ಅಮೇಥಿ ಕ್ಷೇತ್ರವನ್ನು ರಾಹುಲ್ ಗಾಂಧಿಗೆ ಬಿಟ್ಟುಕೊಟ್ಟು ರಾಯ್‌ಬರೇಲಿಯಿಂದ ಸ್ಪರ್ಧಿಸಿದ ಬಳಿಕ ಎರಡು ಕ್ಷೇತ್ರಗಳ ಉಸ್ತುವಾರಿ ನೋಡಿಕೊಳ್ಳುತ್ತಿದ್ದರು.

ಕ್ಷೇತ್ರದಲ್ಲಿ ಹಿಡಿತ ಹೊಂದಿರುವ ಹಿನ್ನಲೆ ಅವರಿಗೆ ಟಿಕೆಟ್ ನೀಡಿದ್ದು



ಶರ್ಮಾ ಅವರು ಇಂದು ನಾಮಪತ್ರ ಸಲ್ಲಿಸಿದ್ದಾರೆ. ಪ್ರಿಯಾಂಕ ಗಾಂಧಿ ರೋಡ್ ಶೋನಲ್ಲಿ ಸಾಥ್ ನೀಡುವ ಮೂಲಕ ಬಲ ತುಂಬುವ ಪ್ರಯತ್ನ ಮಾಡಿದ್ದಾರೆ. ಏಳು ಹಂತದ ಸಾರ್ವತ್ರಿಕ ಚುನಾವಣೆಯ ಐದನೇ ಸುತ್ತಿನಲ್ಲಿ ಮೇ 20 ರಂದು ಅಮೇಥಿ ಮತ್ತು ರಾಯ್‌ಬರೇಲಿ ಚುನಾವಣೆ ನಡೆಯಲಿದೆ.

# ಬಾಲಕನ ಕತ್ತುಸೀಳಿದ ಕಾಳಿದೇವಿ ಪಾತ್ರಧಾರಿ

**ಕಾನ್ಪುರ, ಮೇ.3–** ಕಾರ್ಯಕ್ರಮವೊಂದರಲ್ಲಿ ಕಾಳಿದೇವಿಯ ಪಾತ್ರಧಾರಿ ಬಾಲಕನ ಕತ್ತು ಸೀಳಿರುವ ಘಟನೆ ಉತ್ತರ ಪ್ರದೇಶದ ಕಾನ್ಪುರದಲ್ಲಿ ನಡೆದಿದೆ. ಘಟನೆಯ ನಂತರ ಪೊಲೀಸರು ಸ್ಥಳಕ್ಕೆ ಧಾವಿಸಿ 14 ವರ್ಷದ ಬಾಲಕ ಮತ್ತು ಇತರ ಇಬ್ಬರು ಮಕ್ಕಳನ್ನು ವಿಚಾರಣೆಗಾಗಿ ಕರೆದೊಯ್ದಿದ್ದಾರೆ. ಪೊಲೀಸರ ಪ್ರಕಾರ, ಕಾನ್ಪುರದ ಬಿಲಹೌರ್ ಪ್ರದೇಶದ ಬಂಬಿಯಾನ್ಪುರ ಗ್ರಾಮದಲ್ಲಿ ಈ ಘಟನೆ ನಡೆದಿದ್ದು, ಸುಭಾಷ್ ಸೈನಿ ಎಂಬುವವರ ಮನೆಯಲ್ಲಿ ಭಗವತ್ ಕಥಾವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಅಂಗವಾಗಿ, ಮಕ್ಕಳು ಭಗವತ್ ಕಥಾದ ಹಲವಾರು ಪಾತ್ರಗಳನ್ನು ನಿರ್ವಹಿಸುತ್ತಿದ್ದರು. ಈ ಸಂದರ್ಭದಲ್ಲಿ, ಕಾಳಿ ದೇವಿಯ ಪಾತ್ರವನ್ನು ನಿರ್ವಹಿಸುತ್ತಿದ್ದ ಬಾಲಕ, ಮತ್ತೊಬ್ಬ ಬಾಲಕನ ಕುತ್ತಿಗೆಯನ್ನು ಸೀಳಿರುವ ಘಟನೆ ನಡೆದಿದೆ. ಘಟನೆಯ ನಂತರ, ಗಂಭೀರವಾಗಿ ಗಾಯಗೊಂಡ ಬಾಲಕನನ್ನು ಹತ್ತಿರದ ಆಸ್ಪತ್ರೆಗೆ ಸಾಗಿಸಲಾಯಿತು, ಅಲ್ಲಿ ವೈದ್ಯರು ಅವನು ಸಾವನ್ನಪ್ಪಿದ್ದಾನೆ ಎಂದು ಘೋಷಿಸಿದರು.

ಕಾಳಿಯ ಪಾತ್ರ ನಿರ್ವಹಿಸುತ್ತಿದ್ದ ಬಾಲಕ ಅಲ್ಲಿ ಬರುವ ಹತ್ಯೆ ಘಟನೆಯ ಸಂದರ್ಭದಲ್ಲಿ ತ್ರಿಶೂಲವನ್ನು ತೆಗೆದುಕೊಳ್ಳಲು ಹೇಳಲಾಯಿತು ಆದರೆ ತ್ರಿಶೂಲ ಸಿಗದ ಕಾರಣ ಕಾಳಿ ಪಾತ್ರಧಾರಿ ಹರಿತವಾದ ಚಾಕುವನ್ನು ತಂದಿದ್ದಾನೆ. ಘಟನೆಯ ಬಗ್ಗೆ ಮಾಹಿತಿ ಪಡೆದ ಸ್ಥಳೀಯ ಪೊಲೀಸರು ಸ್ಥಳಕ್ಕಾಗಮಿಸಿ ಮಗುವಿನ ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದು, ಆರೋಪಿಯನ್ನು ವಿಚಾರಣೆಗಾಗಿ ವಶಕ್ಕೆ ಪಡೆದಿದ್ದಾರೆ. ಘಟನೆಯ ಕುರಿತು ಮಾತನಾಡಿದ ಕಾನ್ಪುರ ಪೊಲೀಸ್‌ನ ಡಿಸಿಪಿ ವಿಜಯ್ ಧುಲ್, ಮೃತನ ತಂದೆ ನೀಡಿದ ದೂರಿನ ನಂತರ ಆರೋಪಿಗಳ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ತಿಳಿಸಿದ್ದಾರೆ. ಬಾಲಕನನ್ನು ಬಾಲಾಪರಾಧ ನ್ಯಾಯಾಲಯಕ್ಕೆ ಹಾಜರುಪಡಿಸಿ ಕಾನೂನು ಪ್ರಕಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದ್ದಾರೆ.

# ವಾರಾಂತ್ಯದಲ್ಲಿ ಸೆನ್ಸೆಕ್ಸ್ 732 ಅಂಕಗಳ ಕುಸಿತ

**ಮುಂಬೈ, ಮೇ.3–** ವಾರಾಂತ್ಯದ ದಿನವಾದ ಇಂದು (ಮೇ 3, ಶುಕ್ರವಾರ) ಮುಂಬೈ ಷೇರುಪೇಟೆಯಲ್ಲಿ ಸೆನ್ಸೆಕ್ಸ್ ಮಹಾಪತನ ಕಂಡಿದ್ದು, ಹೂಡಿಕೆದಾರರ ಕೋಟಿ ಕೋಟಿ ಸಂಪತ್ತು ಕರಗಿ ಹೋಗಿದೆ. ದಿನದ ಅಂತ್ಯದ ವೇಳೆಗೆ ಸೆನ್ಸೆಕ್ಸ್ 732.96 ಅಂಕಗಳ ಕುಸಿತದ ಬಳಿಕ 73,878ಕ್ಕೆ ತಲುಪಿತು. ನಿಫ್ಟಿ 172.35 ಅಂಶಗಳನ್ನು ಕಳೆದುಕೊಂಡು 22,475.85 ರಲ್ಲಿ ವಹಿವಾಟು ಮುಗಿಸಿತು.

ಸೆನ್ಸೆಕ್ಸ್ ಮತ್ತು ನಿಫ್ಟಿ ಕಳೆದ ಎರಡು ವಾರಗಳಲ್ಲಿ ದಾಖಲೆಯ ಮಟ್ಟಕ್ಕೆ ಏರಿದ ಬಳಿಕ ಇದೀಗ ಇಳಿಕೆಯ ಹಾದಿಯಲ್ಲಿದೆ. ಇದಕ್ಕೆ ಪ್ರಮುಖವಾಗಿ ಮಾರಾಟದ ಒತ್ತಡವೂ ಕಾರಣ ಎಂದು ಮಾರುಕಟ್ಟೆ ವಿಶ್ಲೇಷಕರು ಅಂದಾಜಿಸಿದ್ದಾರೆ. ವಿಶ್ಲೇಕರು ಹೇಳುವ ಪ್ರಕಾರ, ನಿಫ್ಟಿ 22,700 ಅಂಶಗಳ ದಾಖಲೆಯ ಮಟ್ಟವನ್ನು



ತಲುಪಿದ ನಂತರ ಇಳಿಕೆಯ ಹಾದಿಯಲ್ಲಿದೆ. ಇದರಲ್ಲಿ ಫಾಲೋ ಆನ್ ಖರೀದಿಯ ಕೊರತೆಯು ಕಂಡು ಬರುತ್ತಿದೆ ಎಂದು ಹೇಳಿದ್ದಾರೆ.

# ರೋಹಿತ್ ವೇಮುಲ ಪ್ರಕರಣದ ಎಲ್ಲ ಆರೋಪಿಗಳಿಗೆ ಕ್ಲೀನ್ ಚಿಟ್ ನೀಡಿದ ತೆಲಂಗಾಣ ಪೊಲೀಸರು

**ನವದೆಹಲಿ, ಮೇ3–** ರೋಹಿತ್ ವೇಮುಲಾ ಸಾವಿನ ಪ್ರಕರಣದ ಮುಕ್ತಾಯದ ವರದಿಯನ್ನು ತೆಲಂಗಾಣ ಪೊಲೀಸರು ಶುಕ್ರವಾರ ಸಲ್ಲಿಸಿದ್ದು, ಎಲ್ಲಾ ಆರೋಪಿಗಳಿಗೆ ಕ್ಲೀನ್ ಚಿಟ್ ನೀಡಿದ್ದಾರೆ. 2016ರ ಜನವರಿಯಲ್ಲಿ ರೋಹಿತ್ ವೇಮುಲ ಆತ್ಮಹತ್ಯೆ ಮಾಡಿಕೊಂಡಿದ್ದರಿಂದ ವಿಶ್ವವಿದ್ಯಾಲಯಗಳಲ್ಲಿ ದಲಿತರ ವಿರುದ್ಧದ ತಾರತಮ್ಯದ ವಿರುದ್ಧ ರಾಷ್ಟ್ರವ್ಯಾಪಿ ಪ್ರತಿಭಟನೆಗಳು ನಡೆದವು. 2016 ರ ಜನವರಿಯಲ್ಲಿ ರೋಹಿತ್ ವೇಮುಲಾ ಆತ್ಮಹತ್ಯೆ ಮಾಡಿಕೊಂಡಿದ್ದರಿಂದ ವಿಶ್ವವಿದ್ಯಾಲಯಗಳಲ್ಲಿ ದಲಿತರ ವಿರುದ್ಧದ ತಾರತಮ್ಯದ ವಿರುದ್ಧ ರಾಷ್ಟ್ರವ್ಯಾಪಿ ಪ್ರತಿಭಟನೆಗಳು ನಡೆದವು. ತೆಲಂಗಾಣ ಹೈಕೋರ್ಟ್‌ಗೆ ಶುಕ್ರವಾರ ಸಲ್ಲಿಸಿದ ಮುಕ್ತಾಯ ವರದಿಯಲ್ಲಿ, ರಾಜ್ಯ ಪೊಲೀಸರು ರೋಹಿತ್ ದಲಿತನಲ್ಲ ಮತ್ತು ಅವರ "ನಿಜವಾದ ಜಾತಿ ಗುರುತು" ಪತ್ತೆಯಾಗುತ್ತದೆ ಎಂಬ ಭಯದಿಂದ ಅವರು ಸಾವನ್ನಪ್ಪಿದ್ದಾರೆ ಎಂದು ಹೇಳಿದ್ದಾರೆ.

ಸಿಕಂದರಾಬಾದ್ ಸಂಸದ ಬಂಡಾರು ದತ್ತಾತ್ರೇಯ, ವಿಧಾನ ಪರಿಷತ್ ಸದಸ್ಯ ಎನ್. ರಾಮಚಂದರ್ ರಾವ್, ಹೈದರಾಬಾದ್ ವಿಶ್ವವಿದ್ಯಾಲಯದ ಉಪಕುಲಪತಿ ಅಪ್ಪಾರಾವ್, ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಸ್ಮೃತಿ ಇರಾನಿ ಮತ್ತು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ನಾಯಕರನ್ನು ಖುಲಾಸೆಗೊಳಿಸಲಾಗಿದೆ.



# 2ನೇ ಹಂತದ 14 ಕ್ಷೇತ್ರಗಳ ಚುನಾವಣೆಗೆ ರಾಜ್ಯದಲ್ಲಿ ಸಿದ್ದತೆ



**ಬೆಂಗಳೂರು, ಮೇ. 03:** 18ನೇ ಲೋಕಸಭೆ ಸದಸ್ಯರ ಆಯ್ಕೆಗಾಗಿ ನಡೆದಿರುವ ಸಾರ್ವತ್ರಿಕ ಚುನಾವಣೆಗಾಗಿ ಕರ್ನಾಟಕದ 14 ಲೋಕಸಭಾ ಕ್ಷೇತ್ರಗಳಲ್ಲಿ ಈ ತಿಂಗಳ 7ರಂದು ಎರಡನೇ ಹಂತದ ಮತದಾನ ನಡೆಯಲಿದೆ. ಚಿಕ್ಕೋಡಿ, ಬೆಳಗಾವಿ, ಬಾಗಲಕೋಟೆ, ವಿಜಯಪುರ, ಕಲಬುರಗಿ, ರಾಯಚೂರು, ಬೀದರ್, ಕೊಪ್ಪಳ, ಬಳ್ಳಾರಿ, ಹಾವೇರಿ, ಧಾರವಾಡ, ಉತ್ತರಕನ್ನಡ, ದಾವಣಗೆರೆ ಮತ್ತು ಶಿವಮೊಗ್ಗ ಕ್ಷೇತ್ರಗಳಲ್ಲಿ ಮತದಾನ ದಿನಕ್ಕಾಗಿ ಬಿರುಸಿನ ಚಟುವಟಿಕೆ ಪರಕಾಷ್ಠೆಗೆ ತಲುಪಿದೆ.

ಉತ್ತರ ಕರ್ನಾಟಕದ 14 ಜಿಲ್ಲೆಗಳಲ್ಲಿ ವ್ಯಾಪಕ ಸಿದ್ಧತೆ ಪ್ರಗತಿಯಲ್ಲಿದೆ. ಈ ಹಂತದಲ್ಲಿ ಮತದಾನದ ಶೇಕಡಾವಾರು ಪ್ರಮಾಣದ ಸುಧಾರಣೆ ಉದ್ದೇಶದಿಂದ ಚುನಾವಣಾ ಸಿಬ್ಬಂದಿ ಕೂಡ ನಿರಂತರ ಪ್ರಯತ್ನಗಳನ್ನು ಮುಂದುವರಿಸುತ್ತಿದ್ದಾರೆ. ಜಿಲ್ಲಾ ಸ್ವೀಪ್ ಸಮಿತಿಗಳು ಹೆಚ್ಚು ಮತದಾರರನ್ನು ಆಕರ್ಷಿಸುವ ಸಲುವಾಗಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಿದೆ.

ಗದಗ ಜಿಲ್ಲೆಯ ರೋಣ ತಾಲೂಕಿನ ಅಬ್ಬಿಗೇರಿ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಮಹಿಳಾ ಮತದಾರರಿಗೆ ಮೆಹಂದಿ ಹಚ್ಚುವುದರೊಂದಿಗೆ ಮತದಾನ ಜಾಗೃತಿ ಮೂಡಿಸಲಾಯಿತು. ಗ್ರಾಮ ಪಂಚಾಯತಿ ಸಿಬ್ಬಂದಿ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದ ಸದಸ್ಯರು, ಅಂಗನವಾಡಿ ಕಾರ್ಯಕರ್ತರು ಗ್ರಾಮದ ಮನೆ ಮನೆಗೆ ಭೇಟಿ ನೀಡಿ, ಮಹಿಳೆಯರಿಗೆ ಚುನಾವಣೆ ಸಂಬಂಧಿತ ಘೋಷಣೆಗಳ ಮೆಹಂದಿ ಚಿತ್ತಾರ ಬಿಡಿಸಿದರು.

ಹಾವೇರಿ ಕ್ಷೇತ್ರದಲ್ಲಿ ಮೇ 7 ರಂದು ಮತದಾನ ನಡೆಲಿದ್ದು, ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾನ ಮುಕ್ತಾಯದ ಹಿಂದಿನ 48 ಗಂಟೆಗಳ ಅವಧಿ–ನಿಶ್ಯಬ್ದ ಅವಧಿ ಎಂದು ಪರಿಗಣಿಸಲಾಗಿದೆ. ಈ ಅವಧಿಯಲ್ಲಿ ಸಾರ್ವಜನಿಕ ರ್ಯಾಲಿಗಳು, ಸಾರ್ವಜನಿಕ ಸಭೆಗಳು, ಗಲ್ಲಿ ಸಭೆಗಳನ್ನು, ಬೈಕ್ ಲ್ಯಾಲಿಗಳನ್ನು, ಅಥವಾ ಪ್ರಚಾರಕ್ಕಾಗಿ ಗುಂಪು ಸೇರುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಹಾಗೂ ಮತದಾರರಲ್ಲದವರು ಕ್ಷೇತ್ರದಲ್ಲಿ ಉಳಿದುಕೊಳ್ಳುವಂತಿಲ್ಲ.

ಈ ಕುರಿತಂತೆ ಅಗತ್ಯ ನಿಗಾವಹಿಸುವಂತೆ ನಿಯೋಜಿತ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ರಘುನಂದನ್‌ಮೂರ್ತಿ ತಿಳಿಸಿದ್ದಾರೆ. ಹಾವೇರಿ ಜಿಲ್ಲೆಯಲ್ಲಿ ಬಿಸಿಲು ಹೆಚ್ಚಾಗಿರುವುದರಿಂದ ಮೇ 7 ರಂದು ಮತದಾನ ನಡೆಯುವ ದಿನ ಮತಗಟ್ಟೆಗಳಲ್ಲಿ ಸೂಕ್ತ ವ್ಯವಸ್ಥೆಗಳನ್ನು ಮಾಡಲು ಅಧಿಕಾರಿಗಳಿಗೆ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಅಕ್ಷಯ್ ಶ್ರೀಧರ್ ಸೂಚಿಸಿದ್ದಾರೆ.

ದಾವಣಗೆರೆ ಲೋಕಸಭಾ ಕ್ಷೇತ್ರದಲ್ಲಿ ಮೇ 7ರ ಚುನಾವಣೆಗಾಗಿ ವ್ಯಾಪಕ ಸಿದ್ಧತೆಯಾಗುತ್ತಿದೆ. ವಾಕ್ ಮತ್ತು ಶ್ರವಣದೋಷವುಳ್ಳ ಮತದಾರರನ್ನು ಚುನಾವಣೆಯಲ್ಲಿ ಪಾಲ್ಗೊಳ್ಳುವಂತೆ ಪ್ರೇರೇಪಿಸಲಾಗುತ್ತಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಸುರೇಶ್ ಇಟ್ನಾಳ್ ತಿಳಿಸಿದ್ದಾರೆ. ವಾಕ್ ಮತ್ತು ಶ್ರವಣ ದೋಷವುಳ್ಳ ಮತದಾರರಿಗೆ ಮತದಾನದ ಮಹತ್ವ ಮತ್ತು ಮತಗಟ್ಟೆಗಳಲ್ಲಿ ಅನುಸರಿಸಬೇಕಾದ ಕ್ರಮಗಳ ಬಗ್ಗೆ ವಿವರಿಸಲು ಜಿಲ್ಲಾ ಸ್ವೀಪ್ ಸಮಿತಿ ಇಂದು ವಿಶೇಷ ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡಿತ್ತು ಎಂದು ಅವರು ಹೇಳಿದ್ದಾರೆ. ಕಾರ್ಯಕ್ರಮದಲ್ಲಿ ವಾಕ್ ಶ್ರವಣದೋಷವುಳ್ಳ 500 ಅಧಿಕ ಜನರು ಭಾಗವಹಿಸಿದ್ದರು. ವಿಜಯಪುರ ಜಿಲ್ಲೆಯ ಹುಲ್ಲೂರ ಗ್ರಾಮ ಪಂಚಾಯತಿ ವ್ಯಾಪ್ತಿಯ ಕೊಪ್ಪ ತಾಂಡಾ ಹಾಗೂ ಜಟ್ಟಗಿ ತಾಂಡಾಗಳಲ್ಲಿ ಕಡಿಮೆ ಮತದಾನವಾದ ಬೂತ್ಗಳಲ್ಲಿ ಮನೆ–ಮನೆ ಭೇಟಿ ನೀಡಿ, ತಪ್ಪದೆ ಮತದಾನ ಮಾಡುವಂತೆ ಕಾರ್ಯ ನಿರ್ವಾಹಕ ಅಧಿಕಾರಿ ಎಸ್.ಎಸ್.ಕಲ್ಮನಿ ಜಾಗೃತಿ ಮೂಡಿಸಿದರು.

ಮತದಾನದ ಮಾಹಿತಿಯುಳ್ಳ ಕರಪತ್ರಗಳನ್ನು ವಿತರಿಸಲಾಯಿತು. ನಿಡಗುಂದಿ ತಾಲೂಕಿನ ಗಣಿ ಗ್ರಾಮದಲ್ಲಿ ಮತದಾನ ಪ್ರಮಾಣ ಹೆಚ್ಚಿಸುವ ನಿಟ್ಟಿನಲ್ಲಿ ಕ್ಯಾಂಡಲ್ ಮಾರ್ಚ್ ಆಯೋಜಿಸಲಾಗಿತ್ತು. ದೇವರ ಹಿಪ್ಪರಗಿ ತಾಲೂಕಿನ ಮಣೂರ, ಜಾಲವಾದ, ಕೋರವಾರ, ಕೊಂಡಗೂಳಿ ಗ್ರಾಮ ಪಂಚಾಯಿತಿಯ ಹಲವಾರು ಹಳ್ಳಿಗಳಲ್ಲಿ ಚುನಾವಣಾ ಜಾಗೃತಿ ರಥದ ಮೂಲಕ ಮತದಾನದ ಮಹತ್ವವನ್ನು ಸ್ಥಳೀಯರಿಗೆ ತಿಳಿಸಲಾಯಿತು. ಉತ್ತರ ಕನ್ನಡ ಜಿಲ್ಲೆಯಲ್ಲಿ ಕಾರವಾರ ಲೋಕಸಭಾ ಕ್ಷೇತ್ರದ ಮತದಾನ ಪ್ರಮಾಣ ಹೆಚ್ಚಿಸುವ ನಿಟ್ಟಿನಲ್ಲಿ ಇಂದು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಟ್ರೆಕ್ಕಿಂಗ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ಕಾರವಾರದ ಮಾಜಾಳಿ ಬೀಚ್ನಿಂದ ಆರಂಭವಾದ ಚಾರಣವು ಕಡಲಂಚಿನಲ್ಲಿರುವ ಬೆಟ್ಟಗುಡ್ಡದ ಮೇಲೆ ಸಾಗಿ ತೀಳಮಾತಿ ಕಡಲತೀರದಲ್ಲಿ ಸಂಪನ್ನಗೊಂಡಿತು. ಈ ವೇಳೆ ಮತದಾನ ಜಾಗೃತಿ ಸಂದೇಶ ಹೊಂದಿರುವ ಫಲಕಗಳು ಹಾಗೂ ಸ್ವೀಪ್ ಬಾವುಟ ಪ್ರದರ್ಶನ ಮಾಡಲಾಯಿತು.

# ಬೆಂಗಳೂರಿನ ಹಲವೆಡೆ ಮಳೆ: ಉರಿ ಬಿಸಿಲಿನ ನಡುವೆ ತಂಪೆರೆದ ವರುಣ



**ಬೆಂಗಳೂರು, ಮೇ. 3:** ರಾಜಧಾನಿ ಬೆಂಗಳೂರಿನಲ್ಲಿ ಮಧ್ಯಾಹ್ನ ಅರ್ಧತಾಸು ಬಿರುಸಿನಿಂದ ಕೂಡಿದ ಮಳೆಯಾಗಿದ್ದು, ರಾಜ್ಯದ ಕೆಲಡವೆಡೆ ಮಳೆ ಸುರಿದಿದೆ. ರಾಜ್ಯದ ಕೆಲವು ಕಡೆಗಳಲ್ಲಿ ಚದುರಿದಂತೆ ನಿನ್ನೆ ಮಳೆಯಾಗಿದ್ದು, ಇನ್ನೂ ನಾಲ್ಕೈದು ದಿನಗಳ ಕಾಲ ಮಳೆ ಮುಂದುವರೆಯುವ ಮುನ್ಸೂಚನೆಗಳಿವೆ. ಬಿಸಿಲಿನ ಬೇಗೆಯಿಂದ ಬಸವಳಿದ್ದಿದ್ದ ಬೆಂಗಳೂರಿಗೆ ಗುರುವಾರ ಸಂಜೆ ಬಿದ್ದ ಮಳೆ ಮುದ ನೀಡಿದೆ. ಕೋಲಾರದ ಕೆಜಿಎಫ್, ಮುಳಬಾಗಿಲು, ಚನ್ನಪಟ್ಟಣ, ಬೆಂಗಳೂರಿನ ಪೂರ್ವ ಹಾಗೂ ದಕ್ಷಿಣ ಭಾಗದಲ್ಲಿ ಮಳೆಯಾಗಿದೆ. ಬೆಂಗಳೂರಿನ ಉತ್ತರ ಭಾಗದಲ್ಲಿ ಮಳೆಯಾಗಿಲ್ಲ.

ಮಿಂಚು, ಗುಡುಗು ಹಾಗೂ ಗಾಳಿ ಸಹಿತ ಮಳೆಯಾಗುವುದು ವಾಡಿಕೆಯಾದರೂ ಮುಂಗಾರು ಪೂರ್ವ ಮಳೆಯು ವ್ಯಾಪಕವಾಗಿ ಬೀಳುವುದಿಲ್ಲ. ಚದುರಿದಂತೆ ಅಲ್ಲಲ್ಲಿ ಮಾತ್ರ ಮಳೆಯಾಗಲಿದೆ ಎಂದು ಹವಾಮಾನ ತಜ್ಞರು ತಿಳಿಸಿದ್ದಾರೆ. ಕರಾವಳಿ ಹಾಗೂ ದಕ್ಷಿಣ ಒಳನಾಡಿನಲ್ಲಿ ಸಂಜೆ ಹಾಗೂ ರಾತ್ರಿ ವೇಳೆ ಗುಡುಗು, ಮಿಂಚು ಸಹಿತ ಮಳೆಯಾಗುವ ಮುನ್ಸೂಚನೆಗಳಿದ್ದು, ಉತ್ತರ ಒಳನಾಡಿನಲ್ಲಿ ಒಣ ಹವೆ ಮುಂದುವರೆಯಲಿದೆ. ಅದರಲ್ಲೂ ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ತಾಪಮಾನ ತೀವ್ರವಾಗಿರುತ್ತದೆ ಎಂದು ಹವಾಮಾನ ಇಲಾಖೆ ಹೇಳಿದೆ. ಮೇ 7ರವರೆಗೂ ಮಳೆ ಮುಂದುವರೆಯು ಲಕ್ಷಣಗಳಿವೆ.

ಬೆಂಗಳೂರು, ರಾಮನಗರ, ಕೋಲಾರ, ಚಿಕ್ಕಬಳ್ಳಾಪುರ, ಮಂಡ್ಯ, ಚಾಮರಾಜನಗರ, ಮೈಸೂರು, ಕೊಡಗು ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಗಳಿವೆ. ಕೆಲವೆಡೆ ಗುಡುಗು, ಮಿಂಚಿನಿಂದ ಕೂಡಿದ ವಾತಾವರಣ ಉಂಟಾಗಬಹುದು. ಮಿಂಚು, ಗುಡುಗಿನ ವಾತಾವರಣ ಉಂಟಾದಾಗ ಸಿಡಿಲು ಬಡಿಯುವ ಸಾಧ್ಯತೆ ಇದೆ. ಜನರು ಸುರಕ್ಷಿತವಾಗಿರಬೇಕು. ವಿದ್ಯುತ್ ಕಂಬ, ಮರ, ಲೋಹದ ವಸ್ತುಗಳಿಂದ ದೂರವಿರಬೇಕು. ಮೊಬೈಲ್ ಬಳಸದಿರುವುದು ಒಳ್ಳೆಯದು. ಸಾಧ್ಯವಾದಷ್ಟು ಸುರಕ್ಷಿತ ಸ್ಥಳದಲ್ಲಿರುಬೇಕು ಎಂಬ ಸಲಹೆ ಮಾಡಲಾಗಿದೆ. ಬೆಂಗಳೂರು ಸುತ್ತ ಮುತ್ತ ಮೇ 6 ಮತ್ತು 7 ರಂದು ಸಾಧಾರಣ ಮಳೆಯಾಗುವ ಮುನ್ಸೂಚನೆಗಳಿವೆ. ಮಳೆಯಾದರೂ ತಾಪಮಾನ ಹೆಚ್ಚಾಗಿಯೇ ಇರುತ್ತದೆ. ಹೀಗಾಗಿ ಜನರು ಅಗತ್ಯ ಮುನ್ನೆಚ್ಚರಿಕೆ ಹಾಗೂ ಸುರಕ್ಷಾತ ಕ್ರಮಗಳನ್ನು ಅನುಸರಿಸುವಂತೆ ಹವಾಮಾನ ಇಲಾಖೆ ಸಲಹೆ ಮಾಡಿದೆ.

# ಗ್ರೀನ್ ಸ್ಟಾರ್ ಚಾಲೆಂಜ್‌ಗೆ ಉತ್ತಮ ಪ್ರತಿಕ್ರಿಯೆ: ಎರಡು ವಾರದಲ್ಲಿ 629ಕ್ಕೂ ಹೆಚ್ಚು ಸಂಪರ್ಕಗಳ ನೋಂದಣಿ

Bangalore Water Supply and Sewerage Board
ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ
B.W.S.S.B
GREEN STAR CHALLENGE

**ಬೆಂಗಳೂರು ಮೇ 3:** ನೀರು ಉಳಿತಾಯದ ಉತ್ತಮ ಕ್ರಮಗಳನ್ನು ಅಳವಡಿಸಿಕೊಳ್ಳಲು ಅನುವು ಮಾಡಿಕೊಡುವಂತಹ ಪಂಚಸೂತ್ರಗಳ ಅಳವಡಿಕೆಯ ಗ್ರೀನ್ ಸ್ಟಾರ್ ಚಾಲೆಂಜ್‌ಗೆ ಉತ್ತಮ ಪ್ರತಿಕ್ರಿಯೆ ದೊರೆತಿದೆ. ಎರಡು ವಾರಗಳಲ್ಲಿ ಗ್ರೀನ್ ಸ್ಟಾರ್ ರೇಟಿಂಗ್ ಪಡೆಯಲು 629 ಕ್ಕೂ ಹೆಚ್ಚು ಕಟ್ಟಡಗಳು ಹಾಗೂ ಸಂಸ್ಥೆಗಳು ನೋಂದಣಿ ಮಾಡಿಕೊಂಡಿವೆ. ನೀರು ಉಳಿಸಿ – ಬೆಂಗಳೂರು ಬೆಳೆಸಿ ಕಾರ್ಯಕ್ರಮದ ಪ್ರಮುಖ ಭಾಗವಾದ ಗ್ರೀನ್ ಸ್ಟಾರ್ ಚಾಲೆಂಜ್‌ನ ಪಂಚಸೂತ್ರಗಳನ್ನು ಅಳವಡಿಸಿಕೊಂಡು ನೀರು ಉಳಿತಾಯದ ಅಭಿಯಾನದಲ್ಲಿ ಪಾಲ್ಗೊಳ್ಳುವಂತೆ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕರೆ ನೀಡಿತ್ತು. ಇದಕ್ಕೆ ಬೆಂಗಳೂರು ಅಪಾರ್ಟ್ಮೆಂಟ್ ಫೆಡರೇಷನ್, ಎಫ್‌ಕೆಸಿಸಿಐ, ಪೀಣ್ಯ ಕೈಗಾರಿಕಾ ಸಂಘ, ಕ್ರೆಡೈ ಬೆಂಗಳೂರು ಸೇರಿದಂತೆ ಹಲವಾರು ಸಂಘ ಸಂಸ್ಥೆಗಳು ಸ್ವಯಂಪ್ರೇರಿತವಾಗಿ ತಮ್ಮ ಬೆಂಬಲ ವ್ಯಕ್ತಪಡಿಸಿದ್ದವು.

**ಏನಿದು ಗ್ರೀನ್ ಸ್ಟಾರ್ ಛಾಲೆಂಜ್:** ನೀರಿನ ಉಳಿತಾಯ ಮಾಡುವಂತಹ ತಂತ್ರಜ್ಞಾನಗಳನ್ನ ಅಳವಡಿಸಿಕೊಳ್ಳುವುದು, ಸಂಸ್ಕರಿಸಿದ ನೀರಿನ ಬಳಕೆಯನ್ನು ಹೆಚ್ಚಿಸಿಕೊಳ್ಳುವುದು, ಕೊಳವೆ ಬಾವಿಗಳ ಬಳಕೆಯಲ್ಲಿ ತಂತ್ರಜ್ಞಾನದ ಅಳವಡಿಕೆ ಮಾಡಿಕೊಳ್ಳುವುದು, ಮಳೆ ನೀರು ಇಂಗು ಗುಂಡಿಗಳನ್ನ ಅಳವಡಿಸಿಕೊಳ್ಳುವುದು ಹಾಗೂ ಈ ಎಲ್ಲಾ ಹೊಸ ಅನುಷ್ಠಾನಗಳ ಬಗ್ಗೆ ಗ್ರಾಹಕರಿಗೆ ಹಾಗೂ ಸಿಬ್ಬಂದಿಗೆ ಮಾಹಿತಿಯನ್ನು ಕೊಡುವ ಮೂಲಕ ನೀರಿನ ಉಳಿತಾಯದ ಮಹತ್ವವನ್ನು ಸಾರುವುದು. ಈ ಪಂಚ ಸೂತ್ರಗಳನ್ನು ಅಳವಡಿಸಿಕೊಂಡರೆ ಫೈವ್‌ಸ್ಟಾರ್ ಗ್ರೀನ್ ರೇಟಿಂಗ್ ನೀಡುವ ಬೆಂಗಳೂರು ಜಲಮಂಡಳಿಯ ಅಭಿಯಾನ ಇದಾಗಿದೆ.

**ಗ್ರೀನ್ ಸ್ಟಾರ್ ಪಡೆಯಲು ಉತ್ತಮ ಪ್ರತಿಕ್ರಿಯೆ:** ಏಪ್ರಿಲ್ 17, 2024 ರಂದು ಎಫ್‌ಕೆಸಿಸಿಐ, ಬೆಂಗಳೂರು ಅಪಾರ್ಟ್ಮೆಂಟ್ ಅಸೋಸಿಯೇಷನ್, ಕ್ರೆಡೈ, ಹೋಟೆಲ್ ಅಸೋಸಿಯೇಷನ್ ಸೇರಿದಂತೆ ಹಲವಾರು ಸಂಘ ಸಂಸ್ಥೆಗಳ ಪದಾಧಿಕಾರಿಗಳ ಜೊತೆಗೂಡಿ ಜಲಮಂಡಳಿಯ ಮಹತ್ವಾಕಾಂಕ್ಷೆಯ ಗ್ರೀನ್‌ಸ್ಟಾರ್ ಚಾಲೆಂಜ್‌ನ ನೊಂದಣಿಗಾಗಿ ರಚಿಸಿರುವ ವೆಬ್ ಪೋರ್ಟಲ್‌ಗೆ ಚಾಲನೆ ನೀಡಲಾಗಿತ್ತು.

ಈ ವೆಬ್‌ಸೈಟ್ ಮೂಲಕ ಇದುವರೆಗೂ 416 ಕ್ಕೂ ಹೆಚ್ಚು ಅಪಾರ್ಟ್ಮೆಂಟ್‌ಗಳು, 68 ಕ್ಕೂ ಹೆಚ್ಚು ಸರಕಾರಿ ಸಂಸ್ಥೆಗಳು, 2 ಐಟಿ ಪಾರ್ಕಗಳು, 13 ಐಟಿ ಕಂಪನಿಗಳು, 52 ವಾಣಿಜ್ಯ ಸಂಸ್ಥೆಗಳು, 32 ಹೋಟೇಲಗಳು, 16 ಆಸ್ಪತ್ರೆಗಳು, 11 ಶೈಕ್ಷಣಿಕ ಸಂಸ್ಥೆಗಳು, 1 ದೋಭಿ ಘಾಟ್ ಸೇರಿದಂತೆ 629 ಕಟ್ಟಡಗಳು ಹಾಗೂ ಪ್ರದೇಶಗಳು ಗ್ರೀನ್ ಸ್ಟಾರ್ ರೇಟಿಂಗ್ ಪಡೆಯಲು ನೊಂದಣಿಯಾಗಿವೆ.

> ನೀರನ್ನು ಉಳಿಸುವ ಹಾಗೂ ಸದ್ಬಳಕೆಯನ್ನು ಪ್ರೋತ್ಸಾಹಿಸುವ ಪಂಚಸೂತ್ರಗಳನ್ನು ಅಳವಡಿಸಿಕೊಳ್ಳುವ ಜಲಮಂಡಳಿಯ ಮಹತ್ವಾಕಾಂಕ್ಷೆಯ ಯೋಜನೆ ಇದಾಗಿದೆ. ಗ್ರೀನ್‌ಸ್ಟಾರ್ ರೇಟಿಂಗ್ ಪಡೆಯುವ ಮೂಲಕ ಸಂಸ್ಥೆಗಳು ಹಾಗೂ ಕಟ್ಟಡಗಳು ನೀರು ಬಳಕೆಯನ್ನು ಕಡಿಮೆ ಮಾಡುವುದಲ್ಲದೇ ವಾಟರ್ ಸಫೀಶಿಯೆಂಟ್ ಬೆಂಗಳೂರಿನ ನಿರ್ಮಾಣದಲ್ಲಿ ಪ್ರಮುಖ ಪಾತ್ರವಹಿಸಲಿದ್ದಾರೆ. ಹಂತ ಹಂತವಾಗಿ ಎಲ್ಲಾ ಬಳಕೆದಾರರನ್ನೂ ಈ ಅಭಿಯಾನದ ಭಾಗವನ್ನಾಗಿಸುವ ನಿಟ್ಟಿನಲ್ಲಿ ಇನ್ನೂ ಹೆಚ್ಚಿನ ಕಾರ್ಯಕ್ರಮಗಳನ್ನು ಜಲಮಂಡಳಿ ಹಮ್ಮಿಕೊಳ್ಳಲಿದೆ.
>
> **– ಡಾ. ವಿ.ರಾಮ್ ಪ್ರಸಾತ್ ಮನೋಹರ್, ಅಧ್ಯಕ್ಷರು, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ**



ಶುಕ್ರವಾರ ಸಂಜೆ ಸುರಿದ ಬಿರುಸಿನ ಮಳೆ ಮೈಸೂರು ನಗರಕ್ಕೆ ತಂಪೆರೆಯಿತು,

# ಒಂದು ವಾರದಲ್ಲಿ ವಿಡಿಯೋ ಬಹಿರಂಗ ಮಾಡಿದವರ ವಿಚಾರ ಹೊರಬರಲಿದೆ: ಎಸ್‌ಐಟಿ ವಿಚಾರಣೆ ಬಳಿಕ ದೇವರಾಜೇಗೌಡ ಹೇಳಿಕೆ



**ಬೆಂಗಳೂರು, ಮೇ. 03:** ಲೈಂಗಿಕ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಸಂಸದ ಪ್ರಜ್ವಲ್ ರೇವಣ್ಣ ಅವರ ವಿಡಿಯೋ ಬಹಿರಂಗ ಮಾಡಿದ ವಿಚಾರ 1 ವಾರದಲ್ಲಿ ಹೊರಬರಲಿದೆ ಎಂದು ಬಿಜೆಪಿ ಮುಖಂಡ ಹಾಗೂ ವಕೀಲ ದೇವರಾಜೇಗೌಡ ತಿಳಿಸಿದರು. ಬೆಂಗಳೂರಿನಲ್ಲಿ ಇಂದು ಎಸ್‌ಐಟಿ ವಿಚಾರಣೆ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಜ್ವಲ್ ರೇವಣ್ಣ ವಿಡಿಯೋ ಬಹಿರಂಗ ಮಾಡಿದ ವ್ಯಕ್ತಿಯ ಹೆಸರು ಒಂದು ವಾರದಲ್ಲಿ ಬಹಿರಂಗವಾಗಲಿದೆ.

ಒಂದು ವಾರದಲ್ಲಿ ಎಚ್.ಡಿ ಕುಮಾರಸ್ವಾಮಿ ಈ ವಿಚಾರ ತಿಳಿಸಲಿದ್ದಾರೆ ಯಾರು ವಿಡಿಯೋ ಬಿಡುಗಡೆ ಮಾಡಿದ್ದರು ಅನ್ನುವುದು ಹೊರಗಡೆ ಬರುತ್ತದೆ ಎಂದು ಬೆಂಗಳೂರಿನಲ್ಲಿ ಬಿಜೆಪಿ ಮುಖಂಡ ವಕೀಲ ದೇವರಾಜ ಗೌಡ ತಿಳಿಸಿದರು. ನಿನ್ನೆ ಎಸ್‌ಐಟಿ ವಿಚಾರಣೆಗೆ ಕರೆದಿದ್ದರು.ಇಂದು ಕೂಡ ವಿತರಣೆಗೆ ಬಂದಿದ್ದೆ ವಿಡಿಯೋ ವೈರಲ್ ಮಾಡಿದವರ ಬಗ್ಗೆ ಇದ್ದ ಮಾಹಿತಿಯನ್ನು ನೀಡಿದ್ದೇನೆ. ಯಾರು ಎಂದು ಈಗ ಇಲ್ಲಿ ಹೇಳುವುದಕ್ಕೆ ಸಾಧ್ಯವಿಲ್ಲ. ಹಾಸನದಲ್ಲಿ ಒಕ್ಕಲಿಗ ನಾಯಕತ್ವಕ್ಕಾಗಿ ಇಷ್ಟೆಲ್ಲ ನಡೆಯುತ್ತಿದೆ ಎಂದು ವಕೀಲಾದೇವರಾಜೇಗೌಡ ಹೇಳಿಕೆ ನೀಡಿದರು.

# ಪ್ರಜ್ವಲ್ ರೇವಣ್ಣರಿಂದ ದೌರ್ಜನ್ಯಕ್ಕೊಳಗಾದ ಮಹಿಳೆಯರಿಗೆ ರಕ್ಷಣೆ ನೀಡಿ: ಮೋಹನ್ ದಾಸರಿ




**ಬೆಂಗಳೂರು, ಮೇ. 03:** ಪ್ರಜ್ವಲ್ ರೇವಣ್ಣ ಪೆನ್‌ಡ್ರೈವ್ ಪ್ರಕರಣದಲ್ಲಿ ಶೋಷಣೆಗೆ ಒಳಗಾದ ಮಹಿಳೆಯರ ಸುರಕ್ಷತೆ ಬಗ್ಗೆ ಆತಂಕ ಇದೆ, ಸರ್ಕಾರ ಈ ಬಗ್ಗೆ ಮಾಹಿತಿ ಕೊಡಬೇಕು ಎಂದು ಆಮ್ ಆದ್ಮಿ ಪಾರ್ಟಿ ರಾಜ್ಯ ಸಂಘಟನಾ ಕಾರ್ಯದರ್ಶಿ ಮೋಹನ್ ದಾಸರಿ ಆಗ್ರಹಿಸಿದ್ದಾರೆ.

ನಗರದಲ್ಲಿ ಶುಕ್ರವಾರ ಸುದ್ದಿಗಾರರ ಜೊತೆ ಮಾತನಾಡಿದ ಮೋಹನ್ ದಾಸರಿ, ಇಡೀ ದೇಶ ಕಂಡರಿಯದ ದೊಡ್ಡ ಲೈಂಗಿಕ ಹಗರಣವಾಗಿದೆ. ಪೆನ್‌ಡ್ರೈವ್‌ನಲ್ಲಿ 300ಕ್ಕಿಂತ ಹೆಚ್ಚಿನ ಮಹಿಳೆಯರ ವಿಡಿಯೋ ಇದೆ ಎಂದು ಹೇಳಲಾಗಿದೆ. ಈ ಮಹಿಳೆಯರ ಪರಿಸ್ಥಿತಿ ಏನಾಗಿದೆ? ಈ ಎಲ್ಲಾ ಮಹಿಳೆಯರು ಸುರಕ್ಷಿತವಾಗಿದ್ದಾರಾ? ಅವರಿಗೆ ಬೆದರಿಕೆ ಇದೆಯಾ ಎನ್ನುವುದು ಗೊತ್ತಿಲ್ಲ, ಎಸ್‌ಐಟಿ ಒಂದು ಕಡೆ ತನಿಖೆ ಮಾಡುತ್ತಿದ್ದು, ಗೃಹಸಚಿವರು ಎಲ್ಲಾ ಮಹಿಳೆಯರ ಸುರಕ್ಷತೆ ಬಗ್ಗೆ ಮಾಹಿತಿ ಕೊಡಬೇಕು ಎಂದು ಒತ್ತಾಯಿಸಿದರು.

ಪ್ರಜ್ವಲ್ ರೇವಣ್ಣ ಲೈಂಗಿಕ ದೌರ್ಜನ್ಯದ ಪೆನ್‌ಡ್ರೈವ್ ಬಹಿರಂಗವಾಗುತ್ತಿದ್ದಂತೆ, ಶೋಷಿತ ಮಹಿಳೆಯರು ಭಯಭೀತರಾಗಿದ್ದಾರೆ. ಅವರು ಆಚೆ ಬಂದು ಧೈರ್ಯವಾಗಿ ಮಾತನಾಡಲು ಆಗದಂತಾಗಿದೆ. ರಾಜ್ಯದ ಮಹಿಳಾ ಆಯೋಗ ಹಾಸದಲ್ಲೇ ಇದ್ದು, ಶೋಷಣೆಗೆ ಒಳಗಾದ ಮಹಿಳೆಯರಿಗೆ ಧೈರ್ಯ ತುಂಬುವ ಕೆಲಸ ಮಾಡಬೇಕು, ಆಗ ಮಾತ್ರ ಅವರು ಧೈರ್ಯವಾಗಿ ಬಂದು ತಮ್ಮ ಮೇಲೆ ಆಗಿರುವ ದೌರ್ಜನ್ಯದ ಬಗ್ಗೆ ಮಾತನಾಡುತ್ತಾರೆ ಎಂದರು. ಉಗ್ರಂ ಸಿನಿಮಾದಲ್ಲಿ ಓರ್ವ ಪ್ರಭಾವಿ ರಾಜಕಾರಣಿಯ ಮಗ ಕಂಡ ಕಂಡ ಮಹಿಳೆಯರನ್ನು ಅತ್ಯಾಚಾರ ಮಾಡುತ್ತಾನೆ, ದೌರ್ಜನ್ಯ ಎಸಗುತ್ತಾನೆ. ಆ ತರಹದ ಘಟನೆ ಹಾಸನದಲ್ಲಿ ಕೂಡ ಆಗಿರುವ ಸಾಧ್ಯತೆ ಇದೆ. ಪ್ರಜ್ವಲ್ ರೇವಣ್ಣ ಕೂಡ ತನಗಿಷ್ಟ ಬಂದ ಮಹಿಳೆಯರ ಮೇಲೆ ಅತ್ಯಾಚಾರ ಮಾಡಿರುವ ಬಗ್ಗೆ ಯಾವುದೇ ಸಂಶಯ ಇಲ್ಲ. ಇದು ಒಂದೆರಡು ವರ್ಷದಲ್ಲಿ ಆಗಿರುವುದಲ್ಲ, ಕಳೆದ 10 ವರ್ಷಗಳಿಂದ ಇದೇ ರೀತಿ ಮಹಿಳೆಯರ ಮೇಲೆ ಶೋಷಣೆ ಮಾಡಲಾಗಿದೆ. ಗೃಹಸಚಿವ ಜಿ. ಪರಮೇಶ್ವರ್ ಅವರು ತಕ್ಷಣ ಮಹಿಳೆಯರ ಸುರಕ್ಷತೆ ಖಚಿತಪಡಿಸಿಕೊಂಡು, ಮಾಹಿತಿ ನೀಡಬೇಕು, ಆಗ ಮಾತ್ರ ಜನಕ್ಕೆ ಮಹಿಳೆಯರ ಸುರಕ್ಷತೆ ಬಗ್ಗೆ ನಂಬಿಕೆ ಬರಲಿದೆ ಎಂದು ಮೋಹನ್ ದಾಸರಿ ತಿಳಿಸಿದರು.

# ಫ್ಲೈಯಿಂಗ್ ವೆಡ್ಜ್ ಡಿಫೆನ್ಸ್ ಅಂಡ್ ಏರೋಸ್ಪೇಸ್ ಟೆಕ್ನಾಲಜೀಸ್ ಕಂಪನಿಯಿಂದ ಭಾರತದ ಮೊದಲ ಸ್ವದೇಶಿ ಬಾಂಬರ್ ಯುಎವಿ ಅನಾವರಣ



**ಬೆಂಗಳೂರು, ಮೇ. 03:** ಭಾರತದ ರಕ್ಷಣೆ ಮತ್ತು ಏರೋಸ್ಪೇಸ್ ತಂತ್ರಜ್ಞಾನ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವ ಫ್ಲೈಯಿಂಗ್ ವೆಡ್ಜ್ ಕಂಪನಿಯು ದೇಶದ ಮೊದಲ ಸ್ವದೇಶಿ ಮಾನವರಹಿತ ಬಾಂಬರ್ ಡ್ರೋನ್ ಎಂಬ ಖ್ಯಾತಿಯ ಎಫ್‌ಡಬ್ಲ್ಯೂಡಿ–200ಬಿ ಏರ್‌ಕ್ರಾಫ್ಟ್ ಅನ್ನು ಇಂದು ಹೆಮ್ಮೆಯಿಂದ ಬೆಂಗಳೂರಿನ ಎಲೆಕ್ಟ್ರಾನಿಕ್‌ಸಿಟಿಯಲ್ಲಿ ಅನಾವರಣಗೊಳಿಸಿತು.

ಮೇಕ್ ಇನ್ ಇಂಡಿಯಾ ಯೋಜನೆಗೆ ಬಲ ತುಂಬುವ ಹಾಗೂ ದುಬಾರಿ ಮಾನವರಹಿತ ಬಾಂಬರ್ ವಿಮಾನಗಳಿಗಾಗಿ ಭಾರತವು ವಿದೇಶಗಳ ಮೇಲೆ ಅವಲಂಬಿತವಾಗುವುದನ್ನು ಕಡಿಮೆ ಮಾಡುವ ಬದ್ಧತೆಯೊಂದಿಗೆ ಕಂಪನಿಯು ಭಾರತವನ್ನು ಜಾಗತಿಕ ಮಟ್ಟದ ಡ್ರೋನ್ ತಯಾರಿಕೆ ಹಾಗೂ ತಂತ್ರಜ್ಞಾನದ ಹಬ್ ಮಾಡುವ ಉದ್ದೇಶದಿಂದ ಕೆಲಸ ಮಾಡುತ್ತಿದೆ. ಇದೇ ವೇಳೆ ದೇಶಕ್ಕೆ ಸೂಕ್ತವಾದ ವಾಯುರಕ್ಷಣಾ ಸಂಪನ್ಮೂಲಗಳನ್ನು ಒದಗಿಸುವ ಹಾಗೂ ರಾಷ್ಟ್ರೀಯ ಭದ್ರತೆಗೆ ಬಲ ತುಂಬುವ ಮಹೋನ್ನತ ಗುರಿಯನ್ನೂ ಹೊಂದಿದೆ.

ಸಮಾರಂಭದಲ್ಲಿ ಫ್ಲೈಯಿಂಗ್ ವೆಡ್ಜ್ ಡಿಫೆನ್ಸ್ ಅಂಡ್ ಏರೋಸ್ಪೇಸ್ ಕಂಪನಿಯ ಸಂಸ್ಥಾಪಕ ಸುಹಾಸ್ ತೇಜಸ್ಕಂದ ಮಾತನಾಡಿ, ಕಳೆದ 15 ವರ್ಷಗಳಿಂದ ಮಾನರಹಿತ ಬಾಂಬರ್ ವಿಮಾನಗಳನ್ನು ಹೊಂದುವ ಭಾರತದ ಕನಸು ಕನಸಾಗಿಯೇ ಉಳಿದಿತ್ತು. ಡಿಆರ್‌ಡಿಓದಲ್ಲಿ ಸಾಕಷ್ಟು ಬಂಡವಾಳ ಹೂಡಿ, ಸತತ ಪ್ರಯತ್ನಗಳನ್ನು ನಡೆಸಿದ ಮೇಲೂ ತಪಸ್ ಹಾಗೂ ರುಸ್ತೋಮ್ ನಂತಹ ಯೋಜನೆಗಳು ವಿಫಲಗೊಂಡಿದ್ದವು. ಇಂದು ಎಫ್‌ಡಬ್ಲ್ಯೂಡಿ–200ಬಿ ಬಾಂಬರ್ ಡ್ರೋನ್ ಅನಾವರಣದೊಂದಿಗೆ ಭಾರತದ ಸ್ವದೇಶಿ ಮಾನವರಹಿತ ಬಾಂಬರ್ ಕನಸು ನನಸಾಗುತ್ತಿದೆ. ಅಲ್ಲದೆ, ಭಾರತವು ಸುಧಾರಿತ ಬಾಂಬರ್‌ಗಳ ಸಾಮರ್ಥ್ಯವುಳ್ಳ ದೇಶಗಳ ಸಾಲಿಗೆ ಸೇರ್ಪಡೆಯಾಗುತ್ತಿದೆ' ಎಂದು ಹೇಳಿದರು.

ಅಮೆರಿಕದ 'ಪ್ರಿಡೇಟರ್'ಗೆ ಬರೋಬ್ಬರಿ 250 ಕೋಟಿ ವೆಚ್ಚವಾದರೆ, ಅತ್ಯಾಧುನಿಕ ತಂತ್ರಜ್ಞಾನವುಳ್ಳ ಹಾಗೂ ಭಾರತದಲ್ಲೇ ಉತ್ಪಾದಿಸಿದ ಎಫ್‌ಡಬ್ಲ್ಯೂಡಿ–200ಬಿ ವಿಮಾನ ಕೇವಲ 25 ಕೋಟಿ ವೆಚ್ಚವಾಗುತ್ತದೆ. ಇದು ಭಾರತವನ್ನು ಆತ್ಮನಿರ್ಭರ ಶಕ್ತಿಯನ್ನಾಗಿ ಹೊರಹೊಮ್ಮುವಂತೆ ಮಾಡುವುದರ ಜೊತೆಗೆ, ಕಡಿಮೆ ವೆಚ್ಚದ ರಕ್ಷಣಾ ಸಾಮಗ್ರಿಗಳನ್ನು ಉತ್ಪಾದಿಸುವ ದೇಶಗಳಿಗೆ ನಾಯಕನ್ನಾಗಿಸಲಿದೆ ಎಂದು ಸುಹಾಸ್ ತಿಳಿಸಿದರು.

ಸ್ವದೇಶಿ ಬಾಂಬರ್ ವಿಮಾನ ಅನಾವರಣದ ವೇಳೆ ಅತಿಥಿಗಳಿಗೆ ಫ್ಲೈಯಿಂಗ್ ವೆಡ್ಜ್ ಡಿಫೆನ್ಸ್ ಕಂಪನಿಯ ಅತ್ಯಾಧುನಿಕ ತಂತ್ರಜ್ಞಾನದ ಉತ್ಪಾದನಾ ಘಟಕದ ವೀಕ್ಷಣೆಗೆ ಅವಕಾಶ ಮಾಡಿಕೊಡಲಾಗಿತ್ತು. ಇದೇ ಘಟಕದಲ್ಲಿ ಎಫ್ಡಬ್ಲ್ಯುಡಿ–200ಬಿ ಬಾಂಬರ್ ವಿಮಾನ ತಯಾರಾಗಿದೆ. ಈ ಬಾಂಬರ್ ವಿಮಾನ 100 ಕೆ.ಜಿ. ಪೇಲೋಡ್ ಹೊತ್ತೊಯ್ಯುವ ಸಾಮರ್ಥ್ಯ ಹೊಂದಿದೆ. ಇದು ಮೇಲ್ ಅನ್ಮ್ಯಾನ್ಸ್ ಕಾಂಬ್ಯಾಟ್ ಏರಿಯಲ್ ವೆಹಿಕಲ್ (ಮಧ್ಯಮ ಆಲ್ಟಿಟ್ಯೂಡ್, ದೀರ್ಘ ಸಾಮರ್ಥ್ಯ) ಕೆಟಗರಿಯ ಅನ್ಮ್ಯಾನ್ಸ್ ಏರಿಯಲ್ ಸಿಸ್ಟಂ (ಯುಎಎಸ್) ವಿಭಾಗಕ್ಕೆ ಸೇರುತ್ತದೆ.

ಡ್ರೋಣ್‌ನಲ್ಲಿ ಏನೆಲ್ಲ ಅಡಗಿದೆ? ದರಲ್ಲಿ ಆಪ್ಟಿಕಲ್ ಸರ್ವೇಲೆನ್ಸ್ ಪೇಲೋಡ್‌ಗಳನ್ನು ಹಾಗೂ ಕ್ಷಿಪಣಿ ರೀತಿಯಲ್ಲಿ ನಿಖರ ವಾಯುದಾಳಿ ನಡೆಸುವ, ಶಸ್ತ್ರಾಸ್ತ್ರಗಳನ್ನು ಹೊತ್ತೊಯ್ಯಬಹುದಾಗಿದೆ. ಎಫ್‌ಡಬ್ಲ್ಯೂಡಿ–200ಬಿ ವಿಮಾನ ಗರಿಷ್ಠ 200 ಕೆಟಿಎಸ್/370 ಕಿ.ಮೀ. (ಪ್ರತಿ ಗಂಟೆ) ವೇಗದಲ್ಲಿ 12ರಿಂದ 20 9. ಇದು 498 ಕೆ.ಜಿ ತೂಕ ಹೊತ್ತು ಟೇಕಾಫ್ ಮಾಡಬಲ್ಲದು. ಅಲ್ಲದೆ, ಗ್ರೌಂಡ್ ಕಂಟ್ರೋಲ್ ಸ್ಟೇಷನ್ ಜೊತೆಗೆ (ಜಿಸಿಎಸ್) 200 ಕಿ.ಮೀ.ದೂರದವರೆಗೆ ಸಂಪರ್ಕ ಹೊಂದಿರುವ ಸಾಮರ್ಥ್ಯವನ್ನು ಹೊಂದಿದೆ.

ಫ್ಲೈಯಿಂಗ್ ವೆಡ್ಜ್ ಡಿಫೆನ್ಸ್ ಅಂಡ್ ಏರೋಸ್ಪೇಸ್ ಕುರಿತು: 2022ರಲ್ಲಿ ಸುಹಾಸ್ ತೇಜಸ್ಕಂದ ಅವರು ಫ್ಲೈಯಿಂಗ್ ವೆಡ್ಜ್ ಡಿಫೆನ್ಸ್ ಅಂಡ್ ಏರೋಸ್ಪೇಸ್ ಕಂಪನಿಯನ್ನು ಆರಂಭಿಸಿದರು. ರಕ್ಷಣಾ ಕ್ಷೇತ್ರದ ದುಬಾರಿ ಶಸ್ತ್ರಾಸ್ತ್ರ ಹಾಗೂ ಯುದ್ಧ ಸಾಮಗ್ರಿಗಳಿಗಾಗಿ ಭಾರತವು ದೊಡ್ಡ ಪ್ರಮಾಣದಲ್ಲಿ ವಿದೇಶಗಳ ಮೇಲೆ ಅವಲಂಬಿತವಾಗಿರುವುದನ್ನು ಮನಗಂಡು ಈ ಸಲಕರಣೆಗಳ ಆಮದಿನ ಮೇಲೆ ಭಾರತವು ಅವಲಂಬಿತವಾಗುವುದನ್ನು ತಪ್ಪಿಸುವ ಉದ್ದೇಶದೊಂದಿಗೆ ಅವರು ಈ ಸಂಸ್ಥೆಯನ್ನು ಹುಟ್ಟುಹಾಕಿದರು. ಜೊತೆಗೆ, ಭಾರತದ ಮೇಕ್ ಇನ್ ಇಂಡಿಯಾ ಯೋಜನೆಗೆ ತಮ್ಮದೇ ಆದ ಕೊಡುಗೆ ನೀಡುವ ಮಹತ್ವಾಕಾಂಕ್ಷೆ ಕೂಡ ಅವರಿಗಿತ್ತು.

ಭಾರತವನ್ನು ಜಾಗತಿಕ ಮಟ್ಟದ ಮಾನವರಹಿತ ವಿಮಾನಗಳ (ಡ್ರೋನ್ ಎಂದು ಕೂಡ ಹೆಸರು) ಉತ್ಪಾದನೆ ಮತ್ತು ತಂತ್ರಜ್ಞಾನದ ಹಬ್ ಆಗಿಸುವ ಕನಸನ್ನು ಸುಹಾಸ್ ಹೊಂದಿದ್ದರು. ಅದರ ಜೊತೆಗೆ, ಭಾರತದ ವಾಯು ರಕ್ಷಣಾ ಪಡೆಗಳಿಗೆ ಬಲ ತುಂಬುವ ಉದ್ದೇಶವೂ ಅವರಿಗಿತ್ತು. ಅದರಂತೆ ಕಂಪನಿಯು ಸ್ವದೇಶಿ ಯುಎವಿ ತಂತ್ರಜ್ಞಾನದ ಕುರಿತು ಸಂಶೋಧನೆಗಳನ್ನು ನಡೆಸಲು ಭಾರತೀಯ ನಾಗರಿಕ ವಿಮಾನಯಾನ ನಿರ್ದೇಶನಾಲಯದ (ಡಿಜಿಸಿಎಎ ಮಾದರಿಯ ಪರವಾನಗಿಯನ್ನು ಪಡೆಯುವುದೇ ಮೊದಲಾದ ಮಹತ್ವದ ಮೈಲುಗಲ್ಲುಗಳನ್ನು ಸಾಧಿಸಿತು.

ನಂತರ ತನ್ನ ಡ್ರೋನ್‌ಗಳನ್ನು ಭಾರತದ ಪ್ರಧಾನ ಮಂತ್ರಿಗಳಿಗೆ ರಕ್ಷಣೆ ಒದಗಿಸುವ ವಿಶೇಷ ರಕ್ಷಣಾ ಪಡೆ (ಎಸ್‌ಪಿಜಿ) ಮತ್ತು "ಎಲ್ ಅಂಡ್ ಟಿ'ಯಲ್ಲಿ ಸೇರ್ಪಡೆಗೊಳಿಸುವ ಮೂಲಕ ದೇಶದ ರಕ್ಷಣಾ ವ್ಯವಸ್ಥೆಯಲ್ಲಿ ಇನ್ನಷ್ಟು ಪಾಲುದಾರಿಕೆಯನ್ನು ಪಡೆಯಿತು. ನಿರಂತರವಾದ ಸೇವಾ ಮನೋಭಾವ, ಬದ್ಧತೆ ಹಾಗೂ ಸೃಜನಶೀಲ ಆವಿಷ್ಕಾರಗಳ ಮೂಲಕ ಫ್ಲೈಯಿಂಗ್ ವೆಡ್ಜ್ ಡಿಫೆನ್ಸ್ ಅಂಡ್ ಏರೋಸ್ಪೇಸ್ ಕಂಪನಿಯು ದೇಶದ ರಕ್ಷಣಾ ತಂತ್ರಜ್ಞಾನ ಕ್ಷೇತ್ರದಲ್ಲಿ ಹೊಸ ಮೈಲುಗಲ್ಲುಗಳನ್ನು ಸ್ಥಾಪಿಸಿದೆ. ತನ್ಮೂಲಕ ಡ್ರೋಣ್ ತಂತ್ರಜ್ಞಾನ ಕ್ಷೇತ್ರದಲ್ಲಿ ನಾಯಕನಾಗಿ ಹೊರಹೊಮ್ಮಿದೆ.




ಕರ್ನಾಟಕ ಅಸೋಸಿಯೇಷನ್ ಸದಸ್ಯರು ಶುಕ್ರವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಮಣಿಪುರ ಹಿಂಸಾಚಾರದ ಸಂತ್ರಸ್ತರನ್ನು ಬೆಂಬಲಿಸಿ ಮಣಿಪುರಕ್ಕೆ ನ್ಯಾಯ ಎಂಬ ಘೋಷಣೆಯೊಂದಿಗೆ ಧರಣಿ ನಡೆಸಿದರು.

# ಬಿಜೆಪಿಗೆ ಹೆಚ್ಚಿನ ಮತ ಹಾಕಿಸಲು ಶ್ರಮಿಸಿ: ಪ್ರಕೋಷ್ಠಗಳಿಗೆ ಬೊಮ್ಮಾಯಿ ಕರೆ

**ಗದಗ, ಮೇ. 03:** ಲೋಕಸಭೆ ಚುನಾವಣೆ ಪಕ್ಷದ ಪ್ರಕೋಷ್ಠಗಳಿಗೂ ಪರೀಕ್ಷೆಯಾಗಿದ್ದು, ಎಲ್ಲ ಪ್ರಕೋಷ್ಠಗಳು ಬಿಜೆಪಿಗೆ ಹೆಚ್ಚಿನ ಮತ ಹಾಕಿಸಲು ಶ್ರಮಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಇಂದು ಗದಗನಲ್ಲಿ ರಾಜ್ಯ ಬಿಜೆಪಿ ವಿವಿಧ ಪ್ರಕೋಷ್ಠಗಳ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು." ಒಂದು ದೇಶ, ರಾಜ್ಯ ಅಭಿವೃದ್ಧಿ ಹೊಂದಬೇಕೆಂದರೆ ಎಲ್ಲ ವೃತ್ತಿಯವರು ಕೆಲಸ ಮಾಡಿದಾಗ ಮಾತ್ರ ಸಾಧ್ಯ. ಸರ್ಕಾರ ಮತ್ತು ಎಲ್ಲ ವೃತ್ತಿಬಾಂಧವರ ನಡುವೆ ಸೇತುವೆಯಾಗಿ ಕೆಲಸ ಮಾಡಲು ಪ್ರಕೋಷ್ಠಗಳನ್ನು ಮಾಡಿದೆ. ಎಲ್ಲ ಪ್ರಕೋಷ್ಠಗಳು ಸಕ್ರೀಯವಾಗಿ ಕೆಲಸ ಮಾಡಿ, ಪಕ್ಷಕ್ಕೆ ಹೆಚ್ಚಿನ ಮತ ಹಾಕುವಂತೆ ನೋಡಿಕೊಳ್ಳಬೇಕು ಎಂದರು.



ಈ ರೀತಿಯ ಪ್ರಕೋಷ್ಠಗಳು ಬೇರೆ ಪಕ್ಷದಲ್ಲಿ ಇಲ್ಲ. ಅವರು ನಿಮ್ಮ ವೃತ್ತಿಗಳ ಬಗ್ಗೆ ತಲೆ ಕೆಡಿಸಿಕೊಳ್ಳುವುದಿಲ್ಲ. ಉದಾಹರಣೆಗೆ ವೈದ್ಯರ ಪ್ರಕೊಷ್ಠ ವೈದ್ಯರ ಸಮಸ್ಯೆ ಇದ್ದಾಗ ಅದನ್ನು ನಮ್ಮ ಪ್ರಕೊಷ್ಠ ವಿವರವಾಗಿ ಸರ್ಕಾರಕ್ಕೆ ಮಾಹಿತಿ ನೀಡಬೇಕು. ಬಿಜೆಪಿ ಗೆದ್ದರೆ ನಿಮ್ಮ ವೃತ್ತಿಗಳು ಸುರಕ್ಷಿತವಾಗಿರುತ್ತವೆ.

ನರೇಂದ್ರ ಮೋದಿಯವರು ಎಲ್ಲರ ಬಗ್ಗೆ ಯೋಚಿಸುತ್ತಾರೆ. ಅವರು ಬೀದಿ ಬದಿ ವ್ಯಾಪಾರಿಗಳ ಬಗ್ಗೆ ಚಿಂತನೆ ಮಾಡಿ ಅವರಿಗೆ ಆರ್ಥಿಕ ನೆರವು ನೀಡಿದರು. ಸುಮಾರು 18 ವೃತ್ತಿಗಳಿಗೆ ನೆರವು ನೀಡುವ ವಿಶ್ವ ಕರ್ಮ ಯೋಜನೆ ಜಾರಿ ಮಾಡಿದರು. ಎಪಿಎಂಸಿ ವ್ಯಾಪಾರಸ್ಥರು, ಮೀನುಗಾರರು, ವಿದೇಶಿ ಕಂಪನಿಗಳ ದಾಳಿಯಾದಾಗ ಸಣ್ಣ ವ್ಯಾಪಾರಸ್ಥರನ್ನು ರಕ್ಷಣೆಯನ್ನು ಬಿಜೆಪಿ ಮಾಡಿದೆ. ಈ ಚುನಾವಣೆ ಪ್ರಕೋಷ್ಠಗಳಿಗೂ ಪರೀಕ್ಷೆ. ಮೋದಿಯವರ ಅಲೆ ಇದೆ. ದೊಡ್ಡ ಅಂತರದಲ್ಲಿ ಗೆಲುವು ಸಾಧಿಸುವುದು ಖಚಿತ. ಅದಕ್ಕಾಗಿ ಎಲ್ಲರೂ ಪ್ರಾಮಾಣಿಕವಾಗಿ ಕೆಲಸ ಮಾಡುವಂತೆ ಹೇಳಿದರು.

ಸಭೆಯಲ್ಲಿ ಪ್ರಕೋಷ್ಠಗಳ ರಾಜ್ಯ ಸಂಯೋಜಕ ದತ್ತಾತ್ರೆಯ, ವಿಧಾನ ಪರಿಷತ್ ಸದಸ್ಯ ಎಸ್. ವಿ. ಸಂಕನೂರು, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಹಾಜರಿದ್ದರು.

# ಮೋದಿ ಮತ್ತೆ ಪ್ರಧಾನಿಯಾಗಲು ನಾವೆಲ್ಲ ಒಂದಾಗಿದ್ದೇವೆ: ಬಂಡೆಪ್ಪ ಕಾಶೆಂಪುರ

**ಬೀದರ್, ಮೇ. 03:** ಭಾರತವನ್ನು ವಿಶ್ವ ಗುರುವನ್ನಾಗಿಸುವತ್ತ ದಾಪುಗಾಲಿಡುತ್ತಿರುವ ಪ್ರಧಾನಿ ನರೇಂದ್ರ ಮೋದಿ ಅವರು ಮತ್ತೊಮ್ಮೆ ಪ್ರಧಾನಿಯಾಗಲಿ ಎಂದು ನಾವೆಲ್ಲ ಒಂದಾಗಿದ್ದೇವೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸಚಿವರು, ಬೀದರ್ ಲೋಕಸಭಾ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿ ಭಗವಂತ ಖೂಬಾ ಗೆಲುವಿಗಾಗಿ ನಾವು, ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ನಾವು ಒಂದಾಗಿ ಶ್ರಮಿಸುತ್ತಿದ್ದೇವೆ ಎಂದು ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯ ನಾಯಕರಾಗಿರುವ ಬಂಡೆಪ್ಪ ಕಾಶೆಂಪುರ ಹೇಳಿದ್ದಾರೆ.



ಬೀದರ್ ಲೋಕಸಭಾ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿಯಾಗಿರುವ ಕೇಂದ್ರ ಸಚಿವ ಭಗವಂತ ಖೂಬಾರವರ ಪರವಾಗಿ ಭಾನುವಾರ ಬೀದರ್ ದಕ್ಷಿಣ ಕ್ಷೇತ್ರದ ಚಾಂಗಲೇರಾ, ಮುತ್ತಂಗಿ, ಉಡಬಾಳ, ಮಂಗಲಗಿ, ಖೇಳಿ ರಂಜೋಳ, ಔರಾದ ಕಾಡವಾದ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಕ್ಷೇತ್ರದ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆಯವರೊಟ್ಟಿಗೆ ಜಂಟಿಯಾಗಿ ಮತಯಾಚನೆ ನಡೆಸಿ ಅವರು ಮಾತನಾಡಿದರು.

ದೇಶದ ಒಳಿತಿಗಾಗಿ ಮೋದಿಯವರು, ದೇವೇಗೌಡರು ಒಂದಾಗಿದ್ದಾರೆ. ಅದರಂತೆಯೇ ಕ್ಷೇತ್ರದ ಒಳಿತಿಗಾಗಿ ನಾವು ಒಂದಾಗಿದ್ದೇವೆ. ಕರ್ನಾಟಕದ ಹೊಸಪೇಟೆಯಲ್ಲಿ ಮೋದಿಯವರು, ಕುಮಾರಸ್ವಾಮಿರವರು ಜೊತೆಯಾಗಿ ಮತಯಾಚನೆ ನಡೆಸಿದ್ದಾರೆ. ಬೀದರ್ ನಲ್ಲಿ ನಾನು, ಬೆಲ್ದಾಳೆಯವರು ಜೊತೆಯಾಗಿ ಮತಯಾಚನೆ ಮಾಡುತ್ತಿದ್ದೇವೆ ಎಂದರು.

ಇವತ್ತು ದೇಶ ಯಾರು ಮುನ್ನಡೆಸಬೇಕು ಎಂಬುದು ಮುಖ್ಯವಾಗಿದೆ. ದೇವೇಗೌಡರಂತಹ ಮುತ್ಸದ್ದಿ ರಾಜಕಾರಣಿ ಮೋದಿಯವರ ಆಡಳಿತವನ್ನು ಮೆಚ್ಚಿದ್ದಾರೆ. ಭಾರತ ಸುರಕ್ಷಿತವಾಗಿ ಇರಬೇಕಾದರೆ ಮೋದಿಯವರು ಮತ್ತೊಮ್ಮೆ ಪ್ರಧಾನಿಯಾಗಬೇಕು ಎಂದಿದ್ದಾರೆ. ನಾವು ದೇವೇಗೌಡರ ಹಾದಿಯಲ್ಲಿ ಸಾಗಬೇಕಾಗಿದೆ. ದೇವೇಗೌಡರು ಒಂದು ವರ್ಷದ ಹಿಂದೆಯೇ ಮೈತ್ರಿ ಮಾಡಿಕೊಂಡಿದ್ದರೆ ಕಾಂಗ್ರೆಸ್ ಸರ್ಕಾರ ಇರುತ್ತಿರಲಿಲ್ಲ. ನಾವೇ ಅಧಿಕಾರದಲ್ಲಿ ಇರುತ್ತಿದ್ದೇವು ಎಂದು ಬಂಡೆಪ್ಪ ಕಾಶೆಂಪುರ ರವರು ಅಭಿಪ್ರಾಯಪಟ್ಟರು.

**ಗ್ಯಾರಂಟಿಗಳ ಮೇಲೆ ವಿಶ್ವಾಸ ಹೋಗಿದೆ:** ಕಾಂಗ್ರೆಸ್ ನವರಿಗೆ ತಾವು ಜಾರಿಗೆ ತಂದ ಗ್ಯಾರಂಟಿಗಳ ಮೇಲೆ ವಿಶ್ವಾಸ ಹೋಗಿದೆ. ಈಗ ಅವರು ಚೊಂಬು ಹಿಡಿದುಕೊಂಡಿದ್ದಾರೆ. ಗ್ಯಾರಂಟಿ ಮರೆತುಬಿಟ್ಟಿದ್ದಾರೆ. ಚೊಂಬಿನ ಮೇಲೆ ಮತ ಕೇಳಲು ಮುಂದಾಗಿದ್ದಾರೆ. ಜನ ಅವರಿಗೆ ಪಾಠ ಕಲಿಸಬೇಕು. ಬೀದರ್ ಲೋಕಸಭಾ ಕ್ಷೇತ್ರದಿಂದ ಮೂರನೇ ಬಾರಿಗೆ ಭಗವಂತ ಖೂಬಾರವನ್ನು ಗೆಲ್ಲಿಸಬೇಕು ಎಂದು ಬಂಡೆಪ್ಪ ಕಾಶೆಂಪುರ ಮನವಿ ಮಾಡಿದರು. ಈ ವೇಳೆ ಮಾತನಾಡಿದ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆರವರು, ಭಗವಂತ ಖೂಬಾರವರು ಬೀದರ್ ಲೋಕಸಭಾ ಕ್ಷೇತ್ರದಿಂದ ಸಂಸದರಾಗಿ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ. ಕೇಂದ್ರ ಸಚಿವರಾಗಿ ಕೂಡ ಉತ್ತಮವಾದ ಕೆಲಸ ಮಾಡಿದ್ದಾರೆ ಎಂದರು.

## ಬೀದರ್ ಜಿಲ್ಲಾ ಮಾದಿಗ ಸಮುದಾಯ ಪ್ರಮುಖರ ಸಭೆ

# ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಎಲ್ಲ ಗ್ಯಾರಂಟಿ ಜಾರಿ: ಮುನಿಯಪ್ಪ

**ಬೀದರ್, ಮೇ. 03:** ಕಾಂಗ್ರೆಸ್ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ ಘೋಷಿತ ಎಲ್ಲ ಗ್ಯಾರಂಟಿಗಳನ್ನು ಈಡೇರಿಸಲಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ಸಚಿವ ಕೆ.ಎಚ್. ಮುನಿಯಪ್ಪ ಹೇಳಿದರು.

ಲೋಕಸಭೆ ಚುನಾವಣೆ ಪ್ರಯುಕ್ತ ಇಲ್ಲಿ ನಡೆದ ಮಾದಿಗ ಮಾದಿಗ ಸಮಾಜದ ಪ್ರಮುಖರ ಸಭೆಯಲ್ಲಿ ಮಾತನಾಡಿದ ಅವರು, ಭಾಗ್ಯಲಕ್ಷ್ಮಿ ಯೋಜನೆಯಡಿ ಎಲ್ಲ ಜಾತಿ, ವರ್ಗಗಳ ಬಡ ಮಹಿಳೆಯರಿಗೆ ರೂ. 1 ಲಕ್ಷ ಸಹಾಯ ಧನ ಸಿಗಲಿದೆ. ರೈತರ ಬೆಳೆಗಳಿಗೆ ಎಂ.ಎಸ್.ಪಿ. ನಿಗದಿ,

ರೈತರ ಸಾಲಮನ್ನಾ ಮೊದಲಾದವು ಕಾಂಗ್ರೆಸ್ ಆದ್ಯತೆಯಾಗಲಿವೆ. ರಾಜ್ಯದಲ್ಲಿ ಘೋಷಿಸಿದ್ದ ಐದೂ ಗ್ಯಾರಂಟಿಗಳನ್ನು ರಾಜ್ಯದ ಕಾಂಗ್ರೆಸ್ ಸರ್ಕಾರ ಈಗಾಗಲೇ ಈಡೇರಿಸಿದೆ ಎಂದು ತಿಳಿಸಿದರು.

ಬೀದರ್ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸಾಗರ್ ಖಂಡ್ರೆ ಯುವಕರಿದ್ದಾರೆ. ಉತ್ಸಾಹಿಯೂ ಆಗಿದ್ದಾರೆ. ಕ್ಷೇತ್ರದ ಸರ್ವಾಂಗೀಣ ವಿಕಾಸಕ್ಕಾಗಿ ಅವರನ್ನು ಭಾರಿ



ಬೀದರನಲ್ಲಿ ಲೋಕಸಭೆ ಚುನಾವಣೆ ಪ್ರಯುಕ್ತ ನಡೆದ ಮಾದಿಗ ಸಮಾಜದ ಪ್ರಮುಖರ ಸಭೆಯಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ಸಚಿವ ಕೆ.ಎಚ್. ಮುನಿಯಪ್ಪ ಮಾತನಾಡಿದರು.

ಬಹುಮತದಿಂದ ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ಕೆಪಿಸಿಸಿ ಮಾಜಿ ಕಾರ್ಯದರ್ಶಿ ರೋಹಿದಾಸ್ ಘೋಡೆ ಮಾತನಾಡಿ ಪ್ರಧಾನಿ ಮೋದಿ ಅವರು ಕೇಂದ್ರದಲ್ಲಿ ಅಧಿಕಾರಕ್ಕೆ ಬರುವ ಮುನ್ನ ವಿದೇಶದಿಂದ ಕಪ್ಪು ಹಣ ತಂದು ಪ್ರತಿಯೊಬ್ಬರ ಖಾತೆಗೆ ತಲಾ ರೂ. 15 ಲಕ್ಷ ಜಮೆ ಮಾಡುವುದು, ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿಸುವುದು ಸೇರಿದಂತೆ ಅನೇಕ ಆಶ್ವಾಸನೆಗಳನ್ನು ನೀಡಿದ್ದರು. ಆದರೆ, ಯಾವ ಭರವಸೆಯೂ ಕಾರ್ಯರೂಪಕ್ಕೆ ಬಂದಿಲ್ಲ ಎಂದು ಟೀಕಿಸಿದರು.

ಬೀದರ್ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಸಂಸದರಿದ್ದಾಗಲೇ ಹೆಚ್ಚು ಅಭಿವೃದ್ಧಿ ಕೆಲಸಗಳು ಆಗಿವೆ. ಧರ್ಮಸಿಂಗ್ ಅವರ ಕೊಡುಗೆ ಹಿರಿದಾಗಿದೆ. ಕರ್ನಾಟಕ ಪಶು ವೈದ್ಯಕೀಯ ವಿಶ್ವವಿದ್ಯಾಲಯ, ಸರ್ಕಾರಿ ವೈದ್ಯಕೀಯ ಕಾಲೇಜು, ಎಂಜಿನಿಯರಿಂಗ್ ಕಾಲೇಜು, 100 ಹಾಸಿಗೆಗಳ ಆಸ್ಪತ್ರೆ, ಬೀದರ್–ಹೈದರಾಬಾದ್ ಇಂಟರಸಿಟಿ ರೈಲು, ಬೀದರ್–ಯಶವಂತಪುರ ಹೊಸ ರೈಲು, ಸಂವಿಧಾನದ 371(ಜೆ) ಕಲಂ ತಿದ್ದುಪಡಿ ಮೊದಲಾದವು ಕಾಂಗ್ರೆಸ್ ಕೊಡುಗೆಗಳಾಗಿವೆ ಎಂದು ತಿಳಿಸಿದರು.

ಬಿಜೆಪಿಯ ಹಾಲಿ ಸಂಸದರು ಲೋಕಸಭೆಯಲ್ಲಿ ಜನರ ಪರವಾಗಿ ಧ್ವನಿ ಎತ್ತಿಲ್ಲ. ಕ್ಷೇತ್ರದಲ್ಲಿ ಯಾವುದೇ ಅಭಿವೃದ್ಧಿ ಕೆಲಸ ಮಾಡಿಲ್ಲ. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಜಿಲ್ಲೆಯ ಅಭಿವೃದ್ಧಿಗೆ ಹಗಲಿರುಳು ಶ್ರಮಿಸುತ್ತಿದ್ದಾರೆ. ಅವರ ಪುತ್ರ ಸಾಗರ್ ಖಂಡ್ರೆ ವಕೀಲರಿದ್ದಾರೆ. ಯುವ ನಾಯಕತ್ವ ಬೆಳವಣಿಗೆಗೆ ಅವರಿಗೂ ಒಂದು ಅವಕಾಶ ಕೊಡಬೇಕು ಎಂದು ಮನವಿ ಮಾಡಿದರು.

ವಿಧಾನ ಪರಿಷತತ್ ಸದಸ್ಯ ಅರವಿಂದಕುಮಾರ ಅರಳಿ, ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಬೀದರ್ ತಾಲ್ಲೂಕು ಘಟಕದ ಅಧ್ಯಕ್ಷ ಚಂದ್ರಕಾಂತ ಹಿಪ್ಪಳಗಾಂವ್ ಮಾತನಾಡಿದರು. ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸಂಜಯ್ ಜಾಗೀರದಾರ್, ಕಾಂಗ್ರೆಸ್ ಜಿಲ್ಲಾ ಘಟಕದ ಮಾಜಿ ಅಧ್ಯಕ್ಷ ಬಸವರಾಜ ಬುಳ್ಳಾ, ಮುಖಂಡ ವಿದ್ಯಾಸಾಗರ್ ಸಿಂಧೆ, ಸಂಜುಕುಮಾರ ಡಿ.ಕೆ, ಸಂತೋಷ ಕಟ್ಟಿತೂಗಾಂವ್ ಮತ್ತಿತರಿದ್ದರು.

# ಜನಾಧಿಕಾರ ಜನ ನೀಡುವ ಭಿಕ್ಷೆ ಶಾಸಕ ನಾರಾ ಭರತ್‌ರೆಡ್ಡಿ



**ಬಳ್ಳಾರಿ, ಮೇ. 03:** ಇದು ಶ್ರೀಮಂತರ–ಬಡವರ ನಡುವಿನ ಧರ್ಮ ಯುದ್ಧ, ಬಿಜೆಪಿಯವರು ಬಡವರ ಸಂಪತ್ತು ದೋಚಿ ಶ್ರೀಮಂತರಿಗೆ ಕೊಟ್ಟಿದ್ದಾರೆ, ಕಾಂಗ್ರೆಸ್ ಪಕ್ಷ ಬಡವರ ಪರ ಇರುವ ಪಕ್ಷ, ಹೀಗಾಗಿ ಈ ಚುನಾವಣೆಯಲ್ಲಿ ಬಿಜೆಪಿಯನ್ನು ಸೋಲೀಸಬೇಕು ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು. ಬಳ್ಳಾರಿ ನಗರದ 35ನೇ ವಾರ್ಡಿನ ಖಾಸಗಿ ಶಾಲೆಯ ಆವರಣದಲ್ಲಿ ಜನತಾ ಫೌಂಡೇಶನ್ ವತಿಯಿಂದ ಏರ್ಪಡಿಸಲಾಗಿದ್ದ ಸಂವಿಧಾನ ಮತ್ತು ಪ್ರಜಾಪ್ರಭುತ್ವ ಉಳಿವಿಗಾಗಿ ಸಮಾವೇಶದಲ್ಲಿ ಭಾಗಿಯಾಗಿ ಮಾತನಾಡಿದರು.

ಬಿಜೆಪಿಯವರು ಅಧಿಕಾರಕ್ಕೆ ಬಂದರೆ ಸಂವಿಧಾನ ಬದಲಿಸುತ್ತಾರೆ, ಸಂವಿಧಾನಶಿಲ್ಪಿ ಬಾಬಾಸಾಹೇಬರನ್ನು ನಾವು ಇಂದು ಪೂಜೆ ಮಾಡುತ್ತೇವೆ, ಬಿಜೆಪಿ ಅಧಿಕಾರಕ್ಕೆ ಬಂದರೆ ಬಾಬಾಸಾಹೇಬರನ್ನು ಪೂಜಿಸಲು ಕೂಡ ಬಿಜೆಪಿಯವರು ಬಿಡುವುದಿಲ್ಲ ಎಂದರು.ಮೀಸಲಾತಿ ತೆಗೆದು ಹಾಕಬೇಕು, ಸಂವಿಧಾನ ಬದಲಿ ಮಾಡಬೇಕು ಎಂದು ಹೇಳುವ ಬಿಜೆಪಿಯವರನ್ನು ಲೋಕಸಭಾ ಚುನಾವಣೆಯಲ್ಲಿ ಸೋಲಿಸುವ ಮೂಲಕ ಪಾಠ ಕಲಿಸಿ ಎಂದು ಶಾಸಕ ಭರತ್ ರೆಡ್ಡಿ ಕರೆ ನೀಡಿದರು.

ಅಧಿಕಾರ ಎಂಬುದು ಜನರು ನೀಡುವ ಭಿಕ್ಷೆ, ನೀವು ನೀಡಿದ ಭಿಕ್ಷೆಯಿಂದ ನಾನು ಶಾಸಕನಾಗಿರುವೆ, ನಾನೇನು ರಾಜಮನೆತನದ ವ್ಯಕ್ತಿ ಅಲ್ಲ, ಆದರೆ ನೀವು ನನ್ನ ಮೇಲೆ ಇಟ್ಟ ವಿಶ್ವಾಸ ಉಳಿಸಿಕೊಂಡಿರುವೆ ಎಂದ ಅವರು ನಿಮ್ಮ ಪಾಪದದಡಿ ಕುಳಿತು ನಿಮ್ಮ ಸೇವೆ ಮಾಡುತ್ತಿರುವೆ ಎಂದರು. ಗ್ಯಾರಂಟಿ ಯೋಜನೆಗಳ ಬಗ್ಗೆ ಬಿಜೆಪಿಯವರು ಕುಹಕದ ಮಾತು ಆಡಿದರು. ಗ್ಯಾರಂಟಿ ಭರವಸೆ ಈಡೇರಿಸುವುದಿಲ್ಲ ಎಂದು ಹೇಳಿದರು. ಆದರೆ ಕಾಂಗ್ರೆಸ್ ನೇತೃತ್ವದ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಗ್ಯಾರಂಟಿ ಭರವಸೆ ಈಡೇರಿಸಿದರು, ಅಂತಹ ಕಾಂಗ್ರೆಸ್ ಪಕ್ಷಕ್ಕೆ ಈ ಲೊಕಸಭಾ ಚುನಾವಣೆಯಲ್ಲಿ ನಮ್ಮ ಅಭ್ಯರ್ಥಿ ಈ.ತುಕಾರಾಂ ಅವರಿಗೆ ಮತ ನೀಡಿ ಎಂದರು.

ನಾನು ಶಾಸಕನಾದ ಮೇಲೆ ನಗರಕ್ಕೆ 120 ಕೋಟಿ ರೂ. ಅನುದಾನ ತಂದಿರುವೆ. 35ನೇ ವಾರ್ಡಿಗೆ 5 ಕೋಟಿ ರೂ. ವೆಚ್ಚದಲ್ಲಿ ಹಾಸ್ಟೆಲ್ ನಿರ್ಮಿಸಲು ಕ್ರಮ ಕೈಗೊಂಡಿರುವೆ ಎಂದು ಹೇಳಿದ ಭರತ್‌ರೆಡ್ಡಿ, ಬಿಜೆಪಿ ಅಭ್ಯರ್ಥಿ ನನಗೆ ರಾಜಕೀಯ ಪುನರ್ಜನ್ಮ ನೀಡಿ ಎಂದು ಹೇಳುತ್ತಿದ್ದಾರೆ. ಆದರೆ ಇವರು ಶಾಸಕರಾಗಿದ್ದರು, ಸಂಸದರಾಗಿದ್ದರು, ಏನು ಕೆಲಸ ಮಾಡಿದ್ದಾರೆ ಎಂದು ಪ್ರಶ್ನೆ ಮಾಡಬೇಕು ಎಂದ ಅವರು, ಬಿಜೆಪಿಯವರು ಶಾಸಕರಾಗಿದ್ದರು, ಸಂಸದರಾಗಿದ್ದರು ಜಿಲ್ಲೆಗೆ ಒಂದೇ ಒಂದು ಕೈಗಾರಿಕೆ ತರಲಿಲ್ಲ, ಇಂದು ಜಿಲ್ಲೆಯಲ್ಲಿರುವ ಜಿಂದಾಲ್ ಸಂಸ್ಥೆಯನ್ನು ಸ್ಥಾಪಿಸಿದ್ದು ಇಂದಿರಾ ಗಾಂಧಿ, ಕೆಪಿಟಿಸಿಎಲ್ ತಂದದ್ದು ಸೋನಿಯಾ ಗಾಂಧಿಯವರು, ಬಿಜೆಪಿ ಸಾಧನೆ ಶೂನ್ಯ ಎಂದು ಕುಟುಕಿದರು.

ಬಿಜೆಪಿಗೆ ಮತ ನೀಡಿದರೆ ಅಂಬೇಡ್ಕರ್ ಅವರಿಗೆ ಮೋಸ ಮಾಡಿದಂತೆ, ಬಿಜೆಪಿಗೆ ಮತ ನೀಡಿದರೆ ಮಕ್ಕಳ ಭವಿಷ್ಯ ಹಾಳು ಮಾಡಿದಂತೆ, ಬಿಜೆಪಿಗೆ ಮತ ನೀಡಿದರೆ ಬಳ್ಳಾರಿಗೆ ಅನ್ಯಾಯ ಮಾಡಿದಂತೆ ಎಂದ ಅವರು ಬಿಜೆಪಿಯ ಅಭ್ಯರ್ಥಿಗಳು ಮೋದಿ ಅವರ ಹೆಸರು ಹೇಳಿ ಮತ ಕೇಳುತ್ತಿದ್ದಾರೆ, ಹಾಗಿದ್ದರೆ 5 ವರ್ಷ ಇವರು ಮಾಡಿದ ಕೆಲಸ ಎಲ್ಲಿ ಹೋದವು ಎಂದು ಪ್ರಶ್ನಿಸಿದರು. ಸಚಿವ ರಾಮಲಿಂಗಾರೆಡ್ಡಿ ಹಾಜರಿದ್ದು ಮಾತನಾಡಿ." ರಾಜ್ಯದಲ್ಲಿ ಐದು ಗ್ಯಾರಂಟಿಗಳನ್ನು ಯಶಸ್ವಿಯಾಗಿ ಜಾರಿಗೆ ತರುವ ಮೂಲಕ ಕಾಂಗ್ರೆಸ್ ತನ್ನ ಮಾತು ಉಳಿಸಿಕೊಂಡಿದೆ. ಈಗ ಲೋಕಸಭಾ ಚುನಾವಣೆಯಲ್ಲಿ ರಾಷ್ಟ್ರ ಮಟ್ಟದಲ್ಲಿ ಒಟ್ಟು 25 ಗ್ಯಾರಂಟಿಗಳನ್ನು ಈಡೇರಿಸುವ ಮೂಲಕ ಜನರ ಬದುಕನ್ನು ಹಸನು ಮಾಡಲಿದೆ. ಹೀಗಾಗಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ಎಂದರು.

ಕೇರಳ ರಾಜ್ಯದ ಶಾಸಕ ಚಾಂಡಿ ಒಮೆನ್ ಹಾಗೂ ಯುವಕಾಂಗ್ರೆಸ್ ನ ಔಟ್‌ರೀಚ್ ಸೆಲ್ ರಾಜ್ಯಾಧ್ಯಕ್ಷ ಕಾರ್ತಿಕ್, ಡಿಸಿಸಿ ನೂತನ ಜಿಲ್ಲಾಧ್ಯಕ್ಷ ಅಲ್ಲಂ ಪ್ರಶಾಂತ್, ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎ.ಮಾನಯ್ಯ, ಕಲ್ಲುಕಂಭ ಪಂಪಾಪತಿ, ಎಲ್. ಮಾರಣ್ಣ, ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಚಿದಾನಂದ ಯಾದವ್,ವೆಂಕಟೇಶ್ ಹೆಗಡೆ, ಸಿದ್ಧೇಶ್ ಮೊದಲಾದವರು ಹಾಜರಿದ್ದರು.

# ಕಾಂಗ್ರೆಸ್ ಗೆದ್ದರೆ ದೇಶಕ್ಕೆ ಗಂಡಾಂತರ ಲೋಕ ಚುನಾವಣೆಯ ನಂತರ ರಾಜ್ಯ ಕಾಂಗ್ರೆಸ್ ಸರ್ಕಾರ ಪತನ: ದೊಡ್ಡನಗೌಡ

**ರಾಯಚೂರು, ಮೇ. 03:** ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರದ ಎನ್‌ಡಿಎ ಸರಕಾರದ ದಿಟ್ಟ ನಿಲುವು–ನಿರ್ಧಾರಗಳಿಂದಾಗಿ ಭಾರತ ಹತ್ತು ವರ್ಷಗಳಲ್ಲಿ ವಿಶ್ವನಾಯಕತ್ವಕ್ಕೆ ಮುನ್ನುಗ್ಗಿದೆ. ಇಂದು ನಾವು ನೀವೆಲ್ಲ ಸುರಕ್ಷಿತವಾಗಿರಬೇಕಾದರೆ ದೇಶ ಕಾಯುವ ಗಡಿಯ ರಕ್ಷಣಾ ಸಿಬ್ಬಂದಿಗಳ ಕಾಯಕದಿಂದ. ಸೈನಿಕರೊಂದಿಗೆ ಬೆರೆತು ಅವರಿಗೆ ಆತ್ಮಸ್ಥೈರ್ಯ ತುಂಬುವ ಕಾರ್ಯ ಮಾಡಿದವರೆಂದರೆ ಮೋದಿಯವರು ಒಬ್ಬರೇ ಎಂದು ಕುಷ್ಟಗಿ ಶಾಸಕ ಹಾಗೂ ಕ್ಷೇತ್ರದ ಚುನಾವಣಾ ಉಸ್ತುವಾರಿ ದೊಡ್ಡನಗೌಡ ಪಾಟೀಲ ಕೊರಡಕೇರಾ ಹೇಳಿದರು.



> ಸಂವಿಧಾನ, ಮೀಸಲಾತಿ ಹೆಸರಿನಲ್ಲಿ ಕಾಂಗ್ರೆಸ್ ಪಕ್ಷ ದಲಿತ, ಅಲ್ಪಸಂಖ್ಯಾತರ ಮತಗಳನ್ನು ಸೆಳೆಯಲು ಯತ್ನಿಸುತ್ತಿದೆ. ದಲಿತರಿಗಿರುವ ಶೇ. 18 ಮೀಸಲಾತಿಯನ್ನು ತೆಗೆಯಬೇಕಾದರೆ ಇನ್ನುಳಿದವರಿಗೆ ನೀಡಿದ ಶೇ. 42 ಮಿಸಲಾತಿಯನ್ನು ಮೊದಲು ತೆಗೆಯಬೇಕಾಗುತ್ತದೆ. ಸಿಎಎ ಕುರಿತು ಕಾಂಗ್ರೆಸ್ ಮಾಡುತ್ತಿರುವ ಅಪಪ್ರಚಾರಕ್ಕೆ ದಲಿತ, ಅಲ್ಪಸಂಖ್ಯಾತರು ಬಲಿಯಾಗಬಾರದು.
>
> – ಆರ್. ರುದ್ರಯ್ಯ, ಬಿಜೆಪಿ ಮುಖಂಡರು

ಜಿಲ್ಲೆಯ ಮುದಗಲ್ ಪಟ್ಟಣದ ಪುರಸಭೆ ರಂಗಮಂದಿರದಲ್ಲಿ ಆಯೋಜಿಸಿದ್ದ ಮುದಗಲ್ಲ ಮಂಡಲ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು ಕಾಂಗ್ರೆಸ್ ಪಕ್ಷದ ಕಾರ್ಯವೈಖರಿ ನೋಡಿದರೆ, ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿದರೆ ದೇಶಕ್ಕೆ ಗಂಡಾಂತರ ತಪ್ಪಿದ್ದಲ್ಲ ಎಂದರು.

ಗ್ಯಾರಂಟಿಗಳಿಂದ ಕ್ಷೇತ್ರಗಳ ಅಭಿವೃದ್ಧಿಗೆ ಅನುದಾನದ ಕೊರತೆಯಿಂದಾಗಿ ಬೇಸತ್ತ ಆಡಳಿತ ಪಕ್ಷದ ಶಾಸಕರೇ ಚುನಾವಣೆ ಬಳಿಕ ಕೈಕೊಡುವ ಅನುಮಾನವಿದೆ. ಲೋಕಸಭಾ ಚುನಾವಣೆ ಬಳಿಕ ಸರಕಾರ ಪತನವಾದರೂ ಆಶ್ಚರ್ಯಪಡುವಂತಿಲ್ಲ ಎಂದು ಅವರು ಹೇಳಿದರು.

> ಕಾಂಗ್ರೆಸ್ ಅಭ್ಯರ್ಥಿ ಜಿ. ಕುಮಾರ ನಾಯಕ ಈ ಹಿಂದೆ ಸರಕಾರಿ ಸೇವೆಯಲ್ಲಿದ್ದಾಗ ಆರ್‌ಟಿಪಿಎಸ್ ಸೇರಿದಂತೆ ಮುಂತಾದ ಘಟಕಗಳನ್ನು ಇಲ್ಲಿಯೇ ಸ್ಥಾಪಿಸುವಂತೆ ಮಾಡಿ ಜಿಲ್ಲೆಯ ಜನತೆ ಉಷ್ಣ ತಾಪಮಾನದಲ್ಲಿ ವಾಸಿಸುವುದಕ್ಕೆ ಕಾರಣರಾಗಿದ್ದಾರೆ. ಎಲ್ಲೂ ಸಲ್ಲದ ಯೋಜನೆಗಳನ್ನು ಇಲ್ಲಿ ತಂದು ನಮ್ಮ ಜಿಲ್ಲೆಯ ಜನರಿಗೆ ಉಪಯೋಗಕ್ಕೆ ಬಾರದಂತೆ ಮಾಡಿದ್ದಾರೆ. ಉದ್ಯೋಗ ನೀಡದೇ ವಂಚಿಸಿದ್ದಾರೆ. ಕಾಂಗ್ರೆಸ್ ಪಕ್ಷ ಸ್ಥಳೀಯರಿಗೆ ಅನ್ಯಾಯ ಮಾಡಿ ಅನ್ಯ ಜಿಲ್ಲೆಯವರಿಗೆ ಮಣೆ ಹಾಕಿರುವದು ಸ್ವಾಭಿಮಾನದ ಪ್ರಶ್ನೆಯಾಗಿದೆ. ಮುಂದಿನ ಚುನಾವಣೆಗೆ ನಾನು ಸ್ಪರ್ಧಿಸದೆ ಉತ್ತಮ ಕಾರ್ಯಕರ್ತರಿಗೆ ಅವಕಾಶ ನೀಡುವೆ, ಇದು ನನ್ನ ಕೊನೆಯ ಚುನಾವಣೆ. ನನಗೆ ಬೆಂಬಲಿಸಿ.
>
> –ರಾಜಾ ಅಮರೇಶ್ವರ ನಾಯಕ್, ಬಿಜೆಪಿ ಅಭ್ಯರ್ಥಿ

ಮುಖಂಡ ಡಾ. ಗುರುರಾಜ ದೇಶಪಾಂಡೆ, ಶರಣಪ್ಪ ಮೇಟಿ, ರಾಜಾ ಸೋಮನಾಥ ನಾಯಕ, ಬಸಣ್ಣ ಮೇಟಿ, ಗುರುಬಸಪ್ಪ ಸಜ್ಜನ, ಜೆಡಿಎಸ್ ತಾಲೂಕಾ ಅಧ್ಯಕ್ಷ ಬಸವರಾಜ ಮಾಕಾಪುರ, ಮುದಗಲ್ಲ ಮಂಡಲ ಬಿಜೆಪಿ ಅಧ್ಯಕ್ಷ ಹುಲ್ಲೇಶ ಸಾಹುಕಾರ, ಲಿಂಗಸುಗೂರು ಮಂಡಲ ಅಧ್ಯಕ್ಷ ಆದಪ್ಪ, ಸಿದ್ದಯ್ಯ ಹೊರಪೇತ, ಅಮ್ಮಾಪೂರ ಮತ್ತಿತರರು ವೇದಿಕೆಯ ಮೇಲಿದ್ದರು. ವೀರನಗೌಡ ಲೆಕ್ಕಿಹಾಳ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಣ್ಣ ಸಿದ್ದಯ್ಯಸ್ವಾಮಿ ಸ್ವಾಗತಿಸಿದರು.

# ಮೋದಿ ಮತ್ತೊಮ್ಮೆ ಪ್ರಧಾನಿಯಾಗಲೆಂದು ಮಹಿಳೆಯರಿಂದ ವಿಶೇಷ ಪೂಜೆ, ಪ್ರಾರ್ಥನೆ



**ವಿಜಯಪುರ, ಮೇ. 30:** ದೇಶದಲ್ಲಿ ಬಿಜೆಪಿ ಮತ್ತೆ ಅಧಿಕಾರಕ್ಕೆ ಬಂದು ಹೆಮ್ಮೆಯ ನಾಯಕ ನರೇಂದ್ರ ಮೋದಿಯವರು ಮತ್ತೊಮ್ಮೆ ದೇಶದ ಪ್ರಧಾನಿಯಾಗಲಿ ಎಂದು ಪ್ರಾರ್ಥಿಸಿ ವಿಜಯಪುರ ಬಿಜೆಪಿ ಮಹಿಳಾ ಮೋರ್ಚಾ ಕಾರ್ಯಕರ್ತೆಯರು ಕಾಳಿಕಾಂಬ ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು.

ದೇಶದ ರಕ್ಷಣೆ, ಅಭಿವೃದ್ಧಿಗಾಗಿ ದಿಟ್ಟ ನಿರ್ಧಾರಗಳನ್ನು ಕೈಗೊಂಡು ವಿಶ್ವವೇ ಭಾರತದತ್ತ ತಿರುಗಿ ನೋಡುವಂತೆ ಮಾಡಿದ ಪ್ರಧಾನಿ ನರೇಂದ್ರ ಮೋದಿ ಅವರಿಗೆ ದೇವರು ಇನ್ನಷ್ಟು ಶಕ್ತಿ, ಆಯುರಾರೋಗ್ಯ ಕರುಣಿಸಿ, ಅವರು ಮತ್ತೊಮ್ಮೆ ದೇಶದ ಪ್ರಧಾನಿಯಾಗಲಿ. ಅವರ ನೇತೃತ್ವದಲ್ಲಿ ಬಿಜೆಪಿ ಪಕ್ಷವೂ ಲೋಕಸಭಾ ಚುನಾವಣೆಯಲ್ಲಿ ಅತ್ಯಧಿಕ ಸ್ಥಾನಗಳನ್ನು ಗಳಿಸಿ ಮತ್ತೆ ಅಧಿಕಾರಕ್ಕೆ ಬರಲಿ ಎಂದು ಪ್ರಾರ್ಥಿಸಿ, ಬಿಜೆಪಿ ಮಹಿಳಾ ಮೋರ್ಚಾದ ಜಿಲ್ಲಾಧ್ಯಕ್ಷೆ ಸಪ್ನಾ ಕಣಮುಚನಾಳ ಅವರ ನೇತೃತ್ವದಲ್ಲಿ ನೂರಾರು ಸಂಖ್ಯೆಯ ಮಹಿಳಾ ಕಾರ್ಯಕರ್ತೆಯರು ನಗರದ ಕಾಳಿಕಾಂಬ ದೇವಸ್ಥಾನದಲ್ಲಿ ದೇವಿಗೆ ಪೂಜೆ ನೆರವೇರಿಸಿ ಭಕ್ತಿಯಿಂದ ಪ್ರಾರ್ಥಿಸಿದರು.

ಮಹಿಳಾ ಮೋರ್ಚಾದ ಹಲವಾರು ಜಿಲ್ಲಾ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

# ಜುಲೈ 13: ವಿಜಯಪುರ ಜಿಲ್ಲೆಯ ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ್ ಅದಾಲತ್

**ವಿಜಯಪುರ, ಮೇ. 03:** ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಮೇರೆಗೆ 2024ರ ಜುಲೈ 13ರಂದು ಜಿಲ್ಲೆಯ ಜಿಲ್ಲಾ ಕೇಂದ್ರ ಹಾಗೂ ತಾಲೂಕಾ ಕೇಂದ್ರದ ಎಲ್ಲ ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ಆಯೋಜಿಸಲಾಗಿದೆ.

ರಾಷ್ಟ್ರೀಯ ಲೋಕ್–ಅದಾಲತ್ ನ ರಾಜಿಯಾಗಬಹುದಾದ ಎಲ್ಲಾ ಕ್ರಿಮಿನಲ್ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪರಿಹಾರ ಕೋರಿ ಸಲ್ಲಿಸಿರುವ ಪ್ರಕರಣಗಳು, ಕೌಟುಂಬಿಕ ವ್ಯಾಜ್ಯಗಳು, ಆಸ್ತಿಯಲ್ಲಿ ಪಾಲು ವಿಭಾಗ ಕೋರಿ ಸಲ್ಲಿಸಿರುವ ದಾವೆಗಳು, ದೂರವಾಣಿ ಬಾಕಿ ಬಿಲ್ಲು ಪಾವತಿ ಪ್ರಕರಣಗಳು, ನೀರಿನ ಬಿಲ್ಲು ಬಾಕಿ ಪಾವತಿ ಪ್ರಕರಣಗಳು, ಜೀವನಾಂಶ ಕೋರಿ ಸಲ್ಲಿಸಿರುವ ಪ್ರಕರಣಗಳು, ಕಾರ್ಮಿಕ ವ್ಯಾಜ್ಯಗಳು, ಭೂಸ್ವಾಧೀನ ಪ್ರಕರಣಗಳು, ಕಂದಾಯ ಪ್ರಕರಣಗಳು, ಸಾಲ ವಸೂಲಾತಿ ಪ್ರಕರಣಗಳು, ಬ್ಯಾಂಕ್ ವ್ಯಾಜ್ಯಗಳು ಹಾಗೂ ಇತರೆ ಸಿವಿಲ್ ಪ್ರಕರಣಳನ್ನು ಲೋಕ್ ಅದಾಲತ್‌ನಲ್ಲಿ ಇತ್ಯರ್ಥಪಡಿಸಲಾಗುವುದು.

ಜುಲೈ 13 ರಂದು ಜಿಲ್ಲೆಯಾದ್ಯಂತ ಹಮ್ಮಿಕೊಳ್ಳುವ ಲೋಕ್ ಅದಾಲತ್‌ನಲ್ಲಿ ಕಕ್ಷಿದಾರರು ಭಾಗವಹಿಸಿ, ರಾಜಿ ಮೂಲಕ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಂಡು ನೆಮ್ಮದಿಯ ಜೀವನಕ್ಕೆ ನಾಂದಿ ಹಾಡಲು ಸುವರ್ಣಾವಕಾಶವಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಪ್ರಕರಣವನ್ನು ಇತ್ಯರ್ಥ ಪಡಿಸಿಕೊಳ್ಳುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂಥ ಪ್ರತಿನಿಧಿ ಸಿಗಬೇಕಾದರೆ ಪುಣ್ಯ ಮಾಡಿದ್ದೀರಿ: ಅಣ್ಣಾಮಲೈ

# ಪ್ರಚಾರ ಸಭೆಯಲ್ಲಿ ಅಣ್ಣಾಮಲೈ ಹೊಗಳಿಕೆಗೆ ಜಿಗಜಿಣಗಿ ಕಣ್ಣೀರು

**ವಿಜಯಪುರ, ಮೇ. 3:** ಲೋಕ ಸಭಾ ಕ್ಷೇತದ ವಿಜಯಪುರ ಅಭ್ಯರ್ಥಿ ರಮೇಶ್ ಜಿಗಜಿಣಗಿ ಪರ ಮಾಜಿ ಐಎಎಸ್ ಅಧಿಕಾರಿ ಹಾಗೂ ತಮಿಳುನಾಡು ಬಿಜೆಪಿ ರಾಜ್ಯಾಧ್ಯಕ್ಷ ಕೆ. ಅಣ್ಣಾಮಲೈ ಅವರು ಮತಯಾಚನೆ ಮಾಡಿದರು. ಈ ವೇಳೆ ಅಣ್ಣಾಮಲೈ ಅವರು, ಇಂಥ ಸಭ್ಯ ಮತ್ತು ಜನಪರವಾದ ವಿಚಾರಗಳನ್ನು ಹೊಂದಿರುವ ಪ್ರತಿನಿಧಿ ಸಿಗಬೇಕಾದರೆ ವಿಜಯಪುರ ಜನತೆ ಪುಣ್ಯ ಮಾಡಿದ್ದೀರಿ ಎಂದು ರಮೇಶ್ ಅವರ ಸಾಧನೆಗಳನ್ನು ಹೊಗಳಿದರು. ತಮ್ಮನ್ನು ಹೊಗಳುತ್ತಿದ್ದಂತೆ ಭಾವುಕರಾದ ಜಿಗಜಿಣಗಿ ಅವರು ಕಣ್ಣೀರು ಹಾಕಿದ ಪ್ರಸಂಗವೂ ನಡೆಯಿತು.



ವಿಜಯಪುರದಲ್ಲಿ ನಡೆದ ಬಿಜೆಪಿ ಚುನಾವಣಾ ಪ್ರಚಾರ ಸಭೆಯಲ್ಲಿ ತಮಿಳುನಾಡು ಬಿಜೆಪಿ ಅಧ್ಯಕ್ಷ ಅಣ್ಣಾಮಲೈ ಅವರ ಭಾವುಕ ನುಡಿಗಳಿಗೆ ರಮೇಶ್ ಜಿಗಜಿಣಗಿ ಕಣ್ಣೀರು ಹಾಕಿದರು.

ವಿಜಯಪುರ ನಗರದ ಮೀನಾಕ್ಷಿ ಚೌಕನಲ್ಲಿ ಆಯೋಜಿಸಿದ್ದ ಯುವಸಮಾವೇಶದಲ್ಲಿ ಅಣ್ಣಾಮಲೈ ಅವರು ಮಾತನಾಡಿದರು. ಏಳು ಬಾರಿ ಸತತವಾಗಿ ಗೆಲ್ಲುವುದು ಸುಲಭವಲ್ಲ. 70 ವರ್ಷ ವಯಸ್ಸಿನ ರಮೇಶ ಜಿಗಜಿಣಗಿ ಅವರು ಗೆದ್ದೇ ಗೆಲ್ಲುತ್ತಾರೆ. ವಿಜಯಪುರ ಕ್ಷೇತ್ರದ ಜನರ ಪ್ರೀತಿ ಜಿಗಜಿಣಗಿಯವರ ಮೇಲಿದೆ ಎಂದು ಅಣ್ಣಾಮಲೈ ಹೇಳಿದರು. ಈ ವೇಳೆ ರಮೇಶ ಜಿಗಜಿಣಗಿ ಆನಂದಭಾಷ್ಪ ಸುರಿಸಿದರು.

ನಾವು ದೊಡ್ಡಸಂಖ್ಯೆಯಲ್ಲಿ ನಾವು ಸೇರಿದ್ದೇವೆ. ಯುವಕರ ಬದುಕು ದೇಶದಲ್ಲಿ ಹೇಗೆ ಇರಬೇಕೆಂದು ಹೇಳಲು ಸೇರಿದ್ದೇವೆ. 26 ನೇ ವಯಸ್ಸಿನಲ್ಲಿ ಜಿಗಜಿಣಗಿ ಸಚಿವರಾಗಿದ್ದರು. 2014 ಮೇ 30ರಂದು ನಾವು ಹೊಸ ರಾಜಕೀಯ ಅಧ್ಯಾಯ ಬರೆದೆವು. ಮೋದಿ ಅವರು ಪ್ರಧಾನಮಂತ್ರಿ ಆಗಬೇಕೆಂದು ಬಯಸಿದೆವು. ಪಿಎಂ ಜಾಗದಲ್ಲಿ ಮೋದಿ ಅವರನ್ನು ಕೂರಿಸಿದೆವು. ಆ ವೇಳೆ 11 ಕೋಟಿಜನರಿಗೆ ಶೌಚಾಲಯ ಇರಲಿಲ್ಲ, 42 ಕೋಟಿ ಜನರಿಗೆ ಬ್ಯಾಂಕ್ ಅಕೌಂಟ್ ಇರಲಿಲ್ಲ. ಆದರೆ ಮೋದಿ ಬಂದ ಬಳಿಕ ಎಲ್ಲವೂ ಸಿಕ್ಕಿದೆ ಎಂದು ಅಣ್ಣಾಮಲೈ ಅವರು ಹೇಳಿದರು.

ಕಾಂಗ್ರೆಸ್ ನವರು ಪ್ರತಿ ಚುನಾವಣೆಯಲ್ಲೂ ಬಡತನ ನಿರ್ಮೂಲನೆ ಮಾಡುತ್ತೇವೆಂದು ಭಾಷಣ ಮಾಡಿಕೊಂಡು ಬಂದಿದ್ದಾರೆ. ಆದರೆ ಬಡತನ ನಿರ್ಮೂಲನೆ ಮಾಡಲಿಲ್ಲ. ಈಗಲೂ ಅದೇ ಮಾತನಾಡುತ್ತಿದ್ದಾರೆ. ವಾಜಪೇಯಿ 13 ದಿನ, 13 ತಿಂಗಳು ಹಾಗೂ ಐದು ವರ್ಷ ಸರ್ಕಾರ ಮಾಡಿದ್ದರು. ಮೋದಿ ಅವರಿಗೆ 10 ವರ್ಷ ಅಧಿಕಾರ ಸಿಕ್ಕಿದೆ. ಕಾಂಗ್ರೆಸ್ ಈಗಲೂ ಅದೇ ಬಡತನದ ಕುರಿತು ಮಾತನಾಡುತ್ತಿದೆ ಎಂದು ಅಣ್ಣಾಮಲೈ ಅವರು ಲೇವಡಿ ಮಾಡಿದರು.

ಒಂದು ಮತದಿಂದ ಏನಾಗುತ್ತದೆ ಎಂದು ಉದಾಸೀನ ಮಾಡಬೇಡಿ. ರಾಜಕೀಯ ವ್ಯವಸ್ಥೆ ಬಗ್ಗೆ ನಿರ್ಧರಿಸಲು ಮೋದಿಗೆ ವೋಟ್ ಮಾಡಿ. ರಮೇಶ ಜಿಗಜಿಣಗಿ ಮತ್ತೇ ಸಂಸದರಾಗಬೇಕು ಎಂದು ಹೇಳಿದರು

197 ದೇಶಗಳಲ್ಲಿ ಭಾರತ ಮುಂಚೂಣಿಯಲ್ಲಿದೆ. ಮೋದಿ ಇಂತ ವ್ಯವಸ್ಥೆ ಮಾಡಿದ್ದಾರೆ. ದೇಶ ಮೊದಲು ಎಂಬುದು ಮೋದಿಯವರ ಸಿದ್ಧಾಂತ. ತಮಿಳುನಾಡಿನಲ್ಲಿ ಒಂದು ಪಕ್ಷವಿದೆ. ಮನಮೋಹನ್ ಸಿಂಗ್ ಪ್ರಧಾನಿಯಾಗಿದ್ದಾಗ ಬೆಂಬಲ ನೀಡಿದವರು ಅವರು. ತಮಗೆ ಬೇಕಾದ ಖಾತೆಗಳನ್ನು ಪಡೆದುಕೊಂಡರು. ತಮಿಳುನಾಡಿನಲ್ಲಿ ಏಳು ಕೇಂದ್ರ ಸಚಿವರಾಗಿದ್ದರು. 2 ಜಿ ಸ್ಪೆಕ್ಟ್ರಮ್ ಹಗರಣ ಮಾಡಿದರು ಎಂದು ಇಂಡಿಯಾ ಬ್ಲಾಕ್ ಬಗ್ಗೆ ದೂರಿದರು.

ಜೂನ್ 4 ರ ಬಳಿಕ 70 ವರ್ಷದ ಮೇಲಿನವರಿಗೆ 5 ಲಕ್ಷ ರೂಪಾಯಿ ಆರೋಗ್ಯ ವಿಮೆ ಕೊಡೊದಾಗಿ ಮೋದಿ ಹೇಳಿದ್ದಾರೆ. ಮೋದಿ ಮನೆಯಿಲ್ಲದವರಿಗರ ಮನೆ ನಿರ್ಮಾಣ ಮಾಡಿ ಕೊಟ್ಟಿದ್ದಾರೆ. 295 ಭರವಸೆಗಳಲ್ಲಿ ಎಲ್ಲ ಭರವಸೆ ಈಡೇರಿಸಿದ್ದೇವೆ ಎಂದು ಅವರು ಹೇಳಿದರು.

ಈ ಚುನಾವಣೆಯಲ್ಲಿ ಶೇಕಡಾ 51 ಮತ ಬಿಜೆಪಿಗೆ ಬೀಳಬೇಕು. ಮೇಡ್ ಇನ್ ಇಂಡಿಯಾದಲ್ಲಿ ಚಂದ್ರನ ದಕ್ಷಿಣ ಕಕ್ಷೆಯಲ್ಲಿ ಇಳಿದಿದ್ದೇವೆ. 14 ದೇಶಗಳಿಗೆ ನಾನಾ ಸರಕು ರಫ್ತು ಮಾಡುತ್ತಿದ್ದೇವೆ. ಕೊರೊನಾ ಕಾಲದಲ್ಲಿ ಅಮೆರಿಕಾಗೂ ಮುನ್ನ ಲಸಿಕೆ ಕಂಡು ಹಿಡಿದೆವು. 10 ವರ್ಷ ಕಾಲ ಭ್ರಷ್ಟಾಚಾರ ರಹಿತ ಆಡಳಿತ ಮಾಡಿದ್ದೇವೆ ಎಂದು ಅಣ್ಣಾಮಲೈ ಹೇಳಿದರು.




ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ಶುಕ್ರವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಾವಿದ್ದು ನಿಲ್ಲದಿದ್ದರೇ ಕರ್ನಾಟಕ ಸಂಘಟನೆ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

## ಹುಬ್ಬಳ್ಳಿಯಲ್ಲಿ 10-15 ದಿನಕ್ಕೊಮ್ಮೆ ನೀರು ಪೂರೈಕೆ...!

# ನೀರು ಕೊಡದಿದ್ದರೆ ಚುನಾವಣೆ ಬಹಿಷ್ಕಾರದ ಎಚ್ಚರಿಕೆ

**ಹುಬ್ಬಳ್ಳಿ, ಮೇ. 3:** ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ಕುಡಿಯಲು ನೀರಿಗೆ ಹಾಹಾಕಾರ ಮುಂದುವರಿದಿದೆ. ಇದೀಗ ಹುಬ್ಬಳ್ಳಿಯ ನಿವಾಸಿಗಳು ನೀರು ಕೊಡದಿದ್ದರೆ ಚುನಾವಣೆ ಬಹಿಷ್ಕಾರ ಮಾಡಲು ನಿರ್ಧರಿಸಿದ್ದಾರೆ.

ಹೌದು, ಹುಬ್ಬಳ್ಳಿಯಲ್ಲಿನ ವಿದ್ಯಾನಗರದ ತಿಮ್ಮಸಾಗರ ಬಡಾವಣೆ ನಿವಾಸಿಗಳು ಕುಡಿಯುವ ನೀರಿಗಾಗಿ ಆಗ್ರಹಿಸಿ ಹೊಸೂರು ಕೋರ್ಟ್ ಎದುರು ಖಾಲಿಕೊಡ ಪ್ರದರ್ಶಿಸಿ, ರಸ್ತೆತಡೆ ನಡೆಸಿದರು. ಸರ್ಕಾರದ ವಿರುದ್ಧ ಆಕ್ರೋಶ ಹೊರ ಹಾಕಿದರು.

ಕನಿಷ್ಠ ಸೌಲಭ್ಯವಾದ ಕುಡಿಯುವ ನೀರು ಕೊಡಲು ಸಾಧ್ಯವಾಗದ ಪಾಲಿಕೆಗೆ ಹಾಗೂ ಜನರ ಸಮಸ್ಯೆ ಆಲಿಸದ ಪಾಲಿಕೆ ಸದಸ್ಯರಿಗೆ, ಶಾಸಕರಿಗೆ ಧಿಕ್ಕಾರ ಎಂದು ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ನೀರು ಕೊಡದಿದ್ದರೆ ಮೇ 7ರಂದು ನಡೆಯಲಿರುವ ಲೋಕಸಭಾ ಚುನಾವಣೆ ಬಹಿಷ್ಕರಿಸುವುದಾಗಿ ಅವರೆಲ್ಲ ಎಚ್ಚರಿಕೆ ನೀಡಿದರು.

**10–15 ದಿನಕ್ಕೊಮ್ಮೆ ನೀರು ಪೂರೈಕೆ:** ಜಲಮಂಡಳಿ ಸುಪರ್ದಿಯಲ್ಲಿ ಇದ್ದಾಗ ಐದು ದಿನಕ್ಕೊಮ್ಮೆ ಕುಡಿಯುವ ನೀರು ಪೂರೈಸುತ್ತಿದ್ದರು. ಎರಡು ವರ್ಷದ ಹಿಂದೆ ಎಲ್ ಆಂಡ್ ಟಿ ಕಂಪನಿಗೆ ಹಸ್ತಾಂತರಿಸಿದ ನಂತರ, ಏಳು ದಿನಕ್ಕೊಮ್ಮೆ ನೀರು ಪೂರೈಸಲು ಆರಂಭಿಸಿದರು. ಎರಡು ತಿಂಗಳಿನಿಂದ 10–15 ದಿನಗಳಿಗೊಮ್ಮೆ ಪೂರೈಸಲಾಗುತ್ತಿದೆ. ಬೆಳಗ್ಗೆಯಿಂದ ಪಾಲಿಕೆಗೆ, ಎಲ್ ಆಂಡ್ ಟಿ ಕಂಪನಿಗೆ ದೂರು ನೀಡಿದರೂ ಯಾವುದೇ ಸ್ಪಂದನೆ ದೊರೆಯುತ್ತಿಲ್ಲ. ನಿವಾಸಿಗಳೆಲ್ಲ ಒಟ್ಟಾಗಿ ಚುನಾವಣೆ ಬಹಿಷ್ಕರಿಸಲು ತೀರ್ಮಾನಿಸಿದ್ದೇವೆ' ಎಂದು ನಿವಾಸಿ ಆಶಾ ವಿವರಿಸಿದರು.

**ಸಮಸ್ಯೆ ಆಲಿಸದ ಅಧಿಕಾರಿಗಳು:** ಡಾ. ಸಿ.ಪಿ. ಸಿಂಧೂರ ಮಾತನಾಡಿ, 'ಸ್ಥಳೀಯ ನಿವಾಸಿಗಳು ಪಾಲಿಕೆಗೆ ಸಾಕಷ್ಟು ದೂರು ನೀಡಿದ್ದರೂ, ಯಾರೊಬ್ಬರೂ ಸಮಸ್ಯೆ ಆಲಿಸುತ್ತಿಲ್ಲ. ಪಾಲಿಕೆ ಅಧಿಕಾರಿಗಳು, ಸದಸ್ಯರು, ಶಾಸಕರುಮಲಗಿದ್ದಾರೆ. ಕುಡಿಯುವ ನೀರಿಗಾಗಿ ಬೀದಿಗೆ ಇಳಿದು ಪ್ರತಿಭಟಿಸುವ ಪರಿಸ್ಥಿತಿ ಬಂದಿರುವುದು ದೊಡ್ಡ ದುರಂತ ಎಂದರು.



ಹುಬ್ಬಳ್ಳಿಯಲ್ಲಿನ ವಿದ್ಯಾನಗರದ ತಿಮ್ಮಸಾಗರ ಬಡಾವಣೆ ನಿವಾಸಿಗಳು ಕುಡಿಯುವ ನೀರಿಗಾಗಿ ಆಗ್ರಹಿಸಿ ಹೊಸೂರು ಕೋರ್ಟ್ ಎದುರು ಖಾಲಿಕೊಡ ಪ್ರದರ್ಶಿಸಿ, ರಸ್ತೆ ತಡೆ ನಡೆಸಿದರು.

ಹುಬ್ಬಳ್ಳಿಯಲ್ಲಿ ಅತಿಹೆಚ್ಚು ತೆರಿಗೆ ಪಾವತಿಸುವ ಬಡಾವಣೆ ನಮ್ಮದಾಗಿದ್ದು, ಕನಿಷ್ಠ ಸೌಲಭ್ಯವೂ ಸಿಗುತ್ತಿಲ್ಲ. ಏನೇನೋ ಗ್ಯಾರಂಟಿ ನೀಡುವ ಸರ್ಕಾರಕ್ಕೆ, ಕನಿಷ್ಠ ಸೌಲಭ್ಯವಾದ ನೀರು ಕೊಡಲು ಸಾಧ್ಯವಾಗುತ್ತಿಲ್ಲ. ಎಲ್ಲವೂ ಕೇಳಿಯೇ ಪಡೆಯಬೇಕಾದರೆ ತೆರಿಗೆ ಯಾಕೆ ಕಟ್ಟಿಸಿಕೊಳ್ಳಬೇಕು. ಜನಪ್ರತಿನಿಧಿಗಳು ವೋಟ್ ಕೇಳಲು ಬರುತ್ತಾರೆ, ಸೌಲಭ್ಯ ನೀಡಲು ಆಗುತ್ತಿಲ್ಲ' ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಡಾವಣೆಯ ಮೂವತ್ತಕ್ಕೂ ಹೆಚ್ಚು ನಿವಾಸಿಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ಅರ್ಧಗಂಟೆಗೂ ಹೆಚ್ಚು ಸಮಯ ವಾಹನಗಳ ಸಂಚಾರ ಸ್ಥಗಿತಗೊಳಿಸಿ ಪ್ರತಿಭಟನೆ ನಡೆಸಿದರು. ಮುಖಂಡರಾದ ಸಾವಿತ್ರಿ ನಾಯಕ, ಆಶಾ ಹುಬ್ಳೀಕರ್, ಮೈತ್ರಾ ಮುಂತಾದವರು ಭಾಗವಹಿಸಿದ್ದರು.

# ಪ್ರತಿಯೊಬ್ಬರೂ ವಿವೇಚನೆಯಿಂದ ಮತ ಚಲಾಯಿಸಿ: ಶರಣಪ್ಪ ಸಂಕನೂರ

**ಬಳ್ಳಾರಿ, ಮೇ 03:** ಮೇ 07 ರಂದು ನಡೆಯುವ ಲೋಕಸಭೆ ಚುನಾವಣೆಗೆ ಪ್ರತಿಯೊಬ್ಬರೂ ವಿವೇಚನೆಯಿಂದ ಮತ ಚಲಾಯಿಸಿ, ಉತ್ತಮ ನಾಯಕರನ್ನು ಆಯ್ಕೆ ಮಾಡಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿ ಆದ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಬಳ್ಳಾರಿ ತಾಲ್ಲೂಕು ಆಡಳಿತ, ತಾಲ್ಲೂಕು ಸ್ವೀಪ್ ಸಮಿತಿ ಇವರ ಆಶ್ರಯದಲ್ಲಿ ಹಲಕುಂದಿ ಗ್ರಾಮದ




ಮನರೇಗಾ ಕಾರ್ಮಿಕರಿಗೆ ಶುಕ್ರವಾರ ಏರ್ಪಡಿಸಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.ಮತದಾನ ಪ್ರತಿಯೊಬ್ಬ ಪ್ರಜೆಯ ಮೂಲ ಹಕ್ಕು. ಉತ್ತಮ ನಾಯಕನ ಆಯ್ಕೆ ಪ್ರತಿಯೊಬ್ಬ ಮತದಾರನ ಆದ್ಯ ಕರ್ತವ್ಯ. ನಿಮ್ಮ ಅಮೂಲ್ಯವಾದ ಮತವನ್ನು ಯಾವುದೇ ಆಸೆ–ಆಮಿಷಗಳಿಗೆ ಒಳಗಾಗಿ ಮಾರಿಕೊಳ್ಳಬೇಡಿ ಎಂದರು.

ಚುನಾವಣಾ ಹಬ್ಬವು, ಎಲ್ಲರ ಮನೆಯ ಹಬ್ಬವಿದ್ದಂತೆ. ಪ್ರತಿಯೊಬ್ಬರೂ ಪಾಲ್ಗೊಂಡು ಮತದಾನ ಮಾಡುವ ಮೂಲಕ ಶೇಕಡವಾರು ಮತದಾನ ಪ್ರಮಾಣ ಹೆಚ್ಚಳಕ್ಕೆ ಸಹಕರಿಸಬೇಕು ಎಂದು ಕರೆ ನೀಡಿದರು. ಮೇ 7 ರಂದು ನಡೆಯುವ ಮತದಾನ ದಿನದಂದು ಜಿಲ್ಲೆಯ ಎಲ್ಲಾ ಮತದಾನ ಕೇಂದ್ರಗಳಲ್ಲಿ ನೆರಳು, ಕುಡಿಯವ ನೀರು, ಶೌಚಾಲಯಗಳು ವ್ಯವಸ್ಥೆ ಹಾಗೂ ವಿಶೇಷವಾಗಿ ವೃದ್ಧರು, ಅಂಗವಿಕಲರು ಹಾಗೂ ಗರ್ಭಿಣಿಯರಿಗೆ ವಿಶೇಷ ವ್ಯವಸ್ಥೆ ಮಾಡಲಾಗಿದ್ದು, ಇದರ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.ಮತದಾನ ದಿನದಂದು ಬಿಸಿಲು ಹೆಚ್ಚಿರುವುದರಿಂದ ಆದಷ್ಟು ಬೆಳಗಿನ ಅವಧಿಯಲ್ಲಿಯೇ ಮತದಾನ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಬಳ್ಳಾರಿ ತಾಲ್ಲೂಕು ಸ್ವೀಪ್ ನೋಡೆಲ್ ಅಧಿಕಾರಿ ಹಾಗೂ ತಾಪಂ ಇಒ ಮಡಗಿನ ಬಸಪ್ಪ, ಪಿಡಿಒ ಪ್ರಭಾಕರ್, ಐಇಸಿ ರಮೇಶ್, ಟಿಸಿ ಮಹಾಂತೇಶ, ಟಿಎಮ್ಐಎಸ್ ಶೇಖರ್ ರೆಡ್ಡಿ, ಬಿಲ್ ಕಲೆಕ್ಟರ್ ಕೊಟ್ರಯ್ಯ, ಡಿಇಒ ರಾಜು ಸೇರಿದಂತೆ 700 ನರೇಗಾ ಕಾರ್ಮಿಕರು ಭಾಗವಹಿಸಿದ್ದರು.

# ರಾಜ್ಯದಲ್ಲಿ 448.98 ಕೋಟಿ ರೂ. ಮೊತ್ತದ ನಗದು, ಮದ್ಯ, ಡ್ರಗ್ಸ್, ಚಿನ್ನ ಬೆಳ್ಳಿ ಜಪ್ತಿ

**ಬೆಂಗಳೂರು, ಮೇ, 3:** ರಾಜ್ಯದ ಪ್ರಸಕ್ತ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ 448.98 ಕೋಟಿ ರೂ. ಮೊತ್ತದ ನಗದು, ಚಿನ್ನ, ಬೆಳ್ಳಿ, ಡ್ರಗ್ಸ್ , ಉಚಿತ ಉಡುಗೊರೆಗಳನ್ನು ಜಪ್ತಿ ಮಾಡಲಾಗಿದ್ದು, ಈ ಸಂಬಂಧ 2262 ಎಫ್.ಆರ್.ಐ ದಾಖಲಿಸಲಾಗಿದೆ. ಮೊದಲ ಹಂತದಲ್ಲಿ ನಡೆದ 14 ಲೋಕಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ನೀತಿಸಂಹಿತೆ ಸಡಿಲಿಸಲಾಗಿದ್ದು, ಇದೀಗ ಉತ್ತರ ಕರ್ನಾಟಕ ಭಾಗದ 14 ಕ್ಷೇತ್ರಗಳಲ್ಲಿ ಬಿಗಿ ಕಣ್ಗಾವಲು ಹಾಕಲಾಗಿದೆ.



ರಾಜ್ಯ ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ಪ್ರಕಟಣೆ ಪ್ರಕಾರ, 2029 ವಿವಿಧ ರೀತಿಯ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ. ಅಬಕಾರಿ ಇಲಾಖೆಯ ಘೋರ ಅಪರಾಧದಡಿಯಲ್ಲಿ 3,298 ಪ್ರಕರಣಗಳನ್ನು ದಾಖಲಿಸಲಾಗಿದ್ದು, ಪರವಾನಗಿ ಉಲ್ಲಂಘನೆಯಡಿ 5,392 ಪ್ರಕರಣಗಳನ್ನು ದಾಖಲಿಸಲಾಗಿದೆ. ಎನ್‌ಡಿಪಿಎಸ್ ಅಡಿಯಲ್ಲಿ 186 ಪ್ರಕರಣಗಳನ್ನು ಹಾಗೂ ಅಬಕಾರಿ ಕಾಯ್ದೆಯಡಿ 32,902 ಪ್ರಕರಣಗಳನ್ನು ದಾಖಲಿಸಲಾಗಿದೆ. ಕಳೆದ ಮಾರ್ಚ್ 16 ರಿಂದ ರಾಜ್ಯದಲ್ಲಿ ಮಾದರಿ ನೀತಿಸಂಹಿತೆ ಜಾರಿಗೆ ಬಂದಿದ್ದು, ಅಂದಿನಿಂದ ನಿಯಮ ಬಾಹಿರವಾಗಿ ಸಾಗಾಟ ಮಾಡುವ ಹಣ, ಮದ್ಯ, ಡ್ರಗ್ಸ್ , ಚಿನ್ನ, ಬೆಳ್ಳಿ ಹಾಗೂ ಇತರ ವಸ್ತುಗಳನ್ನು ನಿರಂತರವಾಗಿ ಜಪ್ತಿ ಮಾಡಲಾಗುತ್ತಿದೆ.

ನಿನ್ನೆಯವರೆಗೆ ಒಟ್ಟಾರೆ 448.98 ಕೋಟಿ ರೂ. ನಷ್ಟು ನಗದು, ಚಿನ್ನ, ಬೆಳ್ಳಿ ಹಾಗೂ ಇತರ ವಸ್ತುಗಳನ್ನು ಜಪ್ತಿ ಮಾಡಿಕೊಳ್ಳಲಾಗಿದೆ .ರಾಜ್ಯದಲ್ಲಿ ಮೊದಲ ಹಂತದ 14 ಕ್ಷೇತ್ರಗಳಲ್ಲಿ ಮತದಾನ ಮುಗಿದಿದ್ದು, 2ನೇ ಹಂತದ 14 ಕ್ಷೇತ್ರಗಳಿಗೆ ಮತದಾನ ನಡೆಯಲು ಇನ್ನೂ ನಾಲ್ಕು ದಿನ ಬಾಕಿ ಇದೆ. ರಾಜ್ಯದಲ್ಲಿ 141.10 ಕೋಟಿ ರೂ. ಮೊತ್ತದ ನಗದು, ಮದ್ಯ, ಡ್ರಗ್ಸ್ , ಚಿನ್ನ, ಬೆಳ್ಳಿ, ಉಚಿತ ಉಡುಗೊರೆಗಳನ್ನು ಪೊಲೀಸರು, ಕ್ಷಿಪ್ರಪಡೆಗಳು, ಸ್ಥಿರ ಕಣ್ಗಾವಲು ತಂಡಗಳು ವಶಪಡಿಸಿಕೊಂಡಿವೆ. ಅಬಕಾರಿ ಇಲಾಖೆಯವರು 178.58 ಕೋಟಿ ರೂ. ಮೌಲ್ಯದ ಮದ್ಯ, ಡ್ರಗ್ಸ್ ಅನ್ನು ಹಾಗೂ ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು 49.19 ಕೋಟಿ ರೂ. ಮೌಲ್ಯದ ನಗದು, ಚಿನ್ನ, ವಜ್ರದ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.

ವಾಣಿಜ್ಯ ತೆರಿಗೆ ಅಧಿಕಾರಿಗಳು 80.11 ಕೋಟಿ ರೂ. ಮೊತ್ತದ ಚಿನ್ನ, ಬೆಳ್ಳಿ, ಉಚಿತ ಉಡುಗೊರೆ ಹಾಗೂ ಇತರ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ. ಮಂಗಳೂರು ನಗರ ಸಿಸಿಬಿ ಪೊಲೀಸ್ ಠಾಣೆ ತಂಡದವರು, 20,35,000 ರೂ. ಮೌಲ್ಯದ 407 ಗ್ರಾಂ ಎಂಡಿಎಂಎ ಡ್ರಗ್ಸ್ ಅನ್ನು ವಶಪಡಿಸಿಕೊಂಡಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ವಿಜಯಪುರದಲ್ಲಿ ಬಿಜೆಪಿಯಿಂದ ಮಹಾಸಂಪರ್ಕ ಅಭಿಯಾನ

**ವಿಜಯಪುರ, ಮೇ. 03:** ಲೋಕಸಭಾ ಚುನಾವಣೆ ಹಿನ್ನೆಲೆ ವಿಜಯಪುರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ರಮೇಶ್ ಜಿಗಜಿಣಗಿ ಅವರ ಪರವಾಗಿ ವಾರ್ಡ್ ಸಂಖ್ಯೆ 29 ಹಾಗೂ 30 ರಲ್ಲಿ ಬಿಜೆಪಿ ಮಹಾಸಂಪರ್ಕ ಅಭಿಯಾನ ನಡೆಸಿ ಮನೆಮನೆಗೆ ಭೇಟಿ ನೀಡಿ ಮತಪ್ರಚಾರ ನಡೆಸಲಾಯಿತು.

ಮಹಾಸಂಪರ್ಕ ಅಭಿಯಾನ ಪ್ರಯುಕ್ತ ಬಿಜೆಪಿ ಕಾರ್ಯಕರ್ತರು ವಾರ್ಡ್ ಸಂಖ್ಯೆ 29 ಹಾಗೂ 30 ಎರಡೂ ವಾರ್ಡುಗಳ ವ್ಯಾಪ್ತಿಯಲ್ಲಿ ಪ್ರತಿ ಮನೆಮನೆಗೆ ತೆರಳಿ ಕಳೆದ ಹತ್ತು ವರ್ಷಗಳ ಕೇಂದ್ರ ಬಿಜೆಪಿ ಸರ್ಕಾರದ ಸಾಧನೆಗಳು, ಜನಪರ ಕಾರ್ಯಕ್ರಮಗಳ ಕರಪತ್ರಗಳನ್ನು ಹಂಚಿ ಬಿಜೆಪಿಗೆ ಬೆಂಬಲಿಸುವಂತೆ ಮನವಿ ಮಾಡಿಕೊಳ್ಳಲಾಯಿತು.



ಈ ವೇಳೆ ಬಿಜೆಪಿ ಬೆಳಗಾವಿ ವಿಭಾಗದ ಸಂಘಟನಾ ಪ್ರಭಾರಿ ಪ್ರಕಾಶ ಅಕ್ಕಲಕೋಟ, ವಿಜಯಪುರ ನಗರ ಮಂಡಲದ ಪ್ರಧಾನ ಕಾರ್ಯದರ್ಶಿ ಪಾಪು ಸಿಂಗ್ ರಜಪೂತ್ ಮುಖಂಡರಾದ ವಿಜಯಕುಮಾರ ಗಚ್ಚಿನಕಟ್ಟಿ, ಗಿರೀಶ ಬಿರಾದಾರ, ವೇಣುಗೋಪಾಲ ಜೋಶಿ, ವಿಜಯಪುರದ ವಿಸ್ತಾರಕ ವೀರೇಂದ್ರ ಏಕ್ಕೆಮಠ ,ವಿಕಾಸ ಪದಕಿ, ಸಚಿನ ಘಾಟಿಗೆ, ಕೋಲಕಾರ್, ಗುರುರಾಜ್ ಹಜೇರಿ, ನಿಂಗರಾಜ್ ಪಾಟೀಲ್, ಗುರು ಓಕಳಿ, ಗುಂಡು ಹಿಪ್ಪರಗಿ, ಲಕ್ಷ್ಮಣ್ ಮೋದಿ, ಶಿವರಾಜ್ ಪೂಜಾರಿ ಸೇರಿದಂತೆ ಹಲವಾರು ಬಿಜೆಪಿ ಕಾರ್ಯಕರ್ತರು ಹಾಗೂ ಬೆಂಬಲಿಗರು ಹಾಜರಿದ್ದರು.

# ಬಿಜೆಪಿಯವರು ಚಿತ್ತಾಪುರಕ್ಕೆ ಬಂದ್ರೆ ಖರ್ಗೆಗೆ ಯಾಕೆ ಹೆದರಿಕೆ: ವಿಜಯೇಂದ್ರ

**ಕಲಬುರಗಿ, ಮೇ. 3:** ಬಿಜೆಪಿಯವರು ಯಾರೇ ಚಿತ್ತಾಪುರಕ್ಕೆ ಬಂದರೆ ಸಚಿವ ಪ್ರಿಯಾಂಕ್ ಖರ್ಗೆಗೆ ಯಾಕೆ ಹೆದರಿಕೆ ನಾನು ಅನೇಕ ಬಾರಿ ಗಮನಿಸಿದ್ದೇನೆ. ಬಿಜೆಪಿಯವರು ಚಿತ್ತಾಪುರದಲ್ಲಿ ಏನೇ ಕಾರ್ಯಕ್ರಮ ಮಾಡಿದರೂ ಪ್ರಿಯಂಕ್ ಖರ್ಗೆ ಉರಿದು ಬೀಳುತ್ತಾರೆ. ಇದಕ್ಕೆ ಪ್ರಮುಖ ಕಾರಣ, ಚಿತ್ತಾಪುರದ ಜನರು ಅವರೊಂದಿಗಿಲ್ಲ ಎಂಬ ಕಾರಣಕ್ಕೆ ಅವರಿಗೆ ಹೆದರಿಕೆಯಾಗುತ್ತಿದೆ ಎಂಬುದು ಸ್ಪಷ್ಟವಗುತ್ತದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು.

ಜಿಲ್ಲೆಯ ಚಿತ್ತಾಪುರ ಪಟ್ಟಣದ ಕಡೆಚೂರ ಮೈದಾನದಲ್ಲಿ ಹಮ್ಮಿಕೊಂಡ ಬಿಜೆಪಿ ಅಭ್ಯರ್ಥಿ ಡಾ.ಉಮೇಶ ಜಾಧವ ಅವರ ಪರ ಪ್ರಚಾರ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಕಳೆದ ಲೋಕಸಭಾ ಚುನಾವಣೆಯಲ್ಲಿ ಚಿತ್ತಾಪುರ ವಿಧಾನಸಬಾ ಕ್ಷೇತ್ರದಿಂದಲೇ ಬಿಜೆಪಿಗೆ ಐದು ಸಆವಿರ ಲೀಡ್ ಸಿಕ್ಕಿತ್ತು. ಈ ಹೆದರಿಕೆ ಪ್ರಿಯಾಂಕ್ ಖರ್ಗೆ ಅವರಿಗೆ ಕಾಡುತ್ತಿದೆ. ಆದ್ದರಿಂದಲೇ ಬಿಜೆಪಿಯ ಚಿತ್ತಾಪುರದ ಯಾವುದೇ ಕಾರ್ಯಕ್ರಮಕ್ಕೆ ಪ್ರಿಯಾಂಕ್ ಖರ್ಗೆ ಅವರು ಬೆಚ್ಚಿಬೀಳುತ್ತಾರೆ ಎಂದರು.

ಪ್ರಧಾನಿ ನರೇಂದ್ರ ಮೋದಿಯವರನ್ನು ಮತ್ತೊಮ್ಮೆ ಪ್ರಧಾನಿಯನ್ನಾಗಿ ಮಾಡಲು ದೇಶದ ಜನರು ತೀರ್ಮಾನ ಮಾಡಿದ್ದಾರೆ. ಅದರಂತೆ ಚಿತ್ತಾಪುರ ಮತದಾರರೂ ತೀರ್ಮಾನಿಸಿದ್ದಾರೆ.



ಕಲಬುರಗಿ ಜಿಲ್ಲೆಯ ಚಿತ್ತಾಪುರದಲ್ಲಿ ಬಿಜೆಪಿ ಅಭ್ಯರ್ಥಿ ಡಾ.ಉಮೇಶ ಜಾಧವ ಪರ ಪ್ರಚಾರ ಸಾರ್ವಜನಿಕ ಸಭೆಯನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ.ವಿಜಯೇಂದ್ರ ಉದ್ಘಾಟಿಸಿದರು. ಡಾ.ಉಮೇಶ ಜಾಧವ ಮತ್ತಿತರ ಪ್ರಮುಖರಿದ್ದರು.

ಇದನ್ನು ಬದಲಿಸಲು ಪ್ರಿಯಾಂಕ್ ಖರ್ಗೆ ಮತ್ತು ಅವರ ತಂದೆ ಯಾರಿಂದಲೂ ಸಾಧ್ಯವಿಲ್ಲ. ದೇಶದ ಜನರು ಮೋದಿ ಅವರ ಪ್ರಾಮಾಣಿಕತೆ, ಶುದ್ಧ ಆಡಳಿತ, ವಿಶ್ವವೇ ಮೆಚ್ಚಿರುವ ಅವರ ವ್ಯಕ್ತಿತ್ವವನ್ನು ಮೆಚ್ಚಿಕೊಂಡಿದ್ದಾರೆ. ಆದ್ದರಿಂದ ಜನರ ಮನಸ್ಸನ್ನು ಬದಲಿಸುವುದು ಯಾರಿಂದಲೂ ಸಾಧ್ಯವಿಲ್ಲ ಎಂದರು.

ನಾನು ಡಾ. ಉಮೇಶ್ ಜಾಧವ್ ಅವರ ಪರವಾಗಿ ಪ್ರಚಾರಕ್ಕೆ ಬಂದಿದ್ದೇನೆ. ರಾಜ್ಯ ಮಾತ್ರವಲ್ಲದೆ, ರಾಷ್ಟ್ರದಾದ್ಯಂತ ಜನರು ದೇಶದ ಸುರಕ್ಷತೆ ಮತ್ತು ಅಭಿವೃದ್ಧಿಯ ದೃಷ್ಟಿಯಿಂದ ನರೇಂದ್ರ ಮೋದಿ 3ನೇ ಬಾರಿಗೆ ಮತ್ತೊಮ್ಮೆ ಪ್ರಧಾನಿ ಆಗಬೇಕೆಂದು ಬಯಸುತ್ತಿದ್ದಾರೆ ಎಂದು ಹೇಳಿದರು.

> **ಸಾಮಾನ್ಯ ಜನರಲ್ಲೂ ಮೋದಿಯವರ ನಾಯಕತ್ವದ ಕುರಿತು ವಿಶ್ವಾಸ ಹೆಚ್ಚಾಗಿದೆ. ಕಳೆದ 10 ವರ್ಷಗಳಲ್ಲಿ ಮೋದಿಯವರು ದೇಶದ ಪ್ರಧಾನಿಯಾದ ಬಳಿಕ ರಾಷ್ಟ್ರದ ಸರ್ವತೋಮುಖ ಅಭಿವೃದ್ಧಿಗೆ ಕೆಲಸ ಮಾಡುತ್ತಿದ್ದಾರೆ.**
> –ಬಿ. ವೈ. ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ.

ಕಿಸಾನ್ ಸಮ್ಮಾನ್ ಯೋಜನೆಯ 6 ಸಾವಿರ ರೂ. ಕೋವಿಡ್ ಸಂಕಷ್ಟದ ಸಂದರ್ಭದಲ್ಲಿಯೂ ನೇರವಾಗಿ ಖಾತೆಗೆ ಹಾಕಲಾಗುತ್ತಿತ್ತು. ಯಡಿಯೂರಪ್ಪ ಮುಖ್ಯಮಂತ್ರಿ ಇದ್ದಾಗ ರೈತರಿಗೆ ಅನುಕೂಲ ಆಗಲು ಹೆಚ್ಚುವರಿ 4 ಸಾವಿರ ಕೊಟ್ಟರು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣ ಆ ನಾಲ್ಕ ಸಾವಿರ ರೂಪಾಯಿ ನಿಲ್ಲಿಸಿದರು ಎಂದು ಟೀಕಿಸಿದರು.

ಉಚಿತ ವಿದ್ಯುತ್ ಎನ್ನುತ್ತಾರೆ. ಆದರೆ, ವಿದ್ಯುತ್ ದರ ದ್ವಿಗುಣಗೊಂಡಿದೆ. ಉಚಿತ ಬಸ್ ಪ್ರಯಾಣವೆನ್ನುತ್ತಾರೆ. ಬಸ್ ಟಿಕೆಟ್ ದರ ಶೇ 30–40ರಷ್ಟು ಜಾಸ್ತಿಯಾಗಿದೆ. ಸಬ್‌ರಿಜಿಸ್ಟ್ರಾರ್ ಕಚೇರಿಯಲ್ಲೂ ದರ ಏರಿಕೆ ಮಾಡಿದ್ದಾರೆ. ಕಾಂಗ್ರೆಸ್‌ನವರು ಒಂದು ಕೈಯಿಂದ ಕಿತ್ತುಕೊಂಡು ಇನ್ನೊಂದು ಕೈಯಿಂದ ಕೊಡುತ್ತಿದ್ದಾರೆ. ಕಾಂಗ್ರೆಸ್‌ನವರು ಜನರ ಕಿವಿಗೆ ಹೂವು ಇಡುವ ಕೆಲಸ ಮಾಡುತ್ತಿದ್ದಾರೆ. ಮೋದಿಯವರ ಜನಪರ ಯೋಜನೆಗಳನ್ನು ಗಮನಿಸಿ ಬಿಜೆಪಿ ಅಭ್ಯರ್ಥಿ ಡಾ.ಉಮೇಶ ಜಾಧವಗೆ ಮತ ಹಾಕಿ ಗೆಲ್ಲಿಸಬೇಕೆಂದು ಮನವಿ ಮಾಡಿದರು.

ಎಂಎಲ್‌ಸಿ ಬಿಜಿ ಪಾಟೀಲ್, ಮಾಜಿ ಸಚಿವ ಬಾಬುರಾವ ಚವ್ಹಾಣ, ಜಿಲ್ಲಾಧ್ಯಕ್ಷ ಶಿವರಾಜ್ ಪಾಟೀಲ್ ರದ್ದೇವಾಡಗಿ, ಹಿಂದುಳಿದ ವರ್ಗಗಳ ಮೋರ್ಚಾ ಜಿಲ್ಲಾ ಅಧ್ಯಕ್ಷ ಮಲ್ಲಿಕಾರ್ಜುನ ಎಮ್ಮೆನೂರ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಚಂದ್ರಶೇಖರ ಅವಂಟಿ, ಚಿತ್ತಾಪುರ ಮತಕ್ಷೇತ್ರದ ಚುನಾವಣೆ ಉಸ್ತುವಾರಿ ಶರಣಪ್ಪ ತಳವಾರ, ಲಿಂಗಾರೆಡ್ಡಿಗೌಡ ಭಾಸರೆಡ್ಡಿ, ಮುಖಂಡ ರಾಜು ಮುಕ್ಕಣ್ಣ, ಸುರೇಶ ಬೆನಕನಳ್ಳಿ ಮಾತನಾಡಿದರು.

ಬಿಜೆಪಿ ರಾಜ್ಯ ಕಾರ್ಯದರ್ಶಿ ಶರಣು ತಳ್ಳಿಕೆರೆ, ತಾಲೂಕು ಬಿಜೆಪಿ ಮಂಡಲ ಅಧ್ಯಕ್ಷ ರವೀಂದ್ರ ಸಜ್ಜನಶೆಟ್ಟಿ, ಪ್ರಮುಖರಾದ ವಿಠಲ ವಾಲ್ಮೀಕಿ ನಾಯಕ್, ಸೋಮಶೇಖರ ಪಾಟೀಲ್ ಬೆಳಗುಂಪಾ, ಬಸವರಾಜ ಬೆಣ್ಣೂರಕರ, ಮಲ್ಲಿನಾಥ ಇಂದೂರ, ಬಸವರಾಜ ಶಿವಗೋಳ, ನಾಗರಾಜ ಭಂಕಲಗಿ, ಜ್ಯೋತಿ ಸಿ ಗುರುನಾಥ, ಶಿವರಾಮ ಚವ್ಹಾಣ, ಚನ್ನಣ್ಣ ಬಾಳಿ, ಅಯ್ಯಪ್ಪ ರಾಮತೀರ್ಥ, ವಿಶ್ವನಾಥ ಅಫಜಲಪುರಕರ್, ಮಲ್ಲಿಕಾರ್ಜುನ ಪೂಜಾರಿ, ವೀರಣ್ಣ ಯಾರಿ, ಪ್ರಸಾದ ಅವಂಟಿ, ಶಂಕರ ಚವ್ಹಾಣ, ಸುರೇಶ ರಾಠೋಡ, ಇತರರಿದ್ದರು. ನಾಗರಾಜ ಹೂಗಾರ ನಿರೂಪಣೆ ಮಾಡಿದರು.

# ವಿಶ್ವಸಂಸ್ಥೆ ಮಹಾಸಭೆಯಲ್ಲಿ ಪಾಕ್‌ಗೆ ಚಳಿಬಿಡಿಸಿದ ಭಾರತ

**ವಿಶ್ವಸಂಸ್ಥೆ, ಮೇ 03:** ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಭಾರತದ ಕುರಿತು ಪಾಕಿಸ್ತಾನ ರಾಯಭಾರಿ ನೀಡಿದ 'ವಿನಾಶಕಾರಿ ಮತ್ತು ಅಪಾಯಕಾರಿ' ಹೇಳಿಕೆಗೆ ತೀಕ್ಷ್ಣವಾದ ಪ್ರತ್ಯುತ್ತರ ನೀಡಿದ ಭಾರತ, 'ಪಾಕಿಸ್ತಾನವು ಎಲ್ಲ ವಿಷಯಗಳಲ್ಲೂ ಅಪ್ರಾಮಾಣಿಕವಾಗಿ ನಡೆದುಕೊಂಡಿರುವ ಇತಿಹಾಸ ಹೊಂದಿದೆ' ಎಂದು ಚಾಟಿ ಬೀಸಿದೆ. ಸಾಮಾನ್ಯ ಸಭೆಯ 'ಶಾಂತಿ ಸಂಸ್ಕೃತಿ' ಕುರಿತ ಚರ್ಚೆಯಲ್ಲಿ ಭಾಷಣ ಮಾಡಿದ ಪಾಕಿಸ್ತಾನದ ರಾಯಭಾರಿ ಮುನೀರ್ ಅಕ್ರಂ, ಕಾಶ್ಮೀರ ವಿಷಯ, ಪೌರತ್ವ (ತಿದ್ದುಪಡಿ) ಕಾಯ್ದೆ ಮತ್ತು ಅಯೋಧ್ಯೆಯಲ್ಲಿನ ರಾಮ ಮಂದಿರ ಉಲ್ಲೇಖಿಸಿ ಟೀಕಿಸಿದರು. ಮುನೀರ್ ಅಕ್ರಂ ಅವರ ಟೀಕೆಯ ಹೇಳಿಕೆಗೆ ವಿಶ್ವಸಂಸ್ಥೆಯಲ್ಲಿ ಭಾರತದ ರಾಯಭಾರಿ, ಕಾಯಂ ಪ್ರತಿನಿಧಿಯಾಗಿರುವ ರುಚಿರಾ ಕಾಂಬೋಜ್ ಅವರು ಅಷ್ಟೇ ತೀಕ್ಷ್ಣವಾದ ಪ್ರತಿಕ್ರಿಯೆಯನ್ನು ನೀಡಿದ್ದಾರೆ.

'ಈ ಸಭೆಯಲ್ಲಿನ ಒಂದು ಅಂತಿಮ ಅಂಶವೆಂದರೆ, ಈ ಸವಾಲಿನ ಸಮಯದಲ್ಲಿ ನಾವು ಶಾಂತಿಯ ಸಂಸ್ಕೃತಿಯನ್ನು ಬೆಳೆಸಲು ಪ್ರಯತ್ನಿಸುತ್ತಿರುವಾಗ, ನಮ್ಮ ಗಮನವು ರಚನಾತ್ಮಕ ಮಾತುಕತೆ ಮೇಲೆ ಕೇಂದ್ರಿತವಾಗಿರುತ್ತದೆ. ಹೀಗಾಗಿ ನಾವು ನಿರ್ದಿಷ್ಟ ನಿಯೋಗದ (ಪಾಕಿಸ್ತಾನ) ಟೀಕೆಗಳನ್ನು ಬದಿಗಿರಿಸುತ್ತೇವೆ. ಇವು ಶೋಭೆ ಇಲ್ಲದ ಮಾತ್ರವಲ್ಲದೆ, ನಮ್ಮ ಸಾಮೂಹಿಕ ಪ್ರಯತ್ನಗಳಿಗೆ ಅಡ್ಡಿಮಾಡುವಂತಹ ವಿಧ್ವಂಸಕ ಮತ್ತು ವಿನಾಶಕಾರಿ ನಡವಳಿಕೆಯ ಹೇಳಿಕೆಗಳು' ಎಂದು ಕಾಂಬೋಜ್ ಗುರುವಾರ ಕಿಡಿಕಾರಿದರು. ದೇಶಗಳು ಪರಸ್ಪರ ಗೌರವಿಸಬೇಕು ಮತ್ತು ರಾಜತಾಂತ್ರಿಕ ಮಾರ್ಗ ಅನುಸರಿಸಬೇಕೆಂಬ ತತ್ವವನ್ನು ಅನುಸರಿಸಲು ಭಾರತ ಬಲವಾಗಿ ಪ್ರತಿಪಾದಿಸುತ್ತದೆ. ಇವೇ ನಮ್ಮ ಚರ್ಚೆಯ ಮಾರ್ಗದರ್ಶಿ ಸೂತ್ರಗಳು ಕೂಡ ಆಗಿರಬೇಕು.



ಆದರೆ, ಎಲ್ಲಾ ವಿಚಾರದಲ್ಲೂ ಅತ್ಯಂತ ಅಪ್ರಾಮಾಣಿಕವಾಗಿ ನಡೆದುಕೊಂಡಿರುವ ಇತಿಹಾಸವುಳ್ಳ ದೇಶವೊಂದರಿಂದ ಇಂಥದ್ದನ್ನು ನಿರೀಕ್ಷಿಸಲು ಸಾಧ್ಯವೇ ಎಂದು ಕಾಂಬೋಜ್ ಚಾಟಿ ಬೀಸಿದರು.

ಭಯೋತ್ಪಾದನೆಯು ಶಾಂತಿಯ ಸಂಸ್ಕೃತಿ ಮತ್ತು ಎಲ್ಲಾ ಧರ್ಮಗಳ ಮೂಲ ಬೋಧನೆಗಳಿಗೆ ನೇರ ವಿರೋಧಿ ಎಂದ ಕಾಂಬೋಜ್, ಶಾಂತಿಯ ಸಂಸ್ಕೃತಿ ಎನ್ನುವುದು ಸಹಾನುಭೂತಿ, ಪರಸ್ಪರ ತಿಳಿವಳಿಕೆ ಮತ್ತು ಸಹಬಾಳ್ವೆಯನ್ನು ಪ್ರತಿಪಾದಿಸುತ್ತದೆ ಎಂದು ಒತ್ತಿಹೇಳಿದರು. ಭಾರತವು ಹೆಮ್ಮೆಯಿಂದ ಪ್ರಾಯೋಜಿಸಿದ 'ಶಾಂತಿಯ ಸಂಸ್ಕೃತಿಯ ಘೋಷಣೆ ಮತ್ತು ಕಾರ್ಯಕ್ರಮದ ಅನುಸರಣೆ' ಎಂಬ ನಿರ್ಣಯವನ್ನು ಸಾಮಾನ್ಯ ಸಭೆಯಲ್ಲಿ ಮಂಡಿಸಿದ್ದಕ್ಕಾಗಿ ಬಾಂಗ್ಲಾದೇಶವನ್ನು ಭಾರತ ಶ್ಲಾಘಿಸಿದೆ.




# ಪ್ಯಾಲೆಸ್ಟೀನ್ ಪರ ಪ್ರತಿಭಟನೆ: 2,100ಕ್ಕೂ ಹೆಚ್ಚು ಬಂಧನ

**ಲಾಸ್ ಏಂಜಲೀಸ್, ಮೇ 03:** ಅಮೆರಿಕದಾದ್ಯಂತ ವಿವಿಧ ಕಾಲೇಜುಗಳ ಕ್ಯಾಂಪಸ್‌ಗಳಲ್ಲಿ ಈಚೆಗೆ ಪ್ಯಾಲೆಸ್ಟೀನ್ ಪರ ನಡೆದ ಪ್ರತಿಭಟನೆ ವೇಳೆ ಪೊಲೀಸರು 2,100ಕ್ಕೂ ಹೆಚ್ಚು ಜನರನ್ನು ಬಂಧಿಸಿದ್ದಾರೆ. ಕ್ಯಾಂಪಸ್ ಒಳಗಿದ್ದ ಪ್ರತಿಭಟನಕಾರರನ್ನು ಚದುರಿಸಲು ಅಧಿಕಾರಿಯೊಬ್ಬರು ಕೊಲಂಬಿಯಾ ವಿಶ್ವವಿದ್ಯಾಲಯದ ಆಡಳಿತ ಕಚೇರಿ ಒಳಗೇ ಗುಂಡು ಹಾರಿಸಿದ್ದರು. ಆದರೆ, ಇದರಿಂದ ಯಾರಿಗೂ ಹಾನಿಯಾಗಿಲ್ಲ ಎಂದು ಅಧಿಕಾರಿಯೊಬ್ಬರು ಖಚಿತಪಡಿಸಿದ್ದಾರೆ.

ಯಾವುದೇ ವ್ಯಕ್ತಿಯನ್ನು ಗುರಿಯಾಗಿಸಿಕೊಂಡು ಗುಂಡು ಹಾರಿಸಿರಲಿಲ್ಲ ಎಂದೂ ಅವರು ತಿಳಿಸಿದ್ದಾರೆ. ಹಮಾಸ್–ಇಸ್ರೇಲ್ ಯುದ್ಧ ನಿಲ್ಲಿಸುವಂತೆ ಏ.17ರಂದು ಕೊಲಂಬಿಯಾದಲ್ಲಿ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದ್ದರು. ಆ ನಂತರದಲ್ಲಿ ಹಲವು ವಿಶ್ವವಿದ್ಯಾಲಯಗಳು ಮತ್ತು ಕಾಲೇಜುಗಳಲ್ಲಿ ಇಂಥದ್ದೇ ಪ್ರತಿಭಟನೆಗಳು ನಡೆದವು. ಈ ಮಧ್ಯೆ ಪರ–ವಿರೋಧಿ ಗುಂಪುಗಳ ಮಧ್ಯೆ ಘರ್ಷಣೆ ಉಂಟಾಗಿತ್ತು.

# ಜ್ವಾಲಾಮುಖಿ ಸ್ಫೋಟ: 10 ಸಾವಿರ ಜನರ ಶಾಶ್ವತ ಸ್ಥಳಾಂತರಕ್ಕೆ ಇಂಡೋನೇಷ್ಯಾ ನಿರ್ಧಾರ

ಉತ್ತರ ಸುಲವೆಸಿ ಪ್ರಾಂತ್ಯದ ರುವಾಂಗ್ ದ್ವೀಪದಲ್ಲಿ ಸುಮಾರು 9,800 ಜನರು ವಾಸಿಸುತ್ತಿದ್ದಾರೆ, ಆದರೆ ಇತ್ತೀಚಿನ ವಾರಗಳಲ್ಲಿ ಪರ್ವತವು ಪ್ರಕಾಶಮಾನ ಲಾವಾ ಮತ್ತು ಬೂದಿ ಕಿಲೋಮೀಟರ್‌ಗಳ ಕಾಲಮ್‌ಗಳನ್ನು ಆಕಾಶಕ್ಕೆ ಉಗುಳುವುದನ್ನು ಮುಂದುವರಿಸುತ್ತಿರುವ ಹಿನ್ನೆಲೆ ಸುತ್ತಮುತ್ತಲಿನ ಎಲ್ಲಾ ನಿವಾಸಿಗಳನ್ನು ಸ್ಥಳಾಂತರಿಸಲು ಒತ್ತಾಯಿಸಲಾಗಿದೆ. ಜ್ವಾಲಾಮುಖಿಯ ಬಗ್ಗೆ ಜನತೆಗೆ ಗಂಭಿರ ಎಚ್ಚರಿಕೆ ನೀಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅದಲ್ಲದೆ ಮನಾಡೋದಲ್ಲಿನ ಪ್ರಾಂತೀಯ ವಿಮಾನ ನಿಲ್ದಾಣ ಮುಚ್ಚಲ್ಪಟ್ಟಿದ್ದಾರೆ ಮತ್ತು ಪರ್ವತದ ಭಾಗಗಳು ಸುತ್ತಮುತ್ತಲಿನ ನೀರಿನಲ್ಲಿ ಕುಸಿದರೆ ಸುನಾಮಿಯಾಗುವ ಸಂಭವವಿದೆ ಎಂಬುವುದರ ಕುರಿತು ಎಚ್ಚರಿಕೆ ನೀಡಿದ್ದಾರೆ.

ಸ್ಥಳಾಂತರಕ್ಕೆ ಅನುಕೂಲವಾಗುವಂತೆ ಬೋಲಾಂಗ್ ಮೊಂಗೋಂಡೌ ಪ್ರದೇಶದಲ್ಲಿ ನೂರಾರು "ಸರಳ ಆದರೆ



ಶಾಶ್ವತ" ಮನೆಗಳನ್ನು ನಿರ್ಮಿಸಲಾಗುವುದು ಎಂದು ಶುಕ್ರವಾರ ಜ್ವಾಲಾಮುಖಿಯ ಕುರಿತು ಚರ್ಚಿಸಲು ಕ್ಯಾಬಿನೆಟ್ ಸಭೆಯ ನಂತರ ಮಾನವ ಅಭಿವೃದ್ಧಿ ಸಚಿವ ಮುಹದ್ಜಿರ್ ಎಫೆಂಡಿ ತಿಳಿಸಿದ್ದಾರೆ. "ಅಧ್ಯಕ್ಷ ಜೋಕೊ ವಿಡೋಡೋ ಸೂಚನೆಯಂತೆ, ನಾವು ವಿಪತ್ತು–ಗುಣಮಟ್ಟಗಳನ್ನು ಪೂರೈಸುವ ಮನೆಗಳನ್ನು ನಿರ್ಮಿಸುತ್ತೇವೆ" ಮತ್ತು ಈ ಸೈಟ್ ರುವಾಂಗ್ ದ್ವೀಪದಿಂದ ಸುಮಾರು 200 ಕಿಮೀ (125 ಮೈಲುಗಳು) ಇದೆ, ಮೌಂಟ್ ರುವಾಂಗ್ ಕಳೆದ ತಿಂಗಳು ಸ್ಫೋಟಗೊಳ್ಳಲು ಪ್ರಾರಂಭಿಸಿತು , ಆಳವಾದ ಸಮುದ್ರದ ಭೂಕಂಪಗಳು ಸೇರಿದಂತೆ ಹೆಚ್ಚಿದ ಭೂಕಂಪನ ಚಟುವಟಿಕೆಯಿಂದ ಸ್ಫೋಟಗಳು ಉಂಟಾಗಿವೆ ಎಂದು ತಜ್ಞರು ಹೇಳಿದ್ದಾರೆ. ತಗುಲಾಂಡಾಂಗ್‌ನಲ್ಲಿರುವ ರಸ್ತೆಗಳು ಮತ್ತು ಕಟ್ಟಡಗಳು ಜ್ವಾಲಾಮುಖಿ ಬೂದಿಯ ದಪ್ಪ ಪದರದಲ್ಲಿ ಹೊದಿಕೆಯಾಗಿವೆ ಮತ್ತು ಕೆಲವು ಮನೆಗಳ ಛಾವಣಿಗಳು ಕುಸಿದಿವೆ.



ನವದೆಹಲಿಯಲ್ಲಿ ಶುಕ್ರವಾರ ನಡೆದ ಸಭೆಯಲ್ಲಿ ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಅನುರಾಗ್ ಠಾಕೂರ್ ಅವರು ಎಫ್‌ಐಡಿಇ ಅಭ್ಯರ್ಥಿಗಳು 2024ರ ವಿಜೇತ ಗ್ರ್ಯಾಂಡ್ ಮಾಸ್ಟರ್ ದೊಮ್ಮರಾಜು ಗುಕೇಶ್ ಅವರನ್ನು ಸ್ಮರಣಿಕೆಯೊಂದಿಗೆ ಸನ್ಮಾನಿಸಿದರು.

# ಹಿಂದೂ ಮಹಾಸಾಗರದಲ್ಲಿ ಚೀನಾದ ಬೇಹುಗಾರಿಕೆ ನೌಕೆ


**ನವದೆಹಲಿ, ಮೇ 03:** ಕುತಂತ್ರಿ ಚೀನಾ ತನ್ನ ನರಿ ಬುದ್ಧಿಯನ್ನು ಮುಂದುವರಿಸಿದಂತೆ ಕಾಣುತ್ತಿದೆ. ಹಿಂದೂ ಮಹಾಸಾಗರದ ಪ್ರದೇಶದಲ್ಲಿ ತನ್ನ 5ಕ್ಕೂ ಹೆಚ್ಚು ಯುದ್ಧನೌಕೆಗಳನ್ನು ಬೇಹುಗಾರಿಕೆ ಮಾಡಲು ಕಡಲಿಗಿಳಿಸಿದೆ ಎಂದು ವರದಿಯಾಗಿದೆ. ಕಡಲ್ಗಳ್ಳತನದ ವಿರುದ್ಧ ಹೋರಾಟಲು ಈ ಬೇಹುಗಾರಿಕೆ ಹಡುಗಗಳನ್ನು ಗಸ್ತಿಗೆ ನಿಯೋಜಿಸಿದೆ ಎಂದು ಮೇಲ್ನೋಟಕ್ಕೆ ಅಂದಾಜಿಸಲಾಗುತ್ತಿದೆ. ಇದಲ್ಲದೇ ತನ್ನ ಹಿಂದೂ ಮಹಸಾಗರ ವ್ಯಾಪ್ತಿಯಲ್ಲಿ ತನ್ನ ಹಿಡಿತ ಸಾಬೀತು ಮಾಡಲು ಚೀನಾ ಈ ಹಡಗುಗಳನ್ನು ಕಳುಹಿಸಿದೆ ಎನ್ನಲಾಗುತ್ತಿದೆ. ಜಿಬೌಟಿ, ಮಾಲೆ, ಸೆಶೆಲ್ಸ್, ಕೋಕೋ, ಹಾಗೂ ಡರ್ಬನ್ ದ್ವೀಪಗಳ ಸಮೀಪ ಚೀನಾದ ಈ ನೌಕೆಗಳು ಕಾರ್ಯಾಚರಿಸುತ್ತಿದೆ. ಇಂದು ದ್ವೀಪದಿಂದ ಮತ್ತೊಂದು ದ್ವೀಪವು ಸಾವಿರಾರು ಮೈಲುಗಳಷ್ಟು ದೂರವಿದ್ದು, ಚೀನಾ ಈ ಎಲ್ಲಾ ಪ್ರದೇಶಗಳಲ್ಲಿ ತನ್ನ ಅಸ್ತಿತ್ವ ಸಾಬೀತುಪಡಿಸಲು ಈ ತಂತ್ರಗಾರಿಕೆ ಮಾಡಿದೆ ಎನ್ನಲಾಗಿದೆ, ಅತ್ಯಾಧುನಿಕ ತಂತ್ರಜ್ಞಾನ, ಸೆನ್ಸಾರ್‌ಗಳನ್ನು ಈ ನೌಕೆಗಳು ಹೊಂದಿವೆಯಂತೆ. ಚೀನಾದ ಸಂಶೋಧನಾ ಹಡುಗಗಳು ಎನ್ನಲಾಗುತ್ತಿದೆಯಾದರೂ, ಇವು ಬೇಹುಗಾರಿಕೆ ಮಾಡುತ್ತಿವೆ ಎಂಬ ಆರೋಪ ಕೇಳಿಬಂದಿದೆ.

ಕಳೆದ ಫೆಬ್ರವರಿ 8ರಂದು ಚೀನಾದ ಬೇಹುಗಾರಿಕಾ ಹಡಗು ಮಾಲ್ಡೀವ್ಸ್‌ನ ರಾಜಧಾನಿ ಮಾಲೆ ತಲುಪಿತ್ತು. ಅದು ಸಂಶೋಧನಾ ನೌಕೆಯಲ್ಲ ಬೇಹುಗಾರಿಕೆಗೆ ಬಳಕೆಯಾಗುತ್ತಿದೆ ಎಂದು ಆಗ ವರದಿಯಾಗಿತ್ತು.



# ಚೀನಾ: ಚಂದ್ರನತ್ತ ಚಾಂಗಿ–6 ಗಗನನೌಕೆ ಉಡ್ಡಯನ

**ಬೀಜಿಂಗ್, ಮೇ 03:** ಭೂಮಿಗೆ ಗೋಚರವಾಗದ, ಚಂದ್ರನ ಮತ್ತೊಂದು ಪಾರ್ಶ್ವದಿಂದ ಮಾದರಿಗಳನ್ನು ಸಂಗ್ರಹಿಸಿ ತರುವ ಉದ್ದೇಶದ 'ಚಾಂಗಿ–6' ಗಗನನೌಕೆಯನ್ನು ಚೀನಾ ಶುಕ್ರವಾರ ಉಡ್ಡಯನ ಮಾಡಿದೆ. ಚೀನಾದ ದಕ್ಷಿಣದಲ್ಲಿನ ಹೈನಾನ್ ಪ್ರಾಂತ್ಯದ ಕರಾವಳಿಯಲ್ಲಿರುವ ವೆಂಚಾಂಗ್ ಅಂತರಿಕ್ಷ ಉಡ್ಡಯನ ಕೇಂದ್ರದಿಂದ ಗಗನನೌಕೆಯನ್ನು ಹೊತ್ತ 'ಮಾರ್ಚ್–5 ವೈ8' ರಾಕೆಟ್ ನಭಕ್ಕೆ ಚಿಮ್ಮಿತು ಎಂದು ಚೀನಾ ರಾಷ್ಟ್ರೀಯ ಬಾಹ್ಯಾಕಾಶ ಸಂಸ್ಥೆ (ಸಿಎನ್‌ಎಸ್‌ಎ) ತಿಳಿಸಿದೆ. ಭೂಮಿಗೆ ಕಾಣದಂತಹ ಚಂದಿರನ ಮತ್ತೊಂದುಭಾಗದಿಂದ ಮಾದರಿಗಳನ್ನು ಸಂಗ್ರಹಿಸಿ, ತರುವ ಇಂತಹ ಬಾಹ್ಯಾಕಾಶ ಕಾರ್ಯಕ್ರಮ ಚಂದ್ರನ ಅನ್ವೇಷಣೆಯಲ್ಲಿಯೇ ಇದೇ ಮೊದಲ ಬಾರಿಗೆ ನಡೆಯುತ್ತಿದೆ ಎಂದು ಸಿಎನ್‌ಎಸ್‌ಎ ಹೇಳಿದೆ. 'ಚಾಂಗಿ–6' ಗಗನನೌಕೆಯು, ಆರ್‌ಬಿಟರ್, ಲ್ಯಾಂಡರ್, ಅಸೆಂಡರ್ ಹಾಗೂ ಭೂಮಿ ಮರಳಲಿರುವ ಘಟಕ ಎಂಬ ನಾಲ್ಕು ಉಪಕರಣಗಳನ್ನು ಹೊಂದಿದೆ ಎಂದು ಮಾಧ್ಯಮಗಳು ವರದಿ ಮಾಡಿವೆ. ಚಂದಿರನ ಮತ್ತೊಂದು ಬದಿಯಲ್ಲಿನ ಶಿಲೆಗಳು, ದೂಳಿನ ಕಣಗಳನ್ನು ಸಂಗ್ರಹಿಸಲಾಗುವುದು. ಈ ಮಾದರಿಗಳನ್ನು 'ಅಸೆಂಡರ್', ಭೂಮಿಗೆ ತರಲಿದ್ದು, ನಂತರ ಅವುಗಳನ್ನು ವೈಜ್ಞಾನಿಕ ಅಧ್ಯಯನಕ್ಕೆ ಒಳಪಡಿಸಲಾಗುವುದು ಎಂದು ಸಿಎನ್‌ಎಸ್‌ಎ ತಿಳಿಸಿದೆ.



# ಬ್ಯಾಡ್ಮಿಂಟನ್: ಭಾರತದ ಆಟಕ್ಕೆ ತೆರೆ

ಚೆಂಗ್ಡು (ಚೀನ): ಥಾಮಸ್ ಕಪ್ ಮತ್ತು ಉಬೆರ್ ಕಪ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಭಾರತದ ಆಟ ಕ್ವಾರ್ಟರ್ ಫೈನಲ್ನಲ್ಲಿ ಕೊನೆಗೊಂಡಿದೆ. ಕಳೆದ ವರ್ಷ ಥಾಮಸ್ ಕಪ್ ಗೆದ್ದು ಇತಿಹಾಸ ನಿರ್ಮಿಸಿದ ಪುರುಷರ ತಂಡ ಆತಿಥೇಯ ಚೀನ ವಿರುದ್ಧ 1–3 ಅಂತರದ ಸೋಲುಂಡು ಹೊರಬಿತ್ತು. ಇದಕ್ಕೂ ಮುನ್ನ ಉಬೆರ್ ಕಪ್ನಲ್ಲಿ ವನಿತಾ ತಂಡ ಜಪಾನ್ ಕೈಯಲ್ಲಿ 0–3 ಅಂತರದ ಸೋಲನುಭವಿಸಿತು. ಎಚ್.ಎಸ್. ಪ್ರಣಯ್, ಚಿರಾಗ್ ಶೆಟ್ಟಿ–ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಸೋಲನುಭವಿಸಿದ ಬಳಿಕ ಲಕ್ಷ್ಯ ಸೇನ್ ಭಾರತವನ್ನು ಹಳಿಗೆ ಏರಿಸಿದರು. ಅವರು 13–21, 21–8, 21–14ರಿಂದ ಲೀ ಶಿ ಫೆಂಗ್ ವಿರುದ್ಧ ಗೆದ್ದು ಬಂದರು. ಆದರೆ ಧ್ರುವ ಕಪಿಲ–ಸಾಯಿ ಪ್ರತೀಕ್ ಜೋಡಿ ಯಶಸ್ಸು ಕಾಣಲಿಲ್ಲ. ಉಬೆರ್ ಕಪ್ನಲ್ಲಿ ಅಶ್ಮಿತಾ ಚಾಲಿಹಾ 11ನೇ ರ್ಯಾಂಕಿಂಗ್ನ ಅಯಾ ಒಹೊರಿ ವಿರುದ್ಧ ದಿಟ್ಟ ಹೋರಾಟ ನೀಡಿದ್ದೊಂದೇ ಭಾರತದ ಪಾಲಿನ ಸಮಾಧಾನಕರ ಸಂಗತಿ. ಇದನ್ನು ಅಶ್ಮಿತಾ 10–21, 22–20, 15–21ರಿಂದ ಕಳೆದುಕೊಂಡರು. 20 ವರ್ಷದ ಇಶಾರಾಣಿ ಮಾಜಿ ನಂ.1 ಆಟ?ಗಾರ್ತಿ ನೊಜೊಮಿ ಒಕುಹಾರ ವಿರುದ್ಧ 15–21, 12–21 ಅಂತರದ ಸೋಲನುಭವಿಸಿದರು. ಡಬಲ್ಸ್‌ನಲ್ಲಿ ರಾಷ್ಟ್ರೀಯ ಚಾಂಪಿಯನ್ಗಳಾದ ಪ್ರಿಯಾ ಕೆ.–ಶ್ರುತಿ ಮಿಶ್ರಾ 8–21, 9–21ರಿಂದ ವಿಶ್ವದ 4ನೇ ರ್ಯಾಂಕಿಂಗ್ ಜೋಡಿಯಾದ ನಾಮಿ ಮಟ್ಸುಯಾಮಾ–ಚಿಹಾರು ಶಿಡಾ ಅವರಿಗೆ ಶರಣಾದರು.

ಸಿಂಧು ಅವರ ಅನುಪಸ್ಥಿತಿಯ ಹೊರತಾಗಿಯೂ ಲೀಗ್ ಹಂತದಲ್ಲಿ ಕೆನಡಾ ಮತ್ತು ಸಿಂಗಾಪುರ ವಿರುದ್ಧ ಭಾರತ ಜಯ ಸಾಧಿಸಿತ್ತು. ಆದರೆ ಚೀನಕ್ಕೆ ಅಂತಿಮ ಲೀಗ್ ಪಂದ್ಯದಲ್ಲಿ ಶರಣಾಗಿತ್ತು.

ಭಾರತ ಈವರೆಗೆ ಕೇವಲ 3 ಸಲ ಉಬೆರ್ ಕಪ್ ಪಂದ್ಯಾವಳಿಯ ಸೆಮಿಫೈನಲ್ ತಲುಪಿದೆ. ಕೊನೆಯ ಸಲ ಉಪಾಂತ್ಯ ಕಂಡದ್ದು 2016ರಲ್ಲಿ. ಇದಕ್ಕೂ ಮುನ್ನ 1957 ಮತ್ತು 2014ರಲ್ಲಿ ಸೆಮಿಫೈನಲ್ ತನಕ ಸಾಗಿತ್ತು.







# ಭಾರತ ಮಹಿಳಾ ಹಾಕಿ ತಂಡಕ್ಕೆ ಸಲೀಮಾ ನಾಯಕಿ

**ನವದೆಹಲಿ, ಮೇ 03:** ಮಿಡ್ಫೀಲ್ಡರ್ ಸಲಿಮಾ ಟೇಟೆ ಅವರನ್ನು ಭಾರತ ಮಹಿಳಾ ಹಾಕಿ ತಂಡಕ್ಕೆ ನಾಯಕಿಯನ್ನಾಗಿ ಗುರುವಾರ ಆಯ್ಕೆ ಮಾಡಲಾಗಿದೆ. ಭಾರತ ತಂಡವು ಈ ತಿಂಗಳ ಕೊನೆಯಲ್ಲಿ ಎಫ್‌ಐಎಚ್ ಪ್ರೊ ಲೀಗ್‌ನ ಬೆಲ್ಜಿಯಂ ಮತ್ತು ಇಂಗ್ಲೆಂಡ್ ಲೀಗ್‌ನಲ್ಲಿ ಪಾಲ್ಗೊಳ್ಳಲಿದೆ. 'ತಂಡವನ್ನು ಮುನ್ನಡೆಸಲು ನನ್ನನ್ನು ನೇಮಕ ಮಾಡಿರುವುದು ಸಂತಸ ತಂದಿದೆ. ಇದು ದೊಡ್ಡ ಜವಾಬ್ದಾರಿ. ನಮ್ಮ ತಂಡ ಬಲಿಷ್ಠವಾಗಿದ್ದು, ಅನುಭವಿ ಮತ್ತು ಯುವ ಆಟಗಾರ್ತಿಯರ ಮಿಶ್ರಣವಾಗಿದೆ' ಎಂದು ಸಲಿಮಾ ಹೇಳಿರುವುದಾಗಿ ಹಾಕಿ ಇಂಡಿಯಾ ತಿಳಿಸಿದೆ.

ನವನೀತ್ ಕೌರ್ ಅವರು ತಂಡದ ಉಪನಾಯಕಿಯಾಗಿದ್ದಾರೆ. ಗೋಲ್ ಕೀಪರ್ ಸವಿತಾ ಪೂನಿಯಾ ಅವರು ಈವರೆಗೆ ತಂಡದ ನಾಯಕಿಯಾಗಿದ್ದರು. ತವರಿನಲ್ಲಿ ನಡೆದ ಒಲಿಂಪಿಕ್ ಅರ್ಹತಾ ಟೂರ್ನಿ ಹಾಗೂ ನಂತರ ಪ್ರೊ ಲೀಗ್‌ನಲ್ಲಿ ಸವಿತಾ ನೇತೃತ್ವದ ಭಾರತ ತಂಡ ಸತತ ವೈಫಲ್ಯ ಕಂಡಿತ್ತು. ರಕ್ಷಣಾ ಆಟಗಾರ್ತಿ ಗುರ್ಜಿತ್ ಕೌರ್, ಮಿಡ್ಫೀಲ್ಡರ್ಗಳಾದ ಸೋನಿಕಾ, ನಿಶಾ ಮತ್ತು ಫಾರ್ವರ್ಡ್ ಬ್ಯೂಟಿ ಡುಂಗ್ಡುಂಗ್ ಅವರನ್ನು ಕೈಬಿಡಲಾಗಿದೆ. ಮಹಿಮಾ ಚೌಧರಿ, ಮನಿಷಾ ಚೌಹಾನ್, ಪ್ರೀತಿ ದುಬೆ ಮತ್ತು ದೀಪಿಕಾ ಸೊರೆಂಗ್ ಹೊಸದಾಗಿ ಅವಕಾಶ ಪಡೆದಿದ್ದಾರೆ.

ಬೆಲ್ಜಿಯಂನಲ್ಲಿ ಪ್ರೊ ಲೀಗ್ ಪಂದ್ಯಗಳು ಮೇ 22ರಿಂದ 26ರವರೆಗೆ ನಡೆಯಲಿವೆ. ಇಂಗ್ಲೆಂಡ್ ಲೆಗ್ನ ಪಂದ್ಯಗಳು ಜೂನ್ 1 ರಿಂದ 9ರವರೆಗಿನ ಅವಧಿಯಲ್ಲಿ ನಡೆಯಲಿವೆ. ಮೊದಲ ಲೀಗ್‌ನಲ್ಲಿ ಭಾರತವು ಆರ್ಜೆಂಟಿನಾ, ಬೆಲ್ಜಿಯಂ ತಂಡಗಳ ವಿರುದ್ಧ ತಲಾ ಎರಡು ಬಾರಿ ಆಡಲಿದೆ. ಇಂಗ್ಲೆಂಡ್ ಲೀಗ್‌ನಲ್ಲಿ ಭಾರತವು ಗ್ರೇಟ್ ಬ್ರಿಟನ್ ಮತ್ತು ಜರ್ಮನಿ ವಿರುದ್ಧ ಆಡಲಿದೆ. ಭಾರತವು ಸದ್ಯ ಪ್ರೊ ಲೀಗ್‌ನಲ್ಲಿ ಎಂಟು ಪಂದ್ಯಗಳಿಂದ ಎಂಟು ಪಾಯಿಂಟ್ಸ್ ಕಲೆಹಾಕಿ ಆರನೇ ಸ್ಥಾನದಲ್ಲಿದೆ.




**ತಂಡ ಹೀಗಿದೆ:**

**ಗೋಲ್ಕೀಪರ್ಸ್:** ಸವಿತಾ ಪೂನಿಯಾ, ಬಿಚುದೇವಿ ಕರಿಬಮ್; ಡಿಫೆಂಡರ್ಸ್: ನಿಕ್ಕಿ ಪ್ರಧಾನ್, ಉದಿತಾ, ಇಶಿಕಾ ಚೌಧರಿ, ಮೋನಿಕಾ, ಜ್ಯೋತಿ ಚೆಟ್ರಿ, ಮಹಿಮಾ ಚೌಧರಿ.

**ಮಿಡ್ಫೀಲ್ಡರ್ಸ್:** ಸಲಿಮಾ ಟೇಟೆ (ಕ್ಯಾಪ್ಟನ್), ವೈಷ್ಣವಿ ವಿಠ್ಠಲ್ ಫಾಲ್ಕೆ, ನವನೀತ್ ಕೌರ್ (ಉಪನಾಯಕಿ), ನೇಹಾ, ಜ್ಯೋತಿ, ಬಲಜೀತ್ ಕೌರ್, ಮನಿಷಾ ಚೌಹಾನ್, ಲಾಲ್ರೆಮ್ಸಿಯಾನಿ. ಫಾರ್ವರ್ಡ್ಸ್: ಮುಮ್ತಾಜ್ ಖಾನ್, ಸಂಗಿತಾ ಕುಮಾರಿ, ದೀಪಿಕಾ, ಶರ್ಮಿಳಾ ದೇವಿ, ಪ್ರೀತಿ ದುಬೆ, ವಂದನಾ ಕಟಾರಿಯಾ, ಸುನೆಲಿಟಾ ಟೊಪ್ಪೊ, ದೀಪಿಕಾ ಸೊರೆಂಗ್.

# ಭಾರತಕ್ಕೆ 22 ಪದಕ ಖಚಿತ

**ಅಸ್ತಾನಾ (ಕಜಕಸ್ತಾನ), ಮೇ 03:** ಬ್ರಿಜೇಶ್ ತಮ್ಟಾ ಮತ್ತು ಆರ್ಯನ್ ಅವರು ಇತರ ಐವರು ಬಾಕ್ಸರ್‌ಗಳ ಜೊತೆ ಏಷ್ಯಾ 22 ವರ್ಷದೊಳಗಿನವರ ಮತ್ತು ಯುವ ಬಾಕ್ಸಿಂಗ್ ಚಾಂಪಿಯನ್‌ಷಿಪ್‌ನಲ್ಲಿ ಯುವ ವಿಭಾಗದಲ್ಲಿ ಶುಕ್ರವಾರ ಫೈನಲ್ ತಲುಪಿದರು. ಇದರೊಂದಿಗೆ ವಿವಿಧ ವಿಭಾಗಗಳಲ್ಲಿ ಭಾರತಕ್ಕೆ 22 ಪದಕಗಳು ಖಚಿತವಾಗಿವೆ. ಈ 22 ರಲ್ಲಿ ಮಹಿಳಾ ವಿಭಾಗದಲ್ಲಿ ಖಚಿತಗೊಂಡಿರುವ 12 ಪದಕಗಳು ಸೇರಿವೆ. ಬ್ರಿಜೇಶ್ 48 ಕೆ.ಜಿ. ವಿಭಾಗದಲ್ಲಿ ಮಂಗೋಲಿಯಾದ ತಾಲೈಬೆಕ್ ಇಸುರ್ ಅವರನ್ನು 5–0 ಯಿಂದ ಸೋಲಿಸಿದರು. ರಾಹುಲ್ ಕುಂದು (75 ಕೆ.ಜಿ), ಆರ್ಯನ್ (92 ಕೆ.ಜಿ) ಅವರು ಕ್ರಮವಾಗಿ ಚೀನಾದ ಕಂಜಿಬಾಯಿ ಎರ್ಸಿ ಮತ್ತು ಕಿರ್ಗಿಸ್ತಾನದ ಅಲಿಬಯೇವ್ ಟಿನಿಸ್ತಾನ್ ಅವರನ್ನು ಸರ್ವಾನುಮತದ ತೀರ್ಪಿನಲ್ಲಿ ಸೋಲಿಸಿದರು. ಸಾಗರ್ ಜಾಖರ್ (60 ಕೆ.ಜಿ.ವಿಭಾಗ) ಅವರೂ ಮುನ್ನಡೆದರು. ಆರ್ಯನ್ (51 ಕೆ.ಜಿ), ಯಶವರ್ಧನ್ (63.5ಕೆ.ಜಿ) ಮತ್ತು ಪ್ರಿಯಾಂಶು (71 ಕೆ.ಜಿ) ಕೂಡ ಜಯಗಳಿಸಿದರು.



**ಕಂಚಿನ ಪದಕ:**

ಸುಮಿತ್ (67 ಕೆ.ಜಿ) ಮತ್ತು ಸಾಹಿಲ್ (80 ಕೆ.ಜಿ) ಅವರು ಕ್ರಮವಾಗಿ ಕಜಕಸ್ತಾನದ ಸಬಿರ್ಖಾನ್ ತೊರೆಖಾನ್ ಮತ್ತು ಕಿರ್ಗಿಸ್ತಾನದ ಝುಕಿರೋವ್ ಮುಖಮದಾಝಿಜ್ ಅವರಿಗೆ 0–5 ರಿಂದ ಸೋತು ಕಂಚಿನ ಪದಕ ಗಳಿಸಿದರು. ಯುವ ಮತ್ತು 22 ವರ್ಷದೊಳಗಿನವರ ವಿಭಾಗದ ಅಂತಿಮ ಪಂದ್ಯಗಳು ಕ್ರಮವಾಗಿ ಸೋಮವಾರ ಮತ್ತು ಮಂಗಳವಾರ ನಡೆಯಲಿವೆ.